ಬೀದರ | ಕಲಬುರಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಸಾರ Postal Reg. No. BDR/054/2026-2027 Email: mallammanudi@gmail.com E-paper: www.mallammanudi.in

# ಮಲ್ಲಮ್ಮ ನುಡಿ

ಸತ್ಯಮೇವ ಜಯತೆ

ಪ್ರಾದೇಶಿಕ ಕನ್ನಡ ದಿನಪತ್ರಿಕೆ

ಸಂಪಾದಕರು: ರಮೇಶರೆಡ್ಡಿ | 9448 604450

Mallammanudi Regional News Paper | Editor: Ramesh Reddy | RNI NO:KARKAN/2011/48371

VOLUME - 13 ಸಂಪುಟ-13 | ISSUE - 145 ಸಂಚಿಕೆ- 145 | PAGE- 8 ಪುಟ-8 | ಶುಕ್ರವಾರ 18.07.2025 | RS.2/- ಬೆಲೆ 2/-

# ಇಡಿಯಿಂದ ಕೈ ಶಾಸಕನ ಆಸ್ತಿ ಮುಟ್ಟುಗೋಲು

ಮಲ್ಲಮ್ಮ ನುಡಿ ವಾರ್ತೆ ನವದೆಹಲಿ:ಜು.17: 2023 ರಲ್ಲಿ ಕೋಲಾರ-ಚಿಕ್ಕಬಳ್ಳಾಪುರಜಿಲ್ಲಾಸಹಕಾರಿ ಹಾಲುಉತ್ಪಾದಕರಒಕ್ಕೂಟನಿಯಮಿತ (ಕೋಮುಲ್) ನೇಮಕಾತಿಯಲ್ಲಿ ನಡೆದ ಅಕ್ರಮಗಳಿಗೆ ಸಂಬಂಧಿಸಿದ ಪ್ರಕರಣದಲ್ಲಿ ಕಾಂಗ್ರೆಸ್ ಶಾಸಕ ಕೆ ವೈ ನಂಜೇಗೌಡ ಅವರ 1.32 ಕೋಟಿ ರೂ. ಮೌಲ್ಯದ ಆಸ್ತಿಯನ್ನು ಮುಟ್ಟುಗೋಲು ಹಾಕಿಕೊಳ್ಳಲಾಗಿದೆ ಎಂದು ಜಾರಿ ನಿರ್ದೇಶನಾಲಯ ಗುರುವಾರ ತಿಳಿಸಿದೆ.

ಕೋಲಾರ ಜಿಲ್ಲೆಯ ಮಾಲೂರು ಕ್ಷೇತ್ರದ ಶಾಸಕ ನಂಜೇಗೌಡ ಅವರು ಕೋಮುಲ್‌ನ ಅಧ್ಯಕ್ಷರಾಗಿದ್ದಾರೆ.

ನೇಮಕಾತಿ ಪ್ರಕ್ರಿಯೆಯನ್ನು ಕೋಮುಲ್ ನಡೆಸಿದ್ದು, ಅದು ಲಿಖಿತ ಪರೀಕ್ಷೆ ಮತ್ತು ಸಂದರ್ಶನವನ್ನು ಒಳಗೊಂಡಿತ್ತು ಎಂದು ಇಡಿ ಹೇಳಿದೆ.

ಹಣ ಅಥವಾ ರಾಜಕೀಯ ವ್ಯಕ್ತಿಗಳ ಶಿಫಾರಸಿನ ಮೇಲೆ ನೇಮಕಾತಿ ನಡೆಸಲಾಗಿದೆ. ಪ್ರತಿಯೊಬ್ಬ ಅಭ್ಯರ್ಥಿಗೂ ಕೂಡ ರಾಜಕಾರಣಿಗಳ ಶಿಫಾರಸು ಪತ್ರ ನೀಡಲಾಗಿತ್ತು. ಇ.ಡಿ ದಾಳಿ ವೇಳೆ ಶಿಫಾರಸು ಪತ್ರ ಸಮೇತ ದಾಖಲಾತಿಗಳನ್ನು



ವಶಪಡಿಸಿಕೊಳ್ಳಲಾಗಿದೆ.

ನಂಜೇಗೌಡ ಮತ್ತು ಕೆ.ಎನ್. ಗೋಪಾಲ ಮೂರ್ತಿ(ಕೋಮುಲ್ ವ್ಯವಸ್ಥಾಪಕ ನಿರ್ದೇಶಕಿ) ನೇತೃತ್ವದ ನೇಮಕಾತಿ ಸಮಿತಿಯು ಸಂಸ್ಥೆಯ ಇತರ ನಿರ್ದೇಶಕರೊಂದಿಗೆ ಪಿತೂರಿ ನಡೆಸಿ, ಕೆಲವು ಅನರ್ಹ ಅಭ್ಯರ್ಥಿಗಳನ್ನು ನೇಮಕ ಮಾಡಲಾಗಿದೆ. ಇದರಿಂದ ಅರ್ಹ ಅಭ್ಯರ್ಥಿಗಳು ಕೆಲಸದಿಂದ ವಂಚಿತರಾಗಿದ್ದಾರೆ ಎಂದು ಇಡಿ ಆರೋಪಿಸಿದೆ.

ಹಣ ವರ್ಗಾವಣೆ ತಡೆ ಕಾಯ್ದೆ(ಪಿಎಂಎಲ್ಎ) ಅಡಿಯಲ್ಲಿ ನಂಜೇಗೌಡರ 1.32 ಕೋಟಿ ರೂ. ಆಸ್ತಿಯನ್ನು

ಮುಟ್ಟುಗೋಲು ಹಾಕಿಕೊಳ್ಳಲು ತಾತ್ಕಾಲಿಕ ಆದೇಶ ಹೊರಡಿಸಲಾಗಿದೆ ಎಂದು ಇಡಿ ತಿಳಿಸಿದೆ.

ಕೋಮುಲ್ ನೇಮಕಾತಿಯಲ್ಲಿ ಹಗರಣ ಸಂಬಂಧ ಸುಮಾರು 75 ಅಭ್ಯರ್ಥಿಗಳಿಂದ ಹಣ ಪಡೆದಿದ್ದಾರೆ. ಮಂಗಳೂರು ಯೂನಿವರ್ಸಿಟಿಯ ಸಿಬ್ಬಂದಿ ಜೊತೆಗೆ

ಅವ್ಯವಹಾರ ಮಾಡಲಾಗಿತ್ತು ಎಂಬ ಆರೋಪ

ಕೇಳಿಬಂದಿತ್ತು.

# ಬೈಕ್-ಕಾರು ಡಿಕ್ಕಿ 7 ಜನರ ದುರ್ಮರಣ





ಮಲ್ಲಮ್ಮನುಡಿವಾರ್ತೆ ನಾಸಿಕ್,ಜು.17: ಕಾರು ಮತ್ತು ಮೋಟಾರ್‌ಬೈಕ್ ಡಿಕ್ಕಿ ಹೊಡೆದ ಪರಿಣಾಮ 2 ವರ್ಷದ ಮಗು ಸೇರಿದಂತೆ ಏಳು ಜನರು ಸಾವನ್ನಪ್ಪಿ ಹಲವಾರು ಮಂದಿ ಗಾಯಗೊಂಡಿರುವ ಘಟನೆ ಮಹಾರಾಷ್ಟ್ರದ ನಾಸಿಕ್‌ನಲ್ಲಿ ನಡೆದಿದೆ. ನಾಸಿಕ್‌ನಲ್ಲಿ ಹುಟ್ಟುಹಬ್ಬದ ಆಚರಣೆಯಲ್ಲಿ ಭಾಗವಹಿಸಿ ಸಂತ್ರಸ್ತರು ತಮ್ಮ ಗ್ರಾಮಕ್ಕೆ ಹಿಂತಿರುಗುತ್ತಿದ್ದಾಗ ಮಧ್ಯರಾತ್ರಿಯ ಸುಮಾರಿಗೆ ಈ ದುರಂತ ಸಂಭವಿಸಿದೆ.

ಅಪಘಾತದಲ್ಲಿ ಮೃತಪಟ್ಟವರನ್ನು ದೇವಿದಾಸ್ ಪಂಡಿತ್ ಗಂಗುರ್ಡೆ (28),ಮನೀಷಾ ದೇವಿದಾಸ್ ಗಂಗುರ್ಡೆ (23), ಭವೇಶ್ ದೇವಿದಾಸ್ ಗಂಗುರ್ಡೆ (2), ಉತ್ತಮ್ ಏಕನಾಥ್ ಜಾಧವ್ (42), ಅಲ್ಕಾ ಉತ್ತಮ್ ಜಾಧವ್ (38), ದತ್ತಾತ್ರೆಯ ನಾಮದೇವ್ ವಾಘಮಾರೆ (45), ಅನುಸೂಯಾ ದತ್ತಾತ್ರೆಯ ವಾಘಮಾರೆ (40) ಎಂದು ಗುರುತಿಸಲಾಗಿದೆ. ಇದರಲ್ಲಿ ದೇವಿದಾಸ್?, ಮನೀಷಾ ಮತ್ತು ಭವೇಶ್ ಗಂಗುರ್ಡೆ ಒಂದೇ ಕುಟುಂಬದ ಸದಸ್ಯರಾಗಿದ್ದರು.

ಡಿಕ್ಕಿ ಹೊಡೆದ ನಂತರ ಮೋಟಾರ್ ಸೈಕಲ್‌ನಲ್ಲಿದ್ದ ಮಂಗೇಶ್ ಯಶವಂತ್ ಕುರ್ಘಾಡೆ (25) ಮತ್ತು ಅಜಯ್ ಜಗನ್ನಾಥ್ ಗೊಂಡ್ (18) ಗಾಯಗೊಂಡಿದ್ದು, ಪ್ರಸ್ತುತ ನಾಸಿಕ್ ಜಿಲ್ಲಾ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ. ದಿಂಡೋರಿ ಪ್ರದೇಶದಲ್ಲಿ ಮಾರುತಿ ಆಲ್ಟೊ ಕಾರು ಮೋಟಾರ್ ಸೈಕಲ್‌ಗೆ ಡಿಕ್ಕಿ ಹೊಡೆದ ಪರಿಣಾಮ ಕಾರು ರಸ್ತೆ ಬದಿಯ ಕಾಲುವೆಗೆ ಉರುಳಿ ಬಿದ್ದಿದೆ. ಮೃತರಲ್ಲಿ ಮೂವರು ಮಹಿಳೆಯರು, ಮೂವರು ಪುರುಷರು ಮತ್ತು ಕಾರಿನಲ್ಲಿದ್ದ ಒಂದು ಮಗು ಸೇರಿದೆ. ಮೋಟಾರ್ ಸೈಕಲ್‌ನಲ್ಲಿದ್ದ ಇಬ್ಬರು ಗಾಯಗೊಂಡಿದ್ದಾರೆ. ಡಿಕ್ಕಿಯ ನಂತರ ಆಲ್ಟೊ ಕಾರು ಕಾಲುವೆಗೆ ಬಿದ್ದಿದೆ. ನೀರಿನಲ್ಲಿ ಮುಳುಗಿದ ವಾಹನದೊಳಗೆ ಸಿಲುಕಿಕೊಂಡ ನಂತರ ಕಾರಿನಲ್ಲಿದ್ದ ಏಳು ಮಂದಿಯೂ ನೀರಿನಲ್ಲಿ ಮುಳುಗಿ ಸಾವನ್ನಪ್ಪಿದ್ದಾರೆ. ಇದರಲ್ಲಿ ಯಾರೊಬ್ಬರೂ ತಪ್ಪಿಸಿಕೊಳ್ಳಲು ಸಾಧ್ಯವಾಗಲಿಲ್ಲ. ಮೂಗು ಮತ್ತು ಬಾಯಿ ಒಳಗೆ ಹೆಚ್ಚಿನ ಪ್ರಮಾಣದ ನೀರು ಒಳಹೋಗಿದ್ದರಿಂದ ಸಾವನ್ನಪ್ಪಿದ್ದಾರೆ ಎಂದು ಹೇಳಲಾಗಿದೆ.

# ನಿರಂತರ ಮಳೆಗೆ ಕುಸಿದ ಮನೆ : ಒಂದೂವರೆ ವರ್ಷದ ಮಗು ಸಾವು, ಆರು ಜನರಿಗೆ ಗಾಯ

ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ:ಜು.17: ಜಿಲ್ಲೆಯಲ್ಲಿ ಸುರಿದ ಭಾರೀ ಮಳೆಗೆ ಮನೆ ಕುಸಿದು ಒಂದೂವರೆ ವರ್ಷದ ಮಗು ಸಾವನ್ನಪ್ಪಿರುವ ಘಟನೆ ಗಂಗಾವತಿ ತಾಲೂಕಿನ ಹೆಬ್ಬಾಳ ಗ್ರಾಮದಲ್ಲಿ ನಡೆದಿದೆ. ಪ್ರಶಾಂತಿ ಮೃತ ಮಗು. ಗಾಯಾಳುಗಳನ್ನು ಹನುಮಂತಿ (28), ದುರಗಮ್ಮ(65), ಭೀಮಮ್ಮ (19), ಹುಸೇನಪ್ಪ(46), ಫಕೀರಪ್ಪ ಎಂದು ಗುರುತಿಸಲಾಗಿದೆ.

ಬುಧವಾರ ಜಿಲ್ಲೆಯಲ್ಲಿ ಸುರಿದ





ನಿರಂತರ ಮಳೆಯಿಂದಾಗಿ ಮನೆ ಕುಸಿದ ಪರಿಣಾಮ ಮನೆಯಲ್ಲಿದ್ದ ಮಗು ಸಾವನ್ನಪ್ಪಿದ್ದು, ಇನ್ನುಳಿದ ಆರು ಜನರು ಗಾಯಗೊಂಡಿದ್ದಾರೆ. ಸದ್ಯ ಗಾಯಾಳುಗಳನ್ನು ಗಂಗಾವತಿ ತಾಲೂಕಾಸ್ಪತ್ರೆಗೆ ದಾಖಲಿಸಲಾಗಿದ್ದು, ಚಿಕಿತ್ಸೆ ಪಡೆಯುತ್ತಿದ್ದಾರೆ.

ಸ್ಥಳಕ್ಕೆ ತಹಶೀಲ್ದಾರ್ ಯು.ನಾಗರಾಜ್ ಹಾಗೂ ಗಂಗಾವತಿ

ಗ್ರಾಮೀಣ ಪೊಲೀಸರು

ಭೇಟಿ ನೀಡಿ, ಪರಿಶೀಲನೆ ನಡೆಸಿದ್ದಾರೆ.

# ಕಾಲ್ತುಳಿತ: ತನಿಖಾ ಸಮಿತಿ ವರದಿ ಬಗ್ಗೆ ಮುಂದಿನ ಸಚಿವ ಸಂಪುಟ ಸಭೆಯಲ್ಲಿ ನಿರ್ಧಾರ



ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು:ಜು.17: ಜೂನ್ 4 ರಂದು 11 ಖಅಃ ಅಭಿಮಾನಿಗಳ ಸಾವಿಗೆ ಕಾರಣವಾದ ಬೆಂಗಳೂರಿನ ಚಿನ್ನಸ್ವಾಮಿ ಕ್ರೀಡಾಂಗಣದ ಬಳಿ ಸಂಭವಿಸಿದ ಕಾಲ್ತುಳಿತ ದುರಂತದ ತನಿಖೆಗಾಗಿ ರಾಜ್ಯ ಸರ್ಕಾರ ರಚಿಸಿದ್ದ ಏಕವ್ಯಕ್ತಿ ತನಿಖಾ ಆಯೋಗದ ತನಿಖಾ ವರದಿಯನ್ನು ಗುರುವಾರ ರಾಜ್ಯ ಸಚಿವ ಸಂಪುಟದ ಮುಂದೆ ಇಡಲಾಗಿದ್ದು, ಮುಂದಿನ ಸಭೆಯಲ್ಲಿ ಅದರ ಬಗ್ಗೆ ಚರ್ಚಿಸಿ ನಿರ್ಧರಿಸಲಾಗುವುದು ಎಂದು ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವ ಎಚ್ ಕೆ ಪಾಟೀಲ್ ಅವರು ತಿಳಿಸಿದ್ದಾರೆ.

ಇಂದು ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದಲ್ಲಿ ನಡೆದ ಸಚಿವ ಸಂಪುಟ ಸಭೆಯ ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಎಚ್ ಕೆ ಪಾಟೀಲ್ ಅವರು, "ನ್ಯಾಯಮೂರ್ತಿ ಕುನ್ಹಾ ಅವರ ವರದಿಯನ್ನು ಸಂಪುಟ ಸ್ವೀಕರಿಸಿದೆ. ಮುಂದಿನ ಸಚಿವ ಸಂಪುಟದಲ್ಲಿ ನಾವು ಇದನ್ನು ಅಧ್ಯಯನ ಮಾಡಿ ಚರ್ಚಿಸುತ್ತೇವೆ ಮತ್ತು ನಂತರದ ನಿರ್ಧಾರಗಳನ್ನು ನಿಮಗೆ (ಮಾಧ್ಯಮಕ್ಕೆ) ತಿಳಿಸುತ್ತೇವೆ"

(2ನೇ ಪುಟ ನೋಡಿ)

# ಲೋ ಬಿಪಿ: ಮಹಿಳಾ ಪೇದೆ ಹಠಾತ್ ಸಾವು



ಮಲ್ಲಮ್ಮ ನುಡಿ ವಾರ್ತೆ ಬೀದರ.

ಜು. 17 : ಹೃದಯಾಘಾತದಿಂದ ಸಾವಿನ ಸರಣಿ ಮುಂದುವರೆದಿರುವ ನಡುವೆಯೇ ಲೋ ಬಿಪಿಯಿಂದ ಮೃತಪಡುತ್ತಿರುವ

ಪ್ರಕರಣಗಳು ಹೆಚ್ಚುತ್ತಿವೆ. ಮಹಿಳಾ ಪೊಲೀಸ್ ಕಾನ್ಸ್‌ಟೇಬಲ್ ಓರ್ವರು ಲೋಬಿಪಿಯಿಂದ ಸಾವನ್ನಪ್ಪಿರುವ ಘಟನೆ ನಡೆದಿದೆ. 28 ವರ್ಷದ ಸರಿತಾ ಮೃತ

(2ನೇ ಪುಟ ನೋಡಿ)

# ಹೆಚ್‌ಡಿಕೆ ವಿರುದ್ಧದ ನ್ಯಾಯಾಂಗ ನಿಂದನೆ ಪ್ರಕರಣ ವಿಚಾರಣೆಗೆ ಸುಪ್ರೀಂ ತಡೆ

ಮಲ್ಲಮ್ಮನುಡಿವಾರ್ತೆ ನವದೆಹಲಿ:ಜು.17: ಬಿಡದಿ ಬಳಿಯ ಕೇತಗಾನಹಳ್ಳಿಯಲ್ಲಿ ಒತ್ತುವರಿ ವಿಚಾರವಾಗಿ ಕೇಂದ್ರ ಸಚಿವ ಹೆಚ್.ಡಿ. ಕುಮಾರಸ್ವಾಮಿ ವಿರುದ್ಧದ ನ್ಯಾಯಾಂಗ ನಿಂದನೆ ಪ್ರಕರಣದ ವಿಚಾರಣೆಗೆ ಸುಪ್ರೀಂ ಕೋರ್ಟ್ ತಡೆಯಾಜ್ಞೆ ನೀಡಿದೆ.

ಕರ್ನಾಟಕ ಹೈಕೋರ್ಟ್ ಆದೇಶ ಪ್ರಶ್ನಿಸಿ ಅವರು ಸುಪ್ರೀಂ ಕೋರ್ಟ್ ಮೊರೆ ಹೋಗಿದ್ದರು. ಅರ್ಜಿ ವಿಚಾರಣೆ ನಡೆಸಿದ ನ್ಯಾಯಮೂರ್ತಿ ಪಂಕಜ್ ಮಿತ್ತಲ್ ಹಾಗೂ ಪ್ರಸನ್ನ ಬಿ. ವರಾಳೆ ಅವರಿದ್ದ ಪೀಠವು ಮುಂದಿನ ಆದೇಶದವರೆಗೂ ಪ್ರಕರಣದ ವಿಚಾರಣೆಗೆ ತಡೆ ನೀಡಿದೆ.

ಪೀಠವು ಸಮಾಜ ಪರಿವರ್ತನ ಸಮುದಾಯ ಸಂಸ್ಥೆಗೆ ನೋಟಿಸ್ ಜಾರಿ ಮಾಡಿದೆ. ಲೋಕಾಯುಕ್ತ ತನಿಖೆ ಮುಕ್ತಾಯಗೊಂಡಿರುವ ಹಿನ್ನೆಲೆಯಲ್ಲಿ, ನ್ಯಾಯಾಂಗ ನಿಂದನೆ ವಿಚಾರಣೆ ಮುಂದುವರಿಸುವುದರ

(2ನೇ ಪುಟ ನೋಡಿ)

# ದೇಶದ 'ಸ್ವಚ್ಛ ನಗರ' ಪಟ್ಟಿಯಲ್ಲಿ ಇಂದೋರ್ ನಂ.1 - ಮೈಸೂರಿಗೆ 3ನೇ ಸ್ಥಾನ



ಮಲ್ಲಮ್ಮ ನುಡಿ ವಾರ್ತೆ ನವದೆಹಲಿ:ಜು.17: ದೇಶದ ಸ್ವಚ್ಛ ನಗರಗಳ ಪಟ್ಟಿಯಲ್ಲಿ ಮಧ್ಯಪ್ರದೇಶದ ಇಂದೋರ್ ಮೊದಲ ಸ್ಥಾನ ಪಡೆದುಕೊಂಡಿದೆ. ಕರ್ನಾಟಕದ ಮೈಸೂರು 3ನೇ ಸ್ಥಾನದಲ್ಲಿದೆ.

ಗುರುವಾರ ಸ್ವಚ್ಛ ಸರ್ವೇಕ್ಷಣ್ 2024-25 ಪ್ರಶಸ್ತಿಗಳನ್ನು ಘೋಷಿಸಲಾಯಿತು. ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು 'ಸೂಪರ್ ಸ್ವಚ್ಛ ಲೀಗ್ ನಗರಗಳಲ್ಲಿ' ಇಂದೋರ್ ಅನ್ನು ಅತ್ಯಂತ ಸ್ವಚ್ಛ ನಗರವೆಂದು ಘೋಷಿಸಲಾಗಿದೆ.

ಇಂದೋರ್ ಮೊದಲ ಸ್ಥಾನದಲ್ಲಿದ್ದರೆ, ಛತ್ತೀಸಗಢದ ಅಂಬಿಕಾಪುರ 2 ಹಾಗೂ ಕರ್ನಾಟಕದ ಮೈಸೂರು 3 ಸ್ಥಾನ ಪಡೆದುಕೊಂಡಿವೆ. ಹತ್ತು ಲಕ್ಷ ಜನಸಂಖ್ಯೆಯ ವಿಭಾಗದಲ್ಲಿ ಸ್ವಚ್ಛ ನಗರವಾಗಿ ಗುಜರಾತ್‌ನ ಅಹಮದಾಬಾದ್ ಹೊರಹೊಮ್ಮಿದೆ. ಛತ್ತೀಸಗಢದ ರಾಯ್ಪುರ, ಮಹಾರಾಷ್ಟ್ರದ ನವಿ ಮುಂಬೈ, ಮಧ್ಯಪ್ರದೇಶದ ಜಬಲ್ಪುರ, ಗುಜರಾತ್‌ನ ಸೂರತ್ ನಂತರದ ಸ್ಥಾನದಲ್ಲಿವೆ.

'ಸೂಪರ್ ಲೀಗ್' ವಿಭಾಗವು ಹೊಸದಾಗಿ ಸೇರ್ಪಡೆಯಾಗಿದೆ.

(2ನೇ ಪುಟ ನೋಡಿ)

# ಭಾರತದಿಂದ ಆಕಾಶ್ ಪ್ರೈಮ್ ಕ್ಷಿಪಣಿ ಯಶಸ್ವಿ ಪರೀಕ್ಷೆ



ಮಲ್ಲಮ್ಮನುಡಿವಾರ್ತೆ ನವದೆಹಲಿ:ಜು.17: ಭಾರತೀಯ ಸೇನೆ ಲಡಾಖ್‌ನಲ್ಲಿ ಆಕಾಶ್ ಪ್ರೈಮ್ ಕ್ಷಿಪಣಿಯನ್ನು ಯಶಸ್ವಿಯಾಗಿ ಪರೀಕ್ಷಿಸಿದೆ ಎಂದು ರಕ್ಷಣಾ ಸಚಿವಾಲಯ ಗುರುವಾರ ತಿಳಿಸಿದೆ. ಭಾರತೀಯ ಸೇನೆಗಾಗಿ ಈ ಆಕಾಶ್ ಕ್ಷಿಪಣಿ ವ್ಯವಸ್ಥೆಯನ್ನು ನವೀಕರಿಸಲಾಗಿದ್ದು, 4,500 ಮೀಟರ್ ಎತ್ತರದಲ್ಲಿ ಕಾರ್ಯನಿರ್ವಹಿಸುವಂತೆ ಕಸ್ಟಮೈಸ್ ಮಾಡಲಾಗಿದೆ.

"ಭಾರತ, ಜುಲೈ 16 ರಂದು ಲಡಾಖ್‌ನಲ್ಲಿ ಎರಡು ವೈಮಾನಿಕ ಹೈಸ್ಪೀಡ್ ಮಾನವರಹಿತ ಗುರಿಗಳನ್ನು ನವೀಕರಿಸಿದ ರೂಪಾಂತರವಾದ ಆಕಾಶ್ ಪ್ರೈಮ್ ಯಶಸ್ವಿಯಾಗಿ ನಾಶಪಡಿಸುವ ಮೂಲಕ ಮಹತ್ವದ ಮೈಲಿಗಲ್ಲು ಸಾಧಿಸಿದೆ" ಎಂದು ಸಚಿವಾಲಯ ತಿಳಿಸಿದೆ.

ಇದು ಭಾರತದ

ವಾಯು ರಕ್ಷಣಾ ಸಾಮರ್ಥ್ಯಗಳಿಗೆ ಪ್ರಮುಖ ಉತ್ತೇಜನ ಕ್ರಮವಾಗಿದೆ. ಭಾರತೀಯ ಸೇನೆಯು ಇಂದು ಲಡಾಖ್ ನಲ್ಲಿ ಸ್ಥಳೀಯವಾಗಿ ಅಭಿವೃದ್ಧಿಪಡಿಸಲಾದ ಆಕಾಶ್ ಪ್ರೈಮ್, ಮೇಲ್ಮೈಯಿಂದ ಆಕಾಶಕ್ಕೆ ಚಿಮ್ಮುವ ಕ್ಷಿಪಣಿ ವ್ಯವಸ್ಥೆಯ ಉನ್ನತ-ಎತ್ತರದ ಪ್ರಯೋಗಗಳನ್ನು ಯಶಸ್ವಿಯಾಗಿ ನಡೆಸಿತು ಎಂದ ಸಚಿವಾಲಯ ತಿಳಿಸಿದೆ.

# ಕಾಂಗ್ರೆಸ್ ಪ್ರಧಾನಿ ಅಭ್ಯರ್ಥಿ ಬಗ್ಗೆ ಬಿಜೆಪಿಗೇಕೆ ಚಿಂತೆ:ಬಿವೈವಿಗೆ ಸಿಎಂ ತಿರುಗೇಟು

ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು:ಜು.17: ಕಾಂಗ್ರೆಸ್ ಪಕ್ಷದಲ್ಲಿ ಪ್ರಧಾನಮಂತ್ರಿ ಯಾರು ಆಗಬೇಕೆನ್ನುವುದನ್ನು ನಮ್ಮ ಪಕ್ಷ ನಿರ್ಧರಿಸುತ್ತದೆ. ಅದರ ಬಗ್ಗೆ ಬಿಜೆಪಿ ತಲೆಕೆಡಿಸಿಕೊಳ್ಳುವ ಅಗತ್ಯ ಇಲ್ಲ. ಕಳೆದ ಲೋಕಸಭಾ ಚುನಾವಣೆಯಲ್ಲಿ ಒಬ್ಬನೇ ಒಬ್ಬ ಮುಸ್ಲಿಂ ನಾಯಕನಿಗೆ ಯಾಕೆ ಟಿಕೆಟ್ ಕೊಟ್ಟಿಲ್ಲ ಎನ್ನುವ ಪ್ರಶ್ನೆಗಳಿಗೆ ಉತ್ತರ ಕೊಡಲು ಸಾಧ್ಯವೇ? ಎಂದು ಬಿಜೆಪಿ ರಾಜ್ಯಾಧ್ಯಕ್ಷ ವಿಜಯೇಂದ್ರಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ತಿರುಗೇಟು ನೀಡಿದ್ದಾರೆ.

ಕಾಂಗ್ರೆಸ್ ಪಕ್ಷಕ್ಕೆ ನಿಜವಾಗಿಯೂ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಮತ್ತು ಇತರ ಹಿಂದುಳಿದ ವರ್ಗಗಳ ಬಗ್ಗೆ ಕಾಳಜಿ ಇದ್ದರೆ ಮಲ್ಲಿಕಾರ್ಜುನ ಖರ್ಗೆಯವರನ್ನು ಪ್ರಧಾನಮಂತ್ರಿ ಅಭ್ಯರ್ಥಿ ಎಂದು ಘೋಷಿಸಲಿ ಎಂಬ ವಿಜಯೇಂದ್ರ ಅವರ ಸವಾಲಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಪ್ರತಿಕ್ರಿಯಿಸಿದ್ದಾರೆ.

ಈ ಕುರಿತು ಸಾಮಾಜಿಕ ಜಾಲತಾಣ ಎಕ್ಸ್ ನಲ್ಲಿ ಸರಣಿ ಪೋಸ್ಟ್ ಮಾಡಿರುವ ಅವರು, ತಾನು ಕೂತಿರುವ ಕುರ್ಚಿಯ ನಾಲ್ಕು ಕಾಲುಗಳನ್ನು ಭದ್ರವಾಗಿ ಇಟ್ಟುಕೊಳ್ಳಲಾಗದ ಬಿಜೆಪಿ ರಾಜ್ಯಾಧ್ಯಕ್ಷ ವಿಜಯೇಂದ್ರ ಅವರು ಕಾಂಗ್ರೆಸ್ ಪಕ್ಷದ ಪ್ರಧಾನಿ ಅಭ್ಯರ್ಥಿ ಯಾರಾಗಬೇಕೆಂದು ಸಲಹೆ ನೀಡುತ್ತಿರುವುದು ಅವರ ಅಜ್ಞಾನ ಮತ್ತು ಆತ್ಮವಂಚನೆಯನ್ನು



ಮಾತ್ರವಲ್ಲ, ದುರಹಂಕಾರವನ್ನೂ ಸೂಚಿಸುತ್ತದೆ ಎಂದು ಹೇಳಿದ್ದಾರೆ.

ವಿಜಯೇಂದ್ರ ಅವರಿಗೆ ಓದುವ ಅಭ್ಯಾಸ ಇದ್ದರೆ ಈ ದೇಶದ ಹಿಂದುಳಿದ ಜಾತಿಗಳು, ದಲಿತರು ಮತ್ತು ಅಲ್ಪಸಂಖ್ಯಾತರನ್ನು ಭಾರತೀಯ ಜನತಾ ಪಕ್ಷ ಯಾವ ಯಾವ ಕಾಲದಲ್ಲಿ ಹೇಗೆಲ್ಲಾ ನಡೆಸಿಕೊಂಡಿದೆ ಎಂಬ ಇತಿಹಾಸವನ್ನು ಓದಿ ತಿಳಿದುಕೊಳ್ಳಲಿ. ಬಂಗಾರು ಲಕ್ಷ್ಮಣ್ ಎಂಬ ಅಮಾಯಕ ದಲಿತ ನಾಯಕನನ್ನು ಪಕ್ಷದ ರಾಷ್ಟ್ರೀಯ ಅಧ್ಯಕ್ಷ ಸ್ಥಾನದಲ್ಲಿ ಕೂರಿಸಿ ಅವರ ವಿರುದ್ಧ ಭ್ರಷ್ಟಾಚಾರದ ಆರೋಪ ಹೊರಿಸಿ ಜೈಲಿಗೆ ತಳ್ಳಿದ್ದು ಮಾತ್ರವಲ್ಲ, ಅದೇ ಕೊರಗಿನಲ್ಲಿ ಅವರು ಸಾಯುವಂತೆ ಮಾಡಿದವರು ಯಾರು? ಮಾತೆತ್ತಿದರೆ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರ ಹೆಸರನ್ನು ಮೆರೆಸುವ ಬಿಜೆಪಿ ಅವರನ್ನೇ ಪ್ರಧಾನಮಂತ್ರಿ ಯಾಕೆ ಮಾಡಿಲ್ಲ?

ಎ.ಪಿ.ಜೆ ಅಬ್ದುಲ್ ಕಲಾಮ್ ಅವರನ್ನು ರಾಷ್ಟ್ರಪತಿ ಮಾಡಿದ್ದೇ ಸಾಧನೆ ಎಂದು ಹೇಳಿಕೊಳ್ಳುವವರು, ಪ್ರಸಕ್ತ ಲೋಕಸಭೆಯಲ್ಲಿ ಬಿಜೆಪಿಗೆ ಸೇರಿರುವ ಒಬ್ಬನೇ ಒಬ್ಬ ಮುಸ್ಲಿಂ ಸಂಸದ ಯಾಕೆ ಇಲ್ಲ? ಕಳೆದ ಲೋಕಸಭಾ ಚುನಾವಣೆಯಲ್ಲಿ ಒಬ್ಬನೇ ಒಬ್ಬ ಮುಸ್ಲಿಂ ನಾಯಕನಿಗೆ ಯಾಕೆ ಟಿಕೆಟ್ ಕೊಟ್ಟಿಲ್ಲ ಎನ್ನುವ ಪ್ರಶ್ನೆಗಳಿಗೆ ಉತ್ತರ ಕೊಡಲು ಸಾಧ್ಯವೇ? ಎಂದು ಪ್ರಶ್ನಿಸಿದ್ದಾರೆ.

ಹಿಂದುಳಿದ ನಾಯಕರನ್ನು ಬಿಜೆಪಿ ಹೇಗೆ ನಡೆಸಿಕೊಳ್ಳುತ್ತಾ ಬಂದಿದೆ ಎನ್ನುವುದಕ್ಕೆ ರಾಜ್ಯದ ಹಿಂದುಳಿದ ಜಾತಿಗಳ ನಾಯಕ

(2ನೇ ಪುಟ ನೋಡಿ)

# ಕಾನೂನು ಗೌರವಿಸಿ, ಪಾಲಿಸಿದರೆ ಸದೃಢ ರಾಷ್ಟ್ರ ನಿರ್ಮಾಣ ಸಾಧ್ಯ

ಮಲ್ಲಮ್ಮ ನುಡಿ ವಾರ್ತೆ
ಕಲಬುರಗಿ:ಜು.17:ಕಾನೂನುಗಳು ಜನರ ಒಳಿತಿಗಾಗಿವೆ. ಅವುಗಳು ಕೇವಲ ಪುಸ್ತಕಗಳಲ್ಲಿ ಉಳಿಯದೇ, ಎಲ್ಲರು ಅವುಗಳನ್ನು ಗೌರವಿಸಿ, ಪಾಲನೆ ಮಾಡಿದರೆ ಸಮಾಜದಲ್ಲಿ ಶಾಂತಿ ನೆಲೆಸಿ, ಸದೃಢ ರಾಷ್ಟ್ರ ನಿರ್ಮಾಣವಾಗಲು ಸಾಧ್ಯವಾಗುತ್ತದೆ ಎಂದು ನ್ಯಾಯವಾದಿ ಶಿವಕುಮಾರ ಬಿದರಿ ಅಭಿಮತ ವ್ಯಕ್ತಪಡಿಸಿದರು.

ಶಹಾಬಾದ ತಾಲೂಕಿನ ಭಂಕೂರ್ ಗ್ರಾಮ ವೀರಶೈವ ಭವನದಲ್ಲಿ 'ಬಸವೇಶ್ವರ ಸಮಾಜ ಸೇವಾ ಬಳಗ'ದ ವತಿಯಿಂದ ಗುರುವಾರ ಸಂಜೆ ಏರ್ಪಡಿಸಲಾಗಿದ್ದ 'ಅಂತಾರಾಷ್ಟ್ರೀಯ ನ್ಯಾಯ ದಿನಾಚರಣೆ'ಯ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡುತ್ತಿದ್ದರು.

ಕಾನೂನು ಪುಸ್ತಕವಿಲ್ಲದಿದ್ದ ಕಾಲದಲ್ಲಿ ನ್ಯಾಯವನ್ನು ಪಂಚಾಯತಿಯ ಮೂಲಕ ಗ್ರಾಮದ ಮುಖಂಡರು ಬಗೆಹರಿಸುತ್ತಿದ್ದು. ರಾಷ್ಟ್ರ-ರಾಷ್ಟ್ರಗಳ ನಡುವೆ ವ್ಯಾಪಾರ-ವ್ಯವಹಾರಕ್ಕೆ ಅಂತಾರಾಷ್ಟ್ರೀಯ ಮಟ್ಟದಲ್ಲಿ ಕಾನೂನುಗಳನ್ನು ಜಾರಿಗೊಳಿಸಿಲಾಗಿದೆ. ಅದಕ್ಕಾಗಿ ಅಂತಾರಾಷ್ಟ್ರೀಯ ನ್ಯಾಯಾಲಯ, ನ್ಯಾಯ ಮಂಡಳಿಗಳು ಕಾರ್ಯನಿರ್ವಹಿಸುತ್ತಿವೆ. ಜನಸಾಮಾನ್ಯರಿಗೆ ಕಾನೂನಿನ ಕನಿಷ್ಟ ಅರಿವು ಅತ್ಯಗತ್ಯವಾಗಿದೆ ಎಂದು ತಿಳಿಸದರು.

ಗುವಿವಿ ವಿಶ್ರಾಂತ ಪ್ರಾಧ್ಯಾಪಕ ಡಾ.ವಾಸುದೇವ ಸೇಡಂ ಎಚ್. ಮಾತನಾಡಿ, ಕಾನೂನುಗಳು ಹೇಳುವುದಕ್ಕಲ್ಲ, ಬದಲಿಗೆ ಆಚರಣೆಗಿವೆ ಎಂಬ ವಾಸ್ತವಿಕತೆಯನ್ನು ಅರ್ಥಮಾಡಿಕೊಂಡು ಪ್ರತಿಯೊಬ್ಬರು ನ್ಯಾಯ, ಕಾನೂನ ಪರಿಪಾಲನೆಯನ್ನು ಜವಾಬ್ದಾರಿಯಿಂದ ನಿರ್ವಹಿಸಬೇಕಾಗಿದೆ. ನೈಜ ಪ್ರತಿಭೆಗೆ ಅನ್ಯಾಯವಾದರೆ 'ಪ್ರತಿಭಾ ಪಲಾಯನ'ವಾಗುತ್ತದೆ. ಅನೇಕ ಮಹನೀಯರು ಕಾಲ-ಕಾಲಕ್ಕೆ ನ್ಯಾಯವನ್ನು ಒದಗಿಸಿಕೊಡಲು ಶ್ರಮಿಸಿದ್ದಾರೆ ಎಂದರು.



ಬಳಗದ ಅಧ್ಯಕ್ಷ ಎಚ್.ಬಿ.ಪಾಟೀಲ್, ಭಂಕೂರ ಬಸವ ಸಮಿತಿ ಶಾಲೆಯ ಉಪಾಧ್ಯಕ್ಷ ಅಮೃತ್ ಮಾನಕರ್, ಜೆಸ್ಕಾಂ ಯೂನಿಯನ್ ಸೆಕ್ರೆಟರಿ ಅಂಬರೀಶ್ ಹೂಗಾರ್ ಮಾತನಾಡಿದರು.

ಭಂಕೂರ ಕಸಾಪ ವಲಯ ಅಧ್ಯಕ್ಷ ಪ್ರಕಾಶ ಪಾಟೀಲ್, ಕಸಾಪ ಕಲಬುರಗಿ ಉತ್ತರ ವಲಯದ ಗೌರವ ಅಧ್ಯಕ್ಷ ಶಿವಯೋಗೆಪ್ಪಾ ಎಸ್.ಬಿರಾದಾರ, ಚನ್ನಪ್ಪಗೌಡ ಘಟ್ಟದ್, ನಾನಾಸಾಹೇಬ್ ಮಾನಕರ್‌ಮ ಮರಲಿಂಗ ಯಾದಗಿರ, ರಾಯಪ್ಪ ಧನ್ನ, ಅನಿಲ್ ಮೈನಾಳಕರ್ ಸೇರಿದಂತೆ ಭಂಕೂರ ಗ್ರಾಮಸ್ಥರು ಭಾಗವಹಿಸಿದ್ದರು.

ಕಾರ್ಯಕ್ರಮವನ್ನು ಮಲ್ಲಿಕಾರ್ಜುನ ಶಿರಗೊಂಡ ಸ್ವಾಗತಿಸಿದರು. ಉಪನ್ಯಾಸಕ ಶಶಿಕಾಂತ ಮಡಿವಾಳ ನಿರೂಪಿಸಿದರು. ಭರತ ಧನ್ನಾ ವಂದಿಸಿದರು

## ಒಂದನೇ ಪುಟದಿಂದ

### ಮುಂದಿನ ಸಚಿವ ಸಂಪುಟ ಸಭೆಯಲ್ಲಿ ನಿರ್ಧಾರ

ಎಂದರು."ಇಂದಿನ ಸಚಿವ ಸಂಪುಟ ಸಭೆಯಲ್ಲಿ ನಾವು ಅದನ್ನು ಕೊನೆಯ ವಿಷಯವಾಗಿ ತೆಗೆದುಕೊಂಡಿದ್ದೇವೆ. ವರದಿಯ ಬಗ್ಗೆ ಅಧ್ಯಯನ ಮಾಡಬೇಕು. ಹೀಗಾಗಿ ಮುಂದಿನ ಸಭೆಯಲ್ಲಿ ನಾವು ಅದರ ಬಗ್ಗೆ ಚರ್ಚಿಸಿ ನಿರ್ಧರಿಸುತ್ತೇವೆ" ಎಂದರು.

ವರದಿಯನ್ನು ನ್ಯಾಯಾಲಯಕ್ಕೆ ಸಲ್ಲಿಸುವ ಬಗ್ಗೆ ಕೇಳಿದ ಪ್ರಶ್ನೆಗೆ ಉತ್ತರಿಸಿದ ಸಚಿವರು,"ಅದನ್ನು ಸಲ್ಲಿಸಬೇಕಾದಾಗಲೆಲ್ಲಾ ನಾವು ಅದನ್ನು ಸಲ್ಲಿಸುತ್ತೇವೆ" ಎಂದು ಹೇಳಿದರು.

ನಿವೃತ್ತ ಹೈಕೋರ್ಟ್ ನ್ಯಾಯಾಧೀಶ ಜಾನ್ ಮೈಕೆಲ್ ಕುನ್ಹಾ ನೇತೃತ್ವದ ಆಯೋಗವು ಜುಲೈ 11 ರಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಎರಡು ಸಂಪುಟಗಳ ವರದಿ ಸಲ್ಲಿಸಿದೆ.

### ಕಾನ್ಸ್ ಟೇಬಲ್ ಹಠಾತ್ ಸಾವು

ಕಾನ್ಸ್ ಟೇಬಲ್. ಬೀದರ್ ನ ಸಬ್ ಅರ್ಬನ್ ಪೊಲೀಸ್ ಠಾಣೆಯಲ್ಲಿ ಪೇದೆಯಾಗಿ ಕಾರ್ಯನಿರ್ವಹಿಸುತ್ತಿದ್ದರು.

ಮೂಲತಃ ಕಲಬುರಗಿ ಜಿಲ್ಲೆಯ ಚಿಂಚೋಳಿ ತಾಲೂಕಿನ ಕೊಂಚಾವರಂ ಗ್ರಾಮದವರಾದ ಸರಿತಾ ವಾರದ ಹಿಂದೆ ಹೆರಿಗೆಯಾಗಿ ಮಗುವಿಗೆ ಜನ್ಮ ನೀಡಿದ್ದರು. ಹೆರಿಗೆ ಬಳಿಕ ಲೋ ಬಿಪಿ ಶುರುವಾಗಿತ್ತು.

ಇದೀಗ ಲೋ ಬಿಪಿಯಿಂದಾಗಿ ಸರಿತಾ ಸಾವನ್ನಪ್ಪಿದ್ದಾರೆ. ಸರಿತಾ ಪತಿ ಕುಪೇಂದ್ರ ಇನ್ಸ್ ಪೆಕ್ಟರ್ ಆಗಿ ಸೇವೆ ಸಲ್ಲಿಸುತ್ತಿದ್ದಾರೆ.

### ನಂ.1 - ಮೈಸೂರಿಗೆ 3ನೇ ಸ್ಥಾನ

2024 ರ ಜನವರಿಯಲ್ಲಿ ಘೋಷಿಸಲಾದ ಈ ಪ್ರಶಸ್ತಿಗಳ ಹಿಂದಿನ ಆವೃತ್ತಿಯಲ್ಲಿ, ಇಂದೋರ್ ಸತತ ಏಳನೇ ಬಾರಿಗೆ ದೇಶದ ಅತ್ಯಂತ ಸ್ವಚ್ಛ ನಗರವಾಗಿ ಹೊರಹೊಮ್ಮಿತು. ಸೂರತ್ ಜಂಟಿಯಾಗಿ ಮೊದಲ ಬಾರಿಗೆ ಕಾಣಿಸಿಕೊಂಡಿದ್ದು, ಪ್ಲೇಗ್ ಪೀಡಿತ ನಗರ ಎಂಬ ತನ್ನ ಹಿಂದಿನ ಪರಂಪರೆಯನ್ನು ಅಳಿಸಿಹಾಕಿದೆ.

ಕೇಂದ್ರ ವಸತಿ ಮತ್ತು ನಗರ ವ್ಯವಹಾರಗಳ ಸಚಿವಾಲಯ ಕೇಂದ್ರದ ಸ್ವಚ್ಛ ಭಾರತ ಮಿಷನ್-ನಗರದ ಅಡಿಯಲ್ಲಿ ಆಯೋಜಿಸಲಾಗಿದೆ. ಇದನ್ನು ಸರ್ಕಾರವು ವಿಶ್ವದ ಅತಿದೊಡ್ಡ ನಗರ ನೈರ್ಮಲ್ಯ ಮತ್ತು ಸ್ವಚ್ಛತಾ ಸಮೀಕ್ಷೆ ಎಂದು ಪ್ರಚಾರ ಮಾಡಿದೆ.

ಗುರುವಾರ ನಡೆದ ಕಾರ್ಯಕ್ರಮದ ಭಾಗವಾಗಿ ಒಟ್ಟು 78 ಪ್ರಶಸ್ತಿಗಳನ್ನು ಘೋಷಿಸಲಾಯಿತು. ಇದರಲ್ಲಿ ಖಟ್ಟರ್, ಅವರ ಕಿರಿಯ ಸಹೋದ್ಯೋಗಿ ಒಂಖ ತೋಖನ್ ಸಾಹು ಮತ್ತು ಒಂಊಗಂ ಕಾರ್ಯದರ್ಶಿ ಶ್ರೀನಿವಾಸ್ ಕೆ. ಭಾಗವಹಿಸಿದ್ದರು.

### ಬಿಜೆಪಿಗೇಕೆ ಚಿಂತೆ:ಬಿವೈವಿಗೆ ಸಿಎಂ ತಿರುಗೇಟು

ಎಸ್.ಬಂಗಾರಪ್ಪನವರೇ ಸಾಕ್ಷಿ. ಬಂಗಾರಪ್ಪನವರನ್ನು ನಿಮ್ಮ ತಂದೆ ಬಿ.ಎಸ್. ಯಡಿಯೂರಪ್ಪನವರು ಮುಗಿಸಿದರೆ, ಅವರ ಮಗ ಕುಮಾರ್ ಬಂಗಾರಪ್ಪನವರ ರಾಜಕೀಯವನ್ನು ನೀವು ಮುಗಿಸಲು ಹೊರಟಿದ್ದೀರಿ. ಇದರ ವಿವರವನ್ನು ಅವರು ನೀಡುತ್ತಲೇ ಇದ್ದಾರೆ. ಬಂಗಾರಪ್ಪನವರಿರಲಿ, ಮೋದಿ ಅವರೇ ಇರಲಿ, ಎಲ್ಲಿಯ ವರೆಗೆ ಇವರು ವರ್ಣವ್ಯವಸ್ಥೆ ಆಧಾರಿತ ಹಿಂದುತ್ವದ ಅಜೆಂಡಾಕ್ಕೆ ತಲೆ ಬಗ್ಗಿಸುತ್ತಾ ಇರುತ್ತಾರೋ ಅಲ್ಲಿಯ ವರೆಗೆ ಮಾತ್ರ ಅವರ ತಲೆಗಳು ಸುರಕ್ಷಿತ. ಇದು ಮೋದಿಯವರಿಗೂ ತಿಳಿದಿರಲಿ.

ದಲಿತ ಮತ್ತು ಹಿಂದುಳಿದ ಜಾತಿಗಳ ಬಗ್ಗೆ ನಿಮಗೆ ಅಷ್ಟೊಂದು ಅಕ್ಕರೆ, ಕಾಳಜಿಗಳಿದ್ದರೆ ರಾಜ್ಯ ಬಿಜೆಪಿ ಅಧ್ಯಕ್ಷ ಸ್ಥಾನವನ್ನು ಒಬ್ಬ ದಲಿತ ನಾಯಕನಿಗೆ ಬಿಟ್ಟುಬಿಡಿ. ನಿಮಗೆ ಅನುಕೂಲವಾಗಲೆಂದು ಆ ಹೆಸರನ್ನು ನಾನೇ ಸೂಚಿಸುತ್ತೇನೆ. ದಲಿತ ನಾಯಕ ಗೋವಿಂದ್ ಕಾರಜೋಳ ಅವರು ಇತ್ತೀಚೆಗೆ ನಿಮ್ಮ ಸಂಗಕ್ಕೆಬಿದ್ದು ಏನೇನೋ ಮಾತನಾಡುತ್ತಿದ್ದಾರೆ. ಆದರೆ ನನ್ನ ಸಹದ್ಯೋಗಿಯಾಗಿದ್ದ ಅವರು ಮೂಲತ: ಸಜ್ಜನ ವ್ಯಕ್ತಿ. ನಿಮಗೆ ಮತ್ತು ನಿಮ್ಮ ಪಕ್ಷಕ್ಕೆ ದಮ್ಮು ತಾಕತ್ ಇದ್ದರೆ ಕಾರಜೋಳ ಅವರನ್ನು ಪಕ್ಷದ ರಾಜ್ಯಾಧ್ಯಕ್ಷರನ್ನಾಗಿ ಮಾಡಿ ಅವರನ್ನೇ ಮುಂದಿನ ಮುಖ್ಯಮಂತ್ರಿ ಅಭ್ಯರ್ಥಿ ಎಂದು ಘೋಷಿಸಿಬಿಡಿ.

ಇಂತಹ ಒಳ್ಳೆಯ ಕೆಲಸವನ್ನು ನೀವು ಮಾಡುವುದೇ ಇಲ್ಲ ಎನ್ನುವುದು ನನಗೆ ಗೊತ್ತು. ಬೇರೆ ಪಕ್ಷಗಳಲ್ಲಿನ ದಲಿತ ನಾಯಕರ ಚಾರಿತ್ರ್ಯಹನನ ಮಾಡಲಷ್ಟೇ ಬಿಜೆಪಿ ತನ್ನ ದಲಿತ ನಾಯಕರನ್ನು ಬಳಸಿಕೊಳ್ಳುತ್ತದೆಯೇ ಹೊರತು, ಅವರಿಗೆ ಯಾವುದೇ ಗೌರವದ ಮತ್ತು ಪ್ರಮುಖ ಸ್ಥಾನಮಾನ ನೀಡುವುದಿಲ್ಲ. ವಿಜಯೇಂದ್ರ ಅವರೇ, ಛಲವಾದಿ ನಾರಾಯಣ ಸ್ವಾಮಿ ಅವರ ತಲೆ ಮೇಲೆ ಚಡ್ಡಿ ತುಂಬಿದ ಬುಟ್ಟಿಹೊರಿಸಿ ಕಳಿಸುವ ಬದಲಿಗೆ ನೀವು ಮತ್ತು ನಿಮ್ಮ ತಂದೆಯವರು ಯಾಕೆ ಅದನ್ನು ಹೊತ್ತುಕೊಂಡು ಹೋಗಿಲ್ಲ? ಇದಕ್ಕೆ ನಿಮ್ಮಲ್ಲಿ ಉತ್ತರ ಇದೆಯಾ?

ಮಲ್ಲಿಕಾರ್ಜುನ ಖರ್ಗೆ ಅವರು ಎಐಸಿಸಿ ಅಧ್ಯಕ್ಷರು ಮಾತ್ರವಲ್ಲ, ದೇಶ ಮೆಚ್ಚುವ ಒಬ್ಬ ಮುತ್ಸದ್ದಿ ನಾಯಕ. ಶ್ರದ್ಧೆ, ಶ್ರಮ ಮತ್ತು ಜನಪರಕಾಳಜಿ ಮೂಲಕ ಅವರು ನಾಯಕರಾಗಿ ಬೆಳೆದಿದ್ದಾರೆಯೇ ಹೊರತು, ಎಂದೂ ದಲಿತ ಕಾರ್ಡ್ ಪ್ರದರ್ಶಿಸಿ ರಾಜಕೀಯ ಮಾಡಿಲ್ಲ. ಅವರ ಬೆಳವಣಿಗೆಗೆ ಯಾರ ಶಿಫಾರಸುಗಳ ಅಗತ್ಯವೂ ಇಲ್ಲ. ಕಾಂಗ್ರೆಸ್ ಪಕ್ಷದಲ್ಲಿ ಪ್ರಧಾನಮಂತ್ರಿ ಯಾರು ಆಗಬೇಕೆನ್ನುವುದನ್ನು ನಮ್ಮ ಪಕ್ಷ ನಿರ್ಧರಿಸುತ್ತದೆ. ಅದರ ಬಗ್ಗೆ ಬಿಜೆಪಿ ತಲೆಕೆಡಿಸಿಕೊಳ್ಳುವ ಅಗತ್ಯ ಇಲ್ಲ.

ನೀವು ಯೋಚಿಸಬೇಕಾಗಿರುವುದು ನಿಮ್ಮ ಪಕ್ಷದ ಬಗ್ಗೆ. ಎಪ್ಪತ್ತೈದು ವರ್ಷ ತುಂಬಿರುವ ಮೋದಿಯವರ ಪದಚ್ಯುತಿಯ ಸೂಚನೆಯನ್ನು ಆ???????ಸ್ ಸರಸಂಘ ಚಾಲಕ ಮೋಹನ್ ಭಾಗವತ್ ನೀಡಿದ್ದಾರೆ. ದಲಿತ ಪ್ರಧಾನಮಂತ್ರಿಯನ್ನು ಮಾಡಲು ಬಿಜೆಪಿಗೆ ಇದೊಂದು ಸದಾವಕಾಶ. ಆ ಪ್ರಯತ್ನ ನಿಮ್ಮಿಂದಲೇ ಶುರುವಾಗಲಿ. ಬೇರೆಯವರಿಗೆ ಬೋಧನೆ ಮಾಡುವ ಬದಲಿಗೆ ಬಿಜೆಪಿಯ ಪ್ರಧಾನಮಂತ್ರಿ ಸ್ಥಾನಕ್ಕೆ ಒಬ್ಬ ದಲಿತ ನಾಯಕನನ್ನು ನೀವೇ ಮೊದಲೇ ಸೂಚಿಸಿ ನಿಮ್ಮ ದಲಿತ ಪ್ರೇಮವನ್ನು ಸಾಬೀತುಪಡಿಸಿ. ಆ ಹೆಸರುಗಳು ಗೋವಿಂದ ಕಾರಜೋಳ ಅವರೋ, ಛಲವಾದಿ ನಾರಾಯಾಣಸ್ವಾಮಿ ಅವರದ್ದಾಗಿದ್ದರೆ ಅವರನ್ನು ಅಭಿನಂದಿಸುವರಲ್ಲಿ ನಾನು ಮೊದಲಿಗನಾಗುತ್ತೇನೆಂದು ತಿಳಿಸಿದ್ದಾರೆ.

### ಪ್ರಕರಣ ವಿಚಾರಣೆಗೆ ಸುಪ್ರೀಂ ತಡೆ

ಹಿಂದಿನ ತಾರ್ಕಿಕತೆಯನ್ನು ನ್ಯಾಯಪೀಠ ಮೌಖಿಕವಾಗಿ ಪ್ರಶ್ನಿಸಿದೆ. ಹೆಚ್‌ಡಿಕೆ ಮತ್ತು ಅವರ ಸಂಬಂಧಿಗಳು ಕೇತಗಾನಹಳ್ಳಿಯ ಸರ್ವೇ ನಂಬರ್ 8, 9, 10, 16, 17 ಮತ್ತು 79ರಲ್ಲಿ 14 ಎಕರೆ ಸರ್ಕಾರಿ ಜಮೀನು ಒತ್ತುವರಿ ಮಾಡಿರುವ ಆರೋಪಕ್ಕೆ ಸಂಬಂಧಿಸಿದಂತೆ ಲೋಕಾಯುಕ್ತ ವರದಿಯ ಅನುಸಾರ ಕ್ರಮ ಕೈಗೊಳ್ಳಬೇಕು ಎಂದು 2020ರಲ್ಲಿ ಹೈಕೋರ್ಟ್ ಆದೇಶಿಸಿತ್ತು. ಇದನ್ನು ಜಾರಿಗೊಳಿಸಿಲ್ಲ ಎಂದು ಸಮಾಜ ಪರಿವರ್ತನಾ ಸಮುದಾಯ, ರಾಜ್ಯ ಸರ್ಕಾರದ ವಿರುದ್ಧ ಹೈಕೋರ್ಟನಲ್ಲಿ ಸಿವಿಲ್ ನ್ಯಾಯಾಂಗ ನಿಂದನೆ ಅರ್ಜಿ ಸಲ್ಲಿಸಿತ್ತು. ಈ ಅರ್ಜಿ ವಿಚಾರಣೆ ನಡೆಸಿದ್ದ ನ್ಯಾಯಾಲಯ, ಅರ್ಜಿ ವಿಚಾರಣೆಯಲ್ಲಿ ಭಾಗಿಯಾಗಲು ಕುಮಾರಸ್ವಾಮಿಐವರಿಗೆ ಅನುಮತಿ ನೀಡಿತ್ತು.

ಇದೇ ವೇಳೆ, ಹೈಕೋರ್ಟ್ ನ್ಯಾಯಾಂಗ ನಿಂದನೆ ಪ್ರಕರಣದ ವಿಚಾರಣೆ ಆದೇಶ ಪ್ರಶ್ನಿಸಿ, ಸುಪ್ರೀಂ ಕೋರ್ಟಗೆ ಮನವಿ ಮಾಡಿದ್ದರು. ನ್ಯಾಯಾಂಗ ನಿಂದನೆ ಪ್ರಶ್ನಿಸಿ ಸುಪ್ರೀಂ ಕೋರ್ಟ್‌ನಲ್ಲಿ ಸಲ್ಲಿಸಿರುವ ಅರ್ಜಿ ವಿಚಾರಣೆ ಬಾಕಿ ಇರುವುದರಿಂದ ತಮ್ಮ ವಿರುದ್ಧದ ಕಾನೂನು ಪ್ರಕ್ರಿಯೆಗೆ ತಡೆ ನೀಡುವಂತೆ ಅವರು ಹೈಕೋರ್ಟಗೆ ಮನವಿ ಮಾಡಿದ್ದರು. ಮಾ.27ರವರೆಗೂ ಅರ್ಜಿದಾರರ ವಿರುದ್ಧ ಯಾವುದೇ ಬಲವಂತದ ಕ್ರಮ ಕೈಗೊಳ್ಳಬಾರದು ಎಂದು ಹೈಕೋರ್ಟ್ ಆದೇಶಿಸಿತ್ತು.

ಕೇತಗಾನಗಳ್ಳಿಯ ವಿವಿಧ ಸರ್ವೇ ನಂಬರ್‌ಗಳನ್ನು ಒಳಗೊಂಡ 14 ಎಕರೆ ಜಮೀನಿನ ಮಾಲೀಕತ್ವದ ಕುರಿತಂತೆ ವಿಚಾರಣೆ ನಡೆಸಲು ಐಎಎಸ್ ಅಧಿಕಾರಿ ಆಮ್ಲಾನ್ ಆದಿತ್ಯ ಬಿಸ್ವಾಸ್ ನೇತೃತ್ವದಲ್ಲಿ 2025ರ ಜನವರಿ 28ರಂದು ಎಸ್‌ಐಟಿ ರಚಿಸಿ ಆದೇಶಿಸಲಾಗಿದೆ.

# ಡಾ. ಬಾಬು ಜಗಜೀವನರಾಮ ಭವನ ಪೂರ್ಣಗೊಳಿಸುವಂತೆ ಸಚಿವರಿಗೆ ಮನವಿ

ಮಲ್ಲಮ್ಮ ನುಡಿ ವಾರ್ತೆ
ಕಲಬುರಗಿ:ಜು.17: ಜಿಲ್ಲಾ ಮಾದಿಗ ಸಮಾಜದ ಒಕ್ಕೂಟದಿಂದ ಡಾ. ಬಾಬು ಜಗಜೀವನರಾಮ ಭವನದ ಕಟ್ಟಡ ಪೂರ್ಣಗೊಳಿಸಬೇಕೆಂದು ಜಿಲ್ಲಾ ಮಾದಿಗ ಸಮಾಜದ ನಿಯೋಗದ ವತಿಯಿಂದ ಸಚಿವರಾದ ಪ್ರೀಯಾಂಕ್ ಖರ್ಗೆ, ಡಾ. ಶರಣಪ್ರಕಾಶ ಪಾಟೀಲ್, ಹೆಚ್.ಸಿ.ಮಹಾದೇವಪ್ಪ ಅವರಿಗೆ ಬೆಂಗಳೂರಿನಲ್ಲಿ ಮನವಿ ಸಲ್ಲಿಸಿದರು.

ಜಿಲ್ಲಾ ಮಾದಿಗ ಸಮಾಜದ ನಿಯೋಗದ ವತಿಯಿಂದ ಸುಮಾರು 20 ಜನರು ಸೇರಿಕೊಂಡು ಸಚಿವರಾದ ಪ್ರೀಯಾಂಕ್ ಖರ್ಗೆ ಹಾಗೂ ಡಾ. ಶರಣಪ್ರಕಾಶ ಪಾಟೀಲ್, ಹೆಚ್.ಸಿ.ಮಹಾದೇವಪ್ಪ ಇವರನ್ನು ಭೇಟಿ ಮಾಡಿ ಡಾ. ಬಾಬು ಜಗಜೀವನರಾಮ ಭವನದ ಬಗ್ಗೆ ವಿಸ್ತರವಾಗಿ ಹೇಳಿದ ನಂತರ ತಕ್ಷಣ ಸ್ಪಂಧಿಸಿದರು.



ಸಮಾಜ ಕಲ್ಯಾಣ ಸಚಿವರಿಗೆ ಈ ಕೂಡಲೇ ಹೇಳುತ್ತೇವೆ ಎಂದು ಭರವಸೆ ಕೊಟ್ಟಿರುತ್ತಾರೆ. ಅಲ್ಲದೇ ನಾನು ಕಲಬುರಗಿಗೆ ಬಂದಾಗ ಒಂದು ಸಾರಿ ನನಗೆ ಭವನವನ್ನು ತೋರಿಸಿ ನೋಡೋಣ ಎಂದು ತಿಳಿಸಿದರು. ನಾವು ಕೊಟ್ಟ ಮನವಿಯನ್ನು ಸಮಾಜ ಕಲ್ಯಾಣ ಸಚಿವರಿಗೆ ಈ ಕೂಡಲೇ ನಿಮ್ಮ ಅರ್ಜಿಯನ್ನು ಕಳುಹಿಸಿಕೊಡುತ್ತೇನೆ ಎಂದು ತಿಳಿಸಿದರು, ಮುಂದೆ ಅನುದಾನ ಬಿಡುಗಡೆ ಮಾಡಿಕೊಡುತ್ತೇನೆ ಎಂದು ಪ್ರೀಯಾಂಕ್ ಖರ್ಗೆ ಅವರು ಭರವಸೆ ನೀಡಿದ್ದಾರೆ.

ಅದರಂತೆ ಸಚಿವರಾದ ಡಾ. ಶರಣಪ್ರಕಾಶ ಪಾಟೀಲ್ ಅವರಿಗೆ ಭೇಟಿ ಮಾಡಿ ಅವರಿಗೂ ಕೂಡ ಡಾ. ಬಾಬು ಜಗಜೀವನರಾಮ ಭವನದ ನಿರ್ಮಾಣದ ಹಂತವನ್ನು ತಿಳಿಸಿದಾಗ ಅವರು ಕೂಡ ತಕ್ಷಣ ಸಚಿವರಾದ ಹೆಚ್.ಸಿ. ಮಹಾದೇವಪ್ಪ ಸಮಾಜ ಕಲ್ಯಾಣ ಸಚಿವರಿಗೆ ಫೋನ್ ಮೂಲಕ ಕರೆ ಮಾಡಿ ಎಲ್ಲರ ಎದುರುಗಡೆ ಬಾಬುಜೀ ಯವರ ಭವನಕ್ಕೆ ಬೇಕಾಗಿರುವ ಹಣ ಇನ್ನೂ 5.00 ಕೋಟಿ ರೂಪಾಯಿ ಬೇಕಾಗಿರುತ್ತದೆ. ಅದನ್ನು ತಕ್ಷಣ ಬಿಡುಗಡೆ ಮಾಡಬೇಕೆಂದು ಒತ್ತಾಯಪೂರ್ವಕವಾಗಿ ಹೇಳಿದರು.

ಸಮಾಜ ಕಲ್ಯಾಣ ಸಚಿವರಿಗೆ ಭೇಟಿಮಾಡಿದಾಗ ಸಕಾರಾತ್ಮವಾಗಿ ಮಾತನಾಡಿ ನಿಮಗೆ ಎಷ್ಟು ಹಣ ಬೇಕು ಎಂದು ಕೇಳಿದಾಗ ನಾವು ಇನ್ನೂ ಭವನ ನಿರ್ಮಾನಕ್ಕೆ 5.00 ಕೋಟಿ ರೂಪಾಯಿ ಬೇಕಾಗುತ್ತದೆ ಎಂದಾಗ ಅದಕ್ಕೆ ಅವರು ಅಷ್ಟು ಹಣ ಬಿಡುಗಡೆ ಮಾಡಿಸಿಕೊಡುತ್ತೇನೆ ಅಂತಾ ಹೇಳಿದರು.

ನಿಯೋಗದಲ್ಲಿ ಜಿಲ್ಲಾ ಮಾದಿಗ ಸಮಾಜದ ಮುಖಂಡರಾದ ಶಾಮ ನಾಟಿಕಾರ, ಲಿಂಗರಾಜ ತಾರಫೈಲ್, ವಿಜಯಕುಮಾರ ಜಿ. ರಾಮಕೃಷ್ಣ, ನಾಗರಾಜ ಗುಂಡಗುರ್ತಿ, ಸಿದ್ದಾರ್ಥ ಕೋರವಾರ, ಮಲ್ಲಿಕಾರ್ಜುನ ಜಿನಕೇರಿ, ಮಲ್ಲಿಕಾರ್ಜುನ ದೊಡ್ಡಮನಿ, ಶ್ರೀಮಂತ ಭಂಡಾರಿ, ಶಿವಪುತ್ರ ನಾಗನಳ್ಳಿ, ಬಂಡೇಶ ತಾರಫೈಲ್, ಶಿವಶಂಕರ ಬಂದರವಾಡ, ಪ್ರಕಾಶ ಮಾಳಗೆ, ಶಿವರಾಜ ತಾರಫೈಲ್, ಪ್ರದೀಪ ಬಾಚನಾಳಕರ, ರೋಹಿತ ಗುಲ್ಲಾಬಾಡಿ ಸೇರಿದಂತೆ ಇನ್ನಿತರರು ಇದ್ದರು.

# ಇಂದು ಮಿನಿ ಉದ್ಯೋಗ ಮೇಳ ಆಯೋಜನೆ

ಕಲಬುರಗಿ,ಜು.17- ಕಲಬುರಗಿ ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ ವತಿಯಿಂದ ಇದೇ ಜುಲೈ 18ರಂದು ಬೆಳಿಗ್ಗೆ 10.30 ರಿಂದ ಮಧ್ಯಾಹ್ನ 2 ಗಂಟೆಯವರೆಗೆ ಕಲಬುರಗಿ ಸರ್ಕಾರಿ ಐಟಿಐ ಕಾಲೇಜು ಹಿಂದುಗಡೆಯಿರುವ ಜಿಲ್ಲಾ ಉದ್ಯೋಗ ವಿನಿಮಯ ಕಚೇರಿಯಲ್ಲಿ ಮಿನಿ ಉದ್ಯೋಗ ಮೇಳವನ್ನು ಹಮ್ಮಿಕೊಳ್ಳಲಾಗಿದೆ ಎಂದು ಕಲಬುರಗಿ ಜಿಲ್ಲಾ ಉದ್ಯೋಗ ವಿನಿಮಯ ಕಚೇ-ರಿಯ ಸಹಾಯಕ ನಿರ್ದೇಶಕರು ತಿಳಿಸಿದ್ದಾರೆ. ಉದ್ಯೋಗ ಮೇಳದಲ್ಲಿ ಭಾಗವಹಿಸಲಿರುವ ಕಂಪನಿಗಳ ವಿವರ ಇಂತಿದೆ.

ಭಾರತ ಫೋರ್ಜ್, ಮಾರ್ಕ್ಸ್ ಇಂಜಿನಿಯರಿಂಗ್, ಅರ್ವಿನ್ ಲಿಮಿಟೆಡ್‌ದಲ್ಲಿ ಮಶೀನ್ ಆಪರೇಟರ್, ಫೋರ್ಜಿಂಗ್ ಆಪರೇಟರ್, ಅಸೋಸಿಯೇಟ್ ಸಹಾಯಕ/ಇತರೆ ಹುದ್ದೆಗಳಿಗೆ ಎಸ್‌ಎಸ್‌ಎಲ್‌ಸಿ, ಪಿಯುಸಿ, ಡಿಪ್ಲೋಮಾ, ಯಾವುದೇ ಪದವಿ, ಬಿ.ಇ., ಬಿ.ಟೆಕ್ ವಿದ್ಯಾರ್ಹತೆ ಹೊಂದಿರಬೇಕು. ವಯೋಮಿತಿ 18 ರಿಂದ 35 ವರ್ಷದೊಳಗಿರಬೇಕು. ಐಡಿಎಫ್‌ಸಿ ಫಸ್ಟ್ ಭಾರತದಲ್ಲಿ ಗ್ರೂಪ್ ಕಲೆಕ್ಷನ್ ಮ್ಯಾನೇಜರ್ ಮತ್ತು ರಿಲೇಷನ್‌ಶಿಪ್ ಮ್ಯಾನೇಜರ್ ಹುದ್ದೆಗಳಿಗೆ ಅಭ್ಯರ್ಥಿಗಳು ಪಿಯುಸಿ, ಡಿಪ್ಲೋಮಾ, ಯಾವುದೇ ಪದವಿ ಪಾಸಾಗಿರಬೇಕು. ವಯೋಮಿತಿ 21 ರಿಂದ 30 ವರ್ಷದೊಳಗಿರಬೇಕು. ಶ್ರೀ ಸಿದ್ದರಾಮೇಶ್ವರ ಕಣ್ಣಿನ ಆಸ್ಪತ್ರೆಯಲ್ಲಿ ಆಪ್ಟೋಮೆಟ್ರಿಸ್ಟ್ ಹುದ್ದೆಗೆ ಬಿ.ಎಸ್.ಸಿ/ ಡಿಪ್ಲೋಮಾ,(ಆಪ್ಟೋಮೆಟ್ರಿ) ವಿದ್ಯಾರ್ಹತೆ ಹೊಂದಿರಬೇಕು. ಫಾರ್ಮಸಿಸ್ಟ್ ಹುದ್ದೆಗೆ ಡಿ/ಬಿ (ಫಾರ್ಮ) ವಿದ್ಯಾರ್ಹತೆ ಹೊಂದಿರಬೇಕು. ಡಾಕ್ಟರ್ ಸೆಕ್ರೇಟರೀಸ್/ಅಸಿಸ್ಟೆಂಟ್ ಹುದ್ದೆಗೆ ಬಿ.ಎಸ್ಸಿ(ನರ್ಸಿಂಗ್) ವಿದ್ಯಾರ್ಹತೆ ಹೊಂದಿರಬೇಕು. ರಿಸೇಪ್ಷನಿಸ್ಟ್ ಹುದ್ದೆಗೆ ಯಾವುದೇ ಪದವಿ ಪಾಸಾಗಿರಬೇಕು. ವಯೋಮಿತಿ 21 ರಿಂದ 35 ವರ್ಷದೊಳಗಿರಬೇಕು. ಚಿರಾಯು ಆಸ್ಪತ್ರೆಯಲ್ಲಿ ವಾರ್ಡ್ ಬಾಯ್, ಹೌಸ್ ಕೀಪಿಂಗ್ ಹುದ್ದೆಗೆ ಎಸ್‌ಎಸ್‌ಎಲ್‌ಸಿ ವರೆಗೆ ವಿದ್ಯಾರ್ಹತೆ ಹೊಂದಿರಬೇಕು. ವಯೋಮಿತಿ 18 ರಿಂದ 35 ವರ್ಷದೊಳಗಿರಬೇಕು. ಸ್ವಿಗ್ಗಿಯಲ್ಲಿ ಡೆಲಿವರಿ ಬಾಯ್ ಹುದ್ದೆಗೆ ಪಿಯುಸಿ /ಯಾವುದೇ ಪದವಿ ಪಾಸಾಗಿರಬೇಕು. ವಯೋಮಿತಿ 18 ರಿಂದ 40 ವರ್ಷದೊಳಗಿರಬೇಕು. ಮುತ್ತೂಟ್ ಫೈನಾನ್ಸ್‌ದಲ್ಲಿ ಸಿಎಸ್‌ಇ (ಮಹಿಳೆಯರು) ಹುದ್ದೆಗೆ ಮತ್ತು ಇಂಟರ್ನ್ ಅಸೋಸಿಯೇಟ್ಸ್ ಹುದ್ದೆಗಳಿಗೆ ಯಾವುದೇ ಪದವಿ ಪಾಸಾಗಿರಬೇಕು. ವಯೋಮಿತಿ 18 ರಿಂದ 25 ವರ್ಷದೊಳಗಿರಬೇಕು. ಆದಿತಿ ಇಂಟಿಗ್ರೇಟೆಡ್ ಸಲೂಷನ್‌ದಲ್ಲಿ ಟೆಕ್ನಿಶಿಯನ್, ಮ್ಹಷೀನ್ ಆಪರೇಟರ್, ಹೆಲ್ಪರ್ ಹುದ್ದೆಗಳಿಗೆ ಪಿಯುಸಿ/ ಐಟಿಐ/ಡಿಪ್ಲೋಮಾ/ಯಾವುದೇ ಪದವಿ ಪಾಸಾಗಿರಬೇಕು.

# ವಿವಿಧ ಅಭಿವೃದ್ಧಿ ಕಾಮಗಾರಿಗೆ ಶಾಸಕ ಅಲ್ಲಮಪ್ರಭು ಪಾಟೀಲ ಚಾಲನೆ

ಮಲ್ಲಮ್ಮ ನುಡಿ ವಾರ್ತೆ
ಕಲಬುರಗಿ:ಜು.17:ಎಸ್‌ಸಿಪಿ / ಟಿಎಸ್‌ಪಿ ಮತ್ತು ಪಿಎಂ-ಉಷಾ ಯೋಜನೆಯಡಿಯಲ್ಲಿ ನಗರದ ಹೊಸ ಆರ್‌ಟಿಓ ಹತ್ತಿರ ಸರಕಾರಿ ಮಹಾವಿದ್ಯಾಲಯ (ಸ್ವಾಯತ್ತದಲ್ಲಿ) 13.2 ಕೋಟಿ ರೂ. ವೆಚ್ಚದ್ ನೂತನ ಕಟ್ಟಡ, ಹಾಗೂ ವಿವಿಧ ಅಭಿವೃದ್ಧಿ ಕಾಮಗಾರಿಗೆ ದಕ್ಷಿಣ ಮತಕ್ಷೇತ್ರದ ಶಾಸಕ ಅಲ್ಲಮಪ್ರಭು ಪಾಟೀಲ್ ಅವರು ಗುದ್ದಲಿ ಪೂಜೆ ನೆರವೇರಿಸಿದ್ದರು. ಹಾಗೂ ಬುದ್ದ ಕಾರಂಜಿ ಅನಾವರಣ, ಬಯಲು ವಾಚನಾಲಯ, ಬೊಟಾನಿಕಲ್ ಗಾರ್ಡನ್ ಅನ್ನು ಶಾಸಕರು ಉದ್ಘಾಟಿಸಿದರು.



ಈ ಸಂದರ್ಭದಲ್ಲಿ ಪ್ರದೇಶೀಕ ಕಛೇರಿ ಕಾಲೇಜು ಶೀಕ್ಷಣ ಇಲಾಖೆ ಜಂಟಿ ನಿರ್ದೇಶಕ ಪ್ರೊ. ಶಿವಶರಣಪ್ಪ ಗೊಳ್ಳೆ, ರಾಜೇಂದ್ರ ಸಿಂಧೆ, ಮಹಾವಿದ್ಯಾಲಯದ ಪ್ರಾಚಾರ್ಯರಾದ ಡಾ. ಸವಿತಾ ತಿವಾರಿ, ಐದು ಗ್ಯಾರೆಂಟಿ ಅಧ್ಯಕ್ಷೆ ಚಂದ್ರಿಕಾ ಪರಮೇಶ್ವರ, ದಕ್ಷಿಣ ನಗರ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಲಿಂಗರಾಜ ತಾರಫೈಲ್, ಮಾಜಿ ಮೇಯರ್ ಬಾಬು ಒಂಟಿ, ಮುಖಂಡರಾದ ಶಾಮನಾಟೀಕಾರ, ವಿಜಯಕುಮಾರ ಕಟ್ಟಿಮನಿ, ರೈಟ್ಸ್ (ರೈಲ್ವೆ ಸಚಿವಾಲಯ) ಸಹಾಯಕ ವ್ಯವಸ್ಥಾಪಕ ಸಚಿನ್ ಅವಟಿ, ಗುತ್ತಿಗೇದಾರ ರಾಹುಲ ಚಂದ್ರ (ಭವಿಷ್ಯ ಬಿಸಿನೆಸ್), ಡಾ.ಟಿ.ವಿ.ಅಡಿವೇಶ, ಡಾ.ಮಲ್ಲೇಶಪ್ಪ ಎಸ್.ಕುಂಬಾರ, ಡಾ. ಮೀನಾಕ್ಷಿ ಕೆ.ಚೆಂಗಟೆ, ಡಾ. ವಿಜಯಕುಮಾರ ಸಾಲಿಮನಿ, ಡಾ.ರಾಜಕುಮಾರ ಸಲಗರ, ಡಾ. ದವಲಪ್ಪ ಎಚ್, ಡಾ. ಅರುಣಕುಮಾರ ಸಲಗರ, ಡಾ. ದಿನೇಶ ಮೇತ್ರೆ, ಡಾ.ಹಜ್ರಾ ಯಾಸಿಮಿನ್, ಡಾ.ಮೀನಾಕ್ಷಿ ಕೆ.ಸಿ, ಅಜಯಸಿಂಗ್ ತಿವಾರಿ, ವಿಜಯಲಕ್ಷ್ಮೀ, ಶಿವಾನಂದ ಸ್ವಾಮಿ, ಡಾ. ನಾಗಪ್ಪ ಗೋಗಿ, ಪಿಎಂ-ಉಷಾ ಸಂಯೋಜ-ಕರಾದ ಡಾ.ರಮೇಶ, ಡಾ. ಬಲಭೀಮ ಸಾಂಗ್ಲಿ, ಡಾ. ಶ್ರೀಮಂತ ಹೋಳಕರ, ಡಾ. ವಿಶ್ವನಾಥ ಬೆಣ್ಣೂರ, ಡಾ. ಸುರೇಶ ಎಸ್. ಮಾಳೆಗಾಂವ, ಡಾ. ಶ್ಯಾಮಲಾ ಸ್ವಾಮಿ, ಡಾ. ನಿವೇದಿತಾ ಸ್ವಾಮಿ, ಈರಮ್ಮ ಪಾಟೀಲ, ಡಾ. ರಮೇಶ ಪೋತೆ, ಡಾ.ಶಿವಲಿಂಗಪ್ಪ ಪಾಟೀಲ, ಡಾ.ಬಸಂತ ಸಾಗರ, ಡಾ.ರವಿ ಬೌದ್ದೆ, ಡಾ.ವಿಜಯಕುಮಾರ ಗೋಪಾಳೆ, ಡಾ.ಗೌಶಿಯಾ ಬೇಗಂ, ಡಾ.ರಬಿಯಾ ಇಫತ್, ಡಾ.ಭಾಗ್ಯಲಕ್ಷ್ಮೀ, ಡಾ.ಸುಜಾತಾ ದೊಡ್ಡಮನಿ, ಪ್ರೊ.ರಹಮಾನ ಸಾಬ, ಡಾ.ನಶೀಮ ಫಾತಿಮಾ, ಡಾ.ವಿಜಯನಂದ ವಿಠಲರಾವ ಸೇರಿದಂತೆ ಎಲ್ಲಾ ವಿಭಾಗದ ಡೀನರುಗಳು, ಪರೀಕ್ಷಾ ನಿಯಂತ್ರಕರು, ಮುಖ್ಯಸ್ಥರುಗಳು, ಪ್ರಾಧ್ಯಾಪಕರು ಮತ್ತು ಬೋಧ-ಕೇತರ ಸಿಬ್ಬಂದಿ ವರ್ಗದವರೂ ಹಾಜರಿದ್ದರು.

# ಸಂಚಾರಿ ವಿಜ್ಞಾನ ಪ್ರದರ್ಶನ



ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ :– ಜು 17 ತಾಲೂಕಿನ ಅಲಗೂಡ್ ಗ್ರಾಮದ ಸರ್ಕಾರಿ ಪ್ರೌಢ ಶಾಲೆಗೆ ಜಿಲ್ಲಾ ವಿಜ್ಞಾನ ಕೇಂದ್ರ ಕಲಬುರಗಿ

ವತಿಯಿಂದ ಸಂಚಾರಿ ವಿಜ್ಞಾನ ಪ್ರದರ್ಶನ ಬಸ್ ಬಂದಿದ್ದು ಹಲವಾರು ವೈಜ್ಞಾನಿಕ ಚಟುವಟಿಕೆಗಳನ್ನು ಮಾಡಲಾಗಿರುತದೆ. ವಿಜ್ಞಾನ ಕೇಂದ್ರದ ಸಂಚಾರಿ ವಿಜ್ಞಾನ ಪ್ರದರ್ಶನ ತಂಡವು ಸತತ ಜೂನ್ 17 ರಿಂದ ಬಸವಕಲ್ಯಾಣದಲ್ಲಿಯೇ ನೆಲೆಯೂರಿದ್ದು ಒಟ್ಟು ಇಂದಿನವರೆಗೆ 22 ಸರ್ಕಾರಿ, ಅನುದಾನಿತ, ಖಾಸಗಿ ಶಾಲೆಗಳಲ್ಲಿ ವೈಜ್ಞಾನಿಕ ಜಾಗೃತಿ ಕಾರ್ಯಕ್ರಮಗಳನ್ನು ಮಾಡಲಾಗಿದೆ. ವಿಜ್ಞಾನ ಕೇಂದ್ರದ ವಿಜ್ಞಾನ ವಿಶ್ಲೇಷಕ ಸುಭಾಷ್ ಮೇತ್ರೆ, ತಾಂತ್ರಿಕ ಟ್ರೇನಿ ಲಕ್ಷ್ಮೀಕಾಂತ್ ಜಮಾದರ್, ಕೇಂದ್ರದ ಅಧಿಕಾರಿ ತ್ಯಾಗರಾಜ, ಹಾಗೂ ಶಾಲಾ ಪ್ರಭಾರಿ ಮುಖ್ಯಗುರುಗಳು ಸುಜಾತಾ ಖೈರಟ್ಕರ್, ವಿಜ್ಞಾನ ಶಿಕ್ಷಕರಾದ ಸುಲಭಾ ಪೊದ್ದಾರ್ ಹಾಗೂ ಸಿಬ್ಬಂದಿ ವರ್ಗದವರು ಹಾಗೂ ವಿದ್ಯಾರ್ಥಿಗಳು ಬಹು ಉತ್ಸಾಹದಿಂದ ಪಾಲ್ಗೊಂಡಿದ್ದರು.

## ಮಲ್ಲಿಕಾರ್ಜುನ ಬಿ ಹಡಪದ ಸುಗೂರಗೆ ಮುಡಿಗೇರಿದ ನ್ಯಾಷನಲ್ ಚಾಣಕ್ಯ ನಾಯಕ ಪ್ರಶಸ್ತಿ




ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ: ಜಿಲ್ಲೆಯ ಹಡಪದ ಅಪ್ಪಣ್ಣ ( ಕ್ಷೌರಿಕ ) ಸಮಾಜದ ಜಿಲ್ಲಾ ಸಂಘಟನಾ ಕಾರ್ಯದರ್ಶಿಗಳು ಹಾಗೂ ಸಮಾಜ ನಿಸ್ವಾರ್ಥಿ ಸೇವಕ ಮಲ್ಲಿಕಾರ್ಜುನ ಬಿ ಹಡಪದ ಸುಗೂರ ಎನ್ ಇವರ ಸಮಾಜ ಸೇವೆಯನ್ನು ಗುರುತಿಸಿ ಉತ್ತರ ಪ್ರದೇಶ ರಾಜ್ಯದ ಅಲಹಾಬಾದ್ ಪ್ರಯಾಗ್ ರಾಜ್ ನ 'ಜೀವನ ಜಾಗೃತಿ ಸೇವಾ ಸಂಸ್ಥಾನದ ವತಿಯಿಂದ ನ್ಯಾಷನಲ್ ಚಾಣ–ಕ್ಯ ನಾಯಕತ್ವ ಪ್ರಶಸ್ತಿ 2025 ನೇ ಸಾಲಿನ ಪ್ರಶಸ್ತಿಯನ್ನು ಮುಡಿಗೇರಿದೆ. ಈ ನಿಮ್ಮ ಹಡಪದ ಅಪ್ಪಣ್ಣ ಸಮಾಜದ ಸೇವಕ ಮಲ್ಲಿಕಾರ್ಜುನ ಬಿ ಹಡಪದ ಸುಗೂರ ಎನ್ ಅವರು ಸಮಾಜದ ಸಂಘಟನಾ ಜೊತೆಯಲ್ಲಿ ಈ ರೀತಿಯ ಸಾಮಾಜಿಕವಾಗಿ ಸೇವೆ ಸಲ್ಲಿಸಿದ್ದಾರೆ ಅನಾಥ ಶಾಲಾ ಮಕ್ಕಳಿಗೆ, ನಿರ್ಗತಿಕರಿಗೆ, ಅಂ–ಧರಿಗೆ, ಬುದ್ಧಿ ಮಾಂದ್ಯರಿಗೆ, ಪೌರ ಕಾರ್ಮಿಕರಿಗೆ, ಕಟ್ಟಡ ಕಾರ್ಮಿಕರಿಗೆ, ಅಂಗವಿಕಲರಿಗೆ, ಅನಾಥ ಆಶ್ರಮದ ಹಿರಿಯ ವೃದ್ಧರಿಗೆ, ಬಾಲ ಮಕ್ಕಳಿಗೆ, ಸಾಧು–ಸಂತರಿಗೆ, ಮೂಕರಿಗೆ ಕಿವುಡರಿಗೆ ಹೀಗೆ ಒಟ್ಟು 1465 ಕ್ಕೂ ಹೆಚ್ಚು ಅನಾಥರಿಗೆ ಉಚಿತವಾಗಿ ಕ್ಷೌರ ಸೇವೆಯನ್ನು ಸಲ್ಲಿಸಿದನ್ನು ಗುರುತಿಸಿ ಪ್ರಶಸ್ತಿ ಪ್ರದಾನ ಮಾಡಿ ಗೌರವಿಸಲಾಯಿತು. ಮಲ್ಲಿಕಾರ್ಜುನ ಬಿ ಹಡಪದ ಸುಗೂರ ಎನ್ ಅವರು ತಮ್ಮ ಕಾಯಕ (ಕ್ಷೌರಿಕ) ವೃತ್ತಿಯ ಕ್ಷೇತ್ರದಲ್ಲಿ ಅಪಾರ ಅನುಭವವನ್ನು ಹೊಂದಿದ್ದಾರೆ. 18 ವರ್ಷಗಳ ಕಾಲ ತಮ್ಮ ಕ್ಷೌರಿಕ ವೃತ್ತಿಯ ಕಾಯಕ ಮಾಡಿ ಜೀವನದ ಧರ್ಮವಾಗಿ ಅಳವಡಿಸಿಕೊಂಡು, ಅನೇಕ ನಿರ್ಗತಿಕರಿಗೆ, ಈ ಕಲೆಯ ಪ್ರಜ್ವಲನೆಯನ್ನು ಬೆಳಗಿಸಿದ್ದಾರೆ ಇಂದು ನಮ್ಮ ತಂದೆ ಮತ್ತು ಸಮಾಜದ ಹಿರಿಯರ ಮುಖಂಡರ ಮತ್ತು ಕಲಬುರಗಿ ಜಿಲ್ಲೆಯ ಹಡಪದ ಅಪ್ಪಣ್ಣ ಸಮಾಜದ ಪದಾಧಿಕಾರಿ ಅವರ ಮಾರ್ಗದರ್ಶನದಲ್ಲಿ ತಮ್ಮ ಕ್ಷೌರಿಕ ಕಲೆಯನ್ನು ದುಡ್ಡಿನ ವ್ಯಾಪಾರವಲ್ಲ, ಸೇವೆಯ ರೂಪವೆಂದು ನಂಬಿ ಉಚಿತವಾಗಿ ಕ್ಷೌರ ಸೇವೆ ಮಾಡುವ ಮಹಾ ಸೇವೆಯಲ್ಲಿ ತೊಡಗಿದ್ದಾರೆ.

> ಕಲೆ ಎಲ್ಲರಿಗೂ ಸಮಾನ ಎಂಬ ಸಾತ್ವಿಕ ದೃಷ್ಟಿಕೋನವು ಗುರುತ್ವದ ಆಧಾರವಾಗಿದೆ. ತಮ್ಮ ವೃತ್ತಿ ಜೀವನ ಶಿಸ್ತಿನೊಂದಿಗೆ ನಾಡಿನ ಸಂಸ್ಕೃತಿಯ ಗಂಭೀರತೆಯನ್ನೂ ಒದಗಿಸುತ್ತದೆ. ಸಂಘಟನೆಯ ಜೊತೆಗೆ ಕೇವಲ ವೃತ್ತಿ ಹವ್ಯಾಸವಲ್ಲ, ಜೀವನವನ್ನೇ ರೂಪಿಸುವ ಶಕ್ತಿವಿದೆ ಎಂದು ನಂಬಿದ್ದೇನೆ.



ಶಹಾಪೂರ ನಗರದಲ್ಲಿನ ವಸತಿಗೃಹ ಹಾಗೂ ಬಹು ಮಹಡಿಗಳ ಕಟ್ಟಡದಲ್ಲಿ ವಾಹನಗಳ ನಿಲುಗಡೆ ವ್ಯವಸ್ಥೆ ಇಲ್ಲದೇ ವಾಹನಗಳು ರಸ್ತೆಯಲ್ಲಿ ನಿಲುಗಡೆ ಮಾಡಲಾಗುತ್ತಿದ್ದು, ಇದರಿಂದ ಸಾರ್ವಜನಿಕರಿಗೆ ತೊಂದರೆಯಾಗುತ್ತಿದೆ. ಕೂಡಲೇ ಈ ಬಗ್ಗೆ ಮುನ್ಸಿಪಲ್ ಕಾನೂನಿನಡಿಯಲ್ಲಿ ಕಟ್ಟಡಗಳ ಮಾಲೀಕರ ವಿರುದ್ಧ ಕ್ರಮ ಕೈಗೊಳ್ಳಬೇಕೆಂದು ಪ್ರದೀಪ ಅಣಬಿ ಪೌರಾಯುಕ್ತರಿಗೆ ಮನವಿ ಪತ್ರ ಸಲ್ಲಿಸಿದರು.

# ಇಂದು ಹುಮನಾಬಾದ ತಹಸೀಲ್ ಕಛೇರಿ ಮುಂದೆ ಪ್ರತಿಭಟನೆ



ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ:ರಾಜ್ಯದ ಎಲ್ಲ ತಾಲ್ಲೂಕು ಕೇಂದ್ರಗಳಲ್ಲಿ ಜೂನ್ 18ರಂದು ಏಕಕಾಲಕ್ಕೆ ದಲಿತರ ಭೂಮಿ ವಸತಿ ಹಕ್ಕಿಗಾಗಿ ಮತ್ತು ಇತರೆ ಹಕ್ಕೋತ್ತಾಯಗಳಿಗೆ ಆಗ್ರಹಿಸಿ ಕರ್ನಾಟಕ ದಲಿತ ಸಂಘರ್ಷ ಸಮಿತಿ (ಅಂಬೇಡ್ಕರ್ ವಾದ) ವತಿಯಿಂದ ಪ್ರತಿಭಟನೆಯನ್ನು ಹಮ್ಮಿಕೊಳ್ಳಲಾಗಿದೆ ಎಂದು ಹುಮನಾಬಾದ ತಾಲ್ಲೂಕ ಸಂಚಾಲಕರಾದ ರಾಹುಲ್ ಉದ್ದಾ ರವರು ಪತ್ರಿಕಾಗೋಷ್ಠಿಯನ್ನುದ್ದೇಶಿಸಿ ಮಾತನಾಡುತ್ತಾ ತಿಳಿಸಿದ್ದಾರೆ. ಇಂದು ಬೆಳಿಗ್ಗೆ ರಾಜ್ಯದ ಎಲ್ಲಾ ತಾಲ್ಲೂಕು ಕೇಂದ್ರಗಳಲ್ಲಿ ತಹಸೀಲ್ ಕಛೇರಿ ಮುಂದೆ ಪ್ರತಿಭಟನೆ ಮಾಡಿ ಮುಖ್ಯಮಂತ್ರಿಗಳಿಗೆ ಬರೆದ ಮನವಿ ಪತ್ರವನ್ನು ತಹಸೀಲ್ದಾರ್ ರವರಿಗೆ ಮನವಿ ಪತ್ರ ಸಲ್ಲಿಸಲಾಗುವುದು. ಈ ಪ್ರತಿಭಟನೆಯಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಯಶಸ್ವಿಗೊಳಿಸಬೇಕೆಂದು ಮನವಿ ಮಾಡಿದ್ದಾರೆ.

# ನಾನಾ ಹುದ್ದೆಗಳ ನೇಮಕಾತಿಗೆ ನೇರ ಸಂದರ್ಶನ 21ಕ್ಕೆ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಜುಲೈ 17–ಇಲ್ಲಿನ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಿಂದ ಜಿಲ್ಲೆಯ ಸಿಂಧನೂರು ತಾಲೂಕಿನ ಜವಳಗೇರಾ ಸಮುದಾಯ ಆರೋಗ್ಯ ಕೇಂದ್ರದಲ್ಲಿ ಖಾಲಿ ಇರುವ ವಿವಿಧ ತಜ್ಞರ ಹುದ್ದೆಗಳನ್ನು ಗುತ್ತಿಗೆ ಆಧಾರದ ಮೇಲೆ ನೇಮಕಾತಿಗೆ ನೇರ ಸಂದರ್ಶನವನ್ನು ಹಮ್ಮಿಕೊಳ್ಳಲಾಗಿದ್ದು, ಆಸಕ್ತ ಅಭ್ಯರ್ಥಿಗಳು ಭಾಗವಹಿಸಬಹುದಾಗಿದೆ.

ಅರವಳಿಕೆ ತಜ್ಞರ ಹುದ್ದೆಗೆ ಎಮ್‌ಬಿಬಿಎಸ್, ಎಮ್.ಡಿ, ಡಿಎನ್‌ಬಿ, ಡಿಎ ಪದವಿ ಹೊಂದಿರಬೇಕು. ಗರಿಷ್ಠ 45 ವರ್ಷ ದೊಳಗಿರಬೇಕು.

ಮಕ್ಕಳ ತಜ್ಞರ ಹುದ್ದೆಗೆ ಎಮ್‌ಬಿಬಿಎಸ್, ಎಮ್.ಡಿ, ಪೀಡಿಯಾಟ್ರಿಕ್ಸ್/ ಡಿಎನ್‌ಬಿ ಪೀಡಿಯಾಟ್ರಿಕ್ಸ್/ ಡಿಸಿಎಚ್ ಪದವಿ ಹೊಂದಿರುವ ಅರ್ಹ ಅಭ್ಯರ್ಥಿಗಳು ಜುಲೈ 21ರ ಬೆಳಿಗ್ಗೆ 10.30ಕ್ಕೆ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳ ಕಾರ್ಯಾಲಯದಲ್ಲಿ ಹಮ್ಮಕೊಳ್ಳಲಾಗಿದ್ದ ನೇರ ಸಂದರ್ಶನದಲ್ಲಿ ಭಾಗವಹಿಸಬಹುದಾಗಿದೆ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಇದೇ 25 ರಂದು ಒಂದು ತಿಂಗಳ ಪರಿಯಂತ ಶ್ರಾವಣ ಮಾಸದ ನಿಮಿತ್ಯ ಆಧ್ಯಾತ್ಮಿಕ ಪ್ರವಚನ. ಪೂಜ್ಯ ಶ್ರೀ ಅದ್ವೈತಾನಂದ ಸ್ವಾಮಿಜಿ ಅವರಿಂದ.

(ವರದಿ. ಡಿ. ಕೆ. ಪ್ರಹ್ಲಾದ)

ಮಲ್ಲಮ್ಮ ನುಡಿ ವಾರ್ತೆ



ಬಸವಕಲ್ಯಾಣ :– ಜು 17 ಪ್ರತಿ ವರ್ಷದಂತೆ ಈ ವರ್ಷವೂ ಕೂಡ ಇಲ್ಲಿನ ಶ್ರೀ ಬಸವೇಶ್ವರ ದೇವಸ್ಥಾನ ಪಂಚ ಕಮಿಟಿಯ ಹಾಗೂ ವಿಶ್ವಸ್ಥ ಸಮಿತಿ ವತಿಯಿಂದ ಇದೇ ತಿಂಗಳ 25 ರಂದು ಒಂದು ತಿಂಗಳ ಪರಿಯಂತ ಶ್ರಾವಣ ಮಾಸದ ನಿಮಿತ್ಯ ಆಧ್ಯಾತ್ಮಿಕ ಪ್ರವಚನ ವಿಜಯಪುರ ಜ್ಞಾನ ಯೋಗಾಶ್ರಮದ ಪೂಜ್ಯಶ್ರೀ ಅದ್ವೈತಾನಂದ ಸ್ವಾಮಿಜಿ ಅವರಿಂದ ಪ್ರತಿ ದಿನ ಸಾಯಂಕಾಲ 6 – 30 ರಿಂದ 8 ಗಂಟೆಯವರೆಗೆ ನಡೆಯುವದು. ಜಾತಿ ಧರ್ಮ ಎನ್ನದೆ ಸದ್ಭಕ್ತರು ಭಾಗವಹಿಸಿ ಈ ಪ್ರವಚನದ ಅನುಭವ ಅಮೃತ ಸವಿದು ಪುನಿತರಾಗಲು ಕೋರಲಾಗಿದೆ.

ಪ್ರತಿ ದಿನ ಪ್ರವಚನಕ್ಕೆ ಬಂದು ಹೋಗಲು ವಾಹನ ವ್ಯವಸ್ಥೆ ಮಾಡಲಾಗಿದೆ ಎಂದು ಶ್ರೀ ಬಸವೇಶ್ವರ ದೇವಸ್ಥಾನ ಪಂಚ ಕಮಿಟಿಯ ಹಾಗೂ ವಿಶ್ವಸ್ಥ ಸಮಿತಿಯಿಂದ ಪತ್ರಿಕಾಗೋಷ್ಠಿಯಲ್ಲಿ ತಿಳಿಸಿದ್ದಾರೆ.

## ಕನ್ನಡ ಸೇನೆ ಕರ್ನಾಟಕ ಸಂಘಟನೆಗೆ ನಾಗಶೆಟ್ಟಿ ಸಜ್ಜನಶೆಟ್ಟಿ ನೇಮಕ

ಮಲ್ಲಮ್ಮ ನುಡಿ ವಾರ್ತೆ



ಬೀದರ್ :– ಕನ್ನಡ ಸೇನೆ ಕರ್ನಾಟಕ ಸಂಘಟನೆಯನ್ನು ಬಲಿಷ್ಠ ಪಡಿಸುವ ನಿಟ್ಟಿನಲ್ಲಿ ಕನ್ನಡ ನಾಡು, ನುಡಿ, ನೆಲ, ಜಲಕ್ಕಾಗಿ ಹೋರಾಟಕ್ಕೆ ಸಿದ್ದರಾಗಬೇಕೆಂದು ಕನ್ನಡ ಸೇನೆ ಕರ್ನಾಟಕ ರಾಜ್ಯ ಉಪಾಧ್ಯಕ್ಷ ಡಾ. ರವಿಸ್ವಾಮಿ ನಿರ್ಣಾರವರ ಆದೇಶದ ಮೇರೆಗೆ ನಾಗಶೆಟ್ಟಿ ಸಜ್ಜನಶೆಟ್ಟಿ ಸಂಗೋಳಗಿ ಇವರನ್ನು ಬೀದರ್ ಉತ್ತರ ಕ್ಷೇತ್ರದ ಪ್ರಧಾನ ಕಾರ್ಯದರ್ಶಿಯಾಗಿ ನೇಮಕ ಮಾಡಲಾಗಿದೆ ಎಂದು ಬೀದರ್ ತಾಲೂಕಾಧ್ಯಕ್ಷ ರಾಜಶೇಖರ್ ಮಂಗಲ ಪೇಟೆ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



ಬೆಂಗಳೂರು:ಕ್ಯಾಬಿನೆಟ್ ಮಂತ್ರಿಯಾಗಿ ಸೇವೆ ಸಲ್ಲಿಸುತ್ತಿರುವ ಜಮೀರ್ ಅಹ್ಮದ್ ಖಾನ್‌ರವರಿಗೆ ಹಿಂದುಳಿದ ವರ್ಗಗಳ ಹಿರಿಯ ನಾಯಕ ಹಾಗೂ ಕಾಂಗ್ರೆಸ್ ಪಕ್ಷದ ಮುಖಂಡರಾದ ಡಾ.ಸಿದ್ರಾಮ್ ಡಿ.ವಾಘಮಾರೆರವರು ಭೇಟಿ ನೀಡಿ ಕಾಂಗ್ರೆಸ್ ಪಕ್ಷದ ಸಂಘಟನೆ ಮತ್ತು ಕಾಂಗ್ರೆಸ್ ಪಕ್ಷದ ಕಾರ್ಯಕರ್ತರಿಗೆ ಸ್ಥಾನಮಾನ ನೀಡುವಂತೆ ಮನವಿ ಮಾಡಿದ್ದಾರೆ. (ಮಲ್ಲಮ್ಮ ನುಡಿ ಚಿತ್ರ).

## ಯಕ್ಲಾಸಪೂರು ಗ್ರಾಮದ ನಾಗಲಕ್ಷ್ಮೀ ಕಾಣೆ: ಪತ್ತೆಗೆ ಪೊಲೀಸರ ಮನವಿ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಜುಲೈ 17 –: ಇಲ್ಲಿನ ಗ್ರಾಮೀಣ ಪೊಲೀಸ್ ಠಾಣೆಯ ವ್ಯಾಪ್ತಿಯ ನಿವಾಸಿಯಾದ ನಾಗಲಕ್ಷ್ಮೀ ಗಂಡ ನಾಗೇಂದ್ರಪ್ಪ (46) ಎಂಬ ಮಹಿಳೆಯು ಜುಲೈ 13ರ ಬೆಳಿಗ್ಗೆ 09.30 ಗಂಟೆಗೆ ಕೈಯಲ್ಲಿ ಒಂದು ಚೀಲವನ್ನು ಹಿಡಿದುಕೊಂಡು ಯಕ್ಲಾಸಪೂರು ಗ್ರಾಮದ ಬಸ್ಸ್ ನಿಲ್ದಾಣ ಕಡೆಗೆ ಹೋದವಳು ಮರಳಿ ಮನೆಗೆ ಬಾರದೆ ಕಾಣೆಯಾಗಿದ್ದು, ಈ ಕುರಿತು ರಾಯಚೂರು ಗ್ರಾಮೀಣ ಪೊಲೀಸ್ ಠಾಣೆಯಲ್ಲಿ ಗುನ್ನೆ ನಂ:127/2025 ಕಲಂನಡಿ ಪ್ರಕರಣ ದಾಖಲಾಗಿದೆ.

ಕಾಣೆಯಾದ ನಾಗಲಕ್ಷ್ಮೀ ಅವರ ಗಂಡ ನಾಗೇಂದ್ರಪ್ಪನು ಜುಲೈ 12ರ ಬೆಳಗ್ಗೆ 10.30 ಗಂಟೆಗೆ ಕರ್ನೂಲ್‌ನಲ್ಲಿರುವ ತನ್ನ ಮಗ ದೇವರಾಜನಿಗೆ ಮಾತನಾಡಿಸಿ ಕರ್ನೂಲ್ ನಿಂದ ವಾಪಾಸು ಜುಲೈ 13ರಂದು ಯಕ್ಲಾಸಪುರು ಗ್ರಾಮಕ್ಕೆ ಅಂದು ಮಧ್ಯಾಹ್ನ 1.30ರ ಸುಮಾರಿಗೆ ಬಂದು ನೋಡಿದಾಗ ಮನೆಯಲ್ಲಿ ಯಾರು ಇರದೇ ಕೀಲಿ ಹಾಕಿದ್ದು, ಪಿರ್ಯಾದಿಯು ತಮ್ಮ ಮನೆಯ ಪಕ್ಕದ ನಾಗಮ್ಮಳಿಗೆ ವಿಚಾರಿಸಿದಾಗ ಬೆಳಗ್ಗೆ 9.30ರ ಸುಮಾರಿಗೆ ನಾಗಲಕ್ಷ್ಮೀ ಯು ಕೈಯಲ್ಲಿ ಒಂದು ಚೀಲ ಹಿಡಿದು–ಕೊಂಡು ಎಕ್ಲಾಸಪೂರು ಗ್ರಾಮದ ಬಸ್ಸ್ ನಿಲ್ದಾಣ ಕಡೆಗೆ ಹೋದಳು ಎಂದು ತಿಳಿಸಿರುತ್ತಾರೆ. ತಾವು ಯಕ್ಲಾಸಪುರ ಗ್ರಾಮದ ಸುತ್ತಲು ಮತ್ತು ಇನ್ನಿತರ ಕಡೆ ಹುಡುಕಿದಾಗ ಎಲ್ಲಿಯೂ ನಾಗಲಕ್ಷ್ಮೀ ಯು ಸಿಕ್ಕಿರುವುದಿಲ್ಲ ಎಂದು ಕಾಣೆ–ಯಾದ ಮಹಿಳೆಯ ಪತಿಯು ನಾಗೇಂದ್ರಪ್ಪ ಅವರು ದೂರು ದಾಖಲಿಸಿದ್ದಾರೆ.

ಕಾಣೆಯಾದ ಮಹಿಳೆ ಚಹರಾ ಪಟ್ಟಿ: ಕಾಣೆಯಾದ ನಾಗಲಕ್ಷ್ಮೀ 8ನೇ ತರಗತಿ ಓದಿದ್ದು, ವಯಸ್ಸು 46 ವರ್ಷ, ಜಾತಿ ಕುರುಬರು, ಉದ್ಯೋಗ ಮನೆಕೆಲಸ ಮಾಡಿಕೊಂಡಿದ್ದಾರೆ. 5.4 ಅಡಿ ಎತ್ತರ, ಗೋಧಿ ಮೈ ಬಣ್ಣ, ಚಪ್ಪಟೆಯ ಮುಖ, ಕಪ್ಪು ಕೂದಲು, ಗುಲಾಬಿ ಬಣ್ಣದ ಸೀರೆ ಹಾಗೂ ಕೆಂಪು ಬಣ್ಣದ ಕುಪ್ಪಸ ಧರಿಸಿದ್ದು, ಕನ್ನಡ, ತೆಲುಗು ಹಾಗೂ ಹಿಂದಿ ಭಾಷೆ ಮಾತನಾಡುತ್ತಾಳೆ. ಈ ಕಾಣೆಯಾದ ಮಹಿಳೆಯ ಬಗ್ಗೆ ಸುಳಿವು ಸಿಕ್ಕಲ್ಲಿ ರಾಯಚೂರು ಗ್ರಾಮೀಣ ಪೊಲೀಸ್ ಠಾಣೆಯನ್ನು ಸಂಪರ್ಕ ಮಾಡುವಂತೆ ಠಾಣೆಯ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಜಾಹೀರಾತಿಗಾಗಿ ಇಂದೇ
ಸಂಪರ್ಕಿಸಿ:9449732000

# ವಚನಗಳ ಸಾಂಸ್ಕೃತಿಕ ಅಧ್ಯಯನ ನಡೆಯಲಿ : ಡಾ. ಮಯೂರ ಪೂಜಾರಿ.




ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ : – ಜು 17 ಹನ್ನೆರಡನೇ ಶತಮಾನದಲ್ಲಿ ಶರಣರು ಬರೆದ ವಚನ ಸಾಹಿತ್ಯ ಭಾರತೀಯ ತತ್ವಶಾಸ್ತ್ರ ಪರಂಪರೆಯ ಬಹುದೊಡ್ಡ ಭಾಗವಾಗಿವೆ. ವೈಚಾರಿಕ ಅರಿವು, ನೈತಿಕ ಹೊಣೆಗಾರಿಕೆ ವಚನಗಳ ತಾತ್ವಿಕತೆಯಾಗಿದೆ ಎಂದು ಸಿಯುಕೆ ಶಿಕ್ಷಣಶಾಸ್ತ್ರ ವಿಭಾಗದ ಸಹಾಯಕ ಪ್ರಾಧ್ಯಾಪಕ ಡಾ. ಮಯೂರ ಪೂಜಾರಿ ಹೇಳಿದರು.

ಕಲಬುರ್ಗಿಯ ಕರ್ನಾಟಕ ಕೇಂದ್ರೀಯ ವಿಶ್ವವಿದ್ಯಾಲಯ ಶಿಕ್ಷಣಶಾಸ್ತ್ರ ವಿಭಾಗದಿಂದ ಗುರುವಾರ ಬಸವಕಲ್ಯಾಣದ ಅನುಭವ ಮಂಟಪದಲ್ಲಿ ಹಮ್ಮಿಕೊಂಡಿದ್ದ 'ಸಮಕಾಲೀನ ಶೈಕ್ಷಣಿಕ ಸವಾಲು ಮತ್ತು ಸಾಧ್ಯತೆ, ಕುರಿತ ಸಂವಾದದಲ್ಲಿ ಮಾತನಾಡಿದ ಅವರು,

ಉನ್ನತ ಶಿಕ್ಷಣದಲ್ಲಿ ವಚನ ಸಾಹಿತ್ಯ ಮತ್ತು ವಚನಕಾರರ ಅಧ್ಯಯನ ಈ ಕಾಲದ ಅಗತ್ಯ ಎಂದರು. ವಚನಗಳು, ಬಸವಣ್ಣ, ಅಲ್ಲಮ ಉನ್ನತ ಶಿಕ್ಷಣದಲ್ಲಿ ಸಂಶೋಧನೆ, ಸಾಮಾಜಿಕ ಹಾಗೂ ಸಾಂಸ್ಕೃತಿಕ ವಿಮರ್ಶೆಯ ಸ್ವರೂಪ ಪಡೆಯುವುದು ಮುಖ್ಯ. ಹಾಗೆಯೇ ಮೌಲ್ಯಗಳನ್ನು ಬೆಳೆಸುವ , ಚಾರಿತ್ರಿಕ ಪ್ರಜ್ಞೆ ರೂಪಿಸುವ ನಿಟ್ಟಿನಲ್ಲಿ ಶಿಕ್ಷಣದ ಬೆಳವಣಿಗೆ ನಡೆಯಬೇಕು ಎಂದರು.

ದೆಹಲಿ ವಿಶ್ವವಿದ್ಯಾಲಯದ ಪ್ರಾಧ್ಯಾಪಕ ಡಾ. ವಿಕಾಸ ಕುಮಾರ್ ಮಾತನಾಡಿ,

ಬಸವಣ್ಣ ಮತ್ತು ಅವರ ಸಮಕಾಲೀನ ವಚನಕಾರರ ಚಾರಿತ್ರಿಕ ಸಂದರ್ಭ ಅನಂತವಾದದ್ದು. ಶರಣರು ಕಟ್ಟಿಕೊಟ್ಟ ತಾತ್ವಿಕ ಚಿಂತನೆ ಅತ್ಯಂತ ವೈಚಾರಿಕ, ಬೌದ್ಧಿಕ ನಿಲುವಿನಿಂದ ಕೂಡಿದೆ. ಉತ್ತರ ಭಾರತದ ಜನರಿಗೆ ಶರಣರ ತತ್ವಸಿದ್ಧಾಂತಗಳ ಪರಿಚಯವಿಲ್ಲ. ಹಿಂದಿ, ಬೆಂಗಾಲಿ , ಗುಜರಾತಿ ಸೇರಿ ಭಾರತೀಯ ಬೇರೆ ಬೇರೆ ಭಾಷೆಯಲ್ಲಿ ಕನ್ನಡದ ವಚನಗಳ ತರ್ಜುಮೆ ಅತ್ಯಗತ್ಯ ಎಂದರು.

ಭಾರತದ ಹಲವು ವಿಶ್ವವಿದ್ಯಾಲಯಗಳಲ್ಲಿ ವಚನಗಳ ಅಧ್ಯಯನ ನಡೆಯುವ ಅಗತ್ಯವಿದೆ. ಕನ್ನಡೇತರ ಸಾಹಿತ್ಯದ ಓದುಗರಿಗೆ, ಬರಹಗಾರರಿಗೆ ವಚನ ಸಾಹಿತ್ಯ ತಲುಪಬೇಕಾಗಿದೆ ಎಂದರು.

ಸಿಯುಕೆ ಅರ್ಥಶಾಸ್ತ್ರದ ಸಹಾಯಕ ಪ್ರಾಧ್ಯಾಪಕರಾದ ಡಾ. ಮಲ್ಲೇಶ್ ಉಮ್ಮಲ್ಲಾ ಮಾತನಾಡಿ, ಶರಣರ ಆರ್ಥಿಕ ಹಾಗೂ ರಾಜಕೀಯ ಚಿಂತನೆ ಅಕಾಡೆಮಿಕ್ ಚರ್ಚೆಯ ಭಾಗವಾಗಬೇಕು. ಇಷ್ಟೊಂದು ವಿಶಿಷ್ಟ ಮತ್ತು ವೈವಿಧ್ಯಮಯ ಬದುಕಿನ ಚಿಂತನೆ ಕಟ್ಟಿಕೊಟ್ಟ ಸಾಹಿತ್ಯ ಭಾರತೀಯ ಸಂದರ್ಭದಲ್ಲಿ ಸಿಗದು. ದೇಶದ ಎಲ್ಲ ವಿಶ್ವವಿದ್ಯಾಲಯದ ಆವರಣಗಳಲ್ಲಿ ವಚನ ಸಾಹಿತ್ಯದ ಚರ್ಚೆಯಾಗಬೇಕು ಎಂದರು.

ಸಿಯುಕೆ ಹಳೆಯ ವಿದ್ಯಾರ್ಥಿ ಹಾಗೂ ಉಪನ್ಯಾಸಕರಾದ ಡಾ. ಭೀಮಾಶಂಕರ ಬಿರಾದಾರ ಮಾತನಾಡಿ, ಸಾಮಾಜಿಕ, ಆರ್ಥಿಕ ಹಾಗೂ ಸಾಂಸ್ಕೃತಿಕ ಸಂಗತಿಗಳ ಬಗೆಗೆ ಹೆಚ್ಚು ಗಂಭೀರವಾದ ಚಿಂತನೆ ಹೊಂದಿದೆ ವಚನಗಳು ಜಗತ್ತಿನ ಎಲ್ಲ ಅಕಾಡೆಮಿಕ್ ವಲಯಗಳಲ್ಲಿ ಅನುಸಂಧಾನಕ್ಕೆ ಒಳಗಾಗಬೇಕು. ಎ.ಕೆ. ರಾಮಾನುಜನ್, ಓಎಲ್ ನಾಗಭೂಷಣ ಸ್ವಾಮಿ ಮೊದಲಾದ ವಿದ್ವಾಂಸರು ಹಾಗೂ ಬಸವ ಸಮಿತಿಯ ಸಿಯುಕೆ ವತಿಯಿಂದ ವಚನಗಳು ಬೇರೆ ಬೇರೆ ಭಾಷೆಗಳಲ್ಲಿ ಭಾಷಾಂತರಗೊಂಡಿವೆ. ಶೈಕ್ಷಣಿಕ ವಲಯದಲ್ಲಿ ಸಂಶೋಧನಾತ್ಮಕ ಭಾಗವಾಗಿ, ಸಾಮಾಜಿಕ, ಸಾಂಸ್ಕೃತಿಕ ನೆಲೆಯಲ್ಲಿ ವಚನಗಳನ್ನು ಗ್ರಹಿಸಲಾಗುತ್ತಿದೆ. ವಚನ ಸಾಹಿತ್ಯದ ಬಹುಶಿಸ್ತೀಯ ಅಧ್ಯಯನಕ್ಕೆ ಹೆಚ್ಚಿನ ಒತ್ತು ನೀಡಬೇಕು ಎಂದರು.

ಸಿಯುಕೆ ಶಿಕ್ಷಣ ಶಾಸ್ತ್ರ ವಿಭಾಗದ ಪ್ರಾಧ್ಯಾಪಕ ಹಾಗೂ ಸಂವಾದ ಉಪನ್ಯಾಸದ ಸಂಯೋಜಕ ಡಾ. ಥೀಯಾಗು, ಡಾ. ಪಿ. ಬಿ. ಬಾಗೇವಾಡಿ,

ಕೇರಳ ಕೇಂದ್ರೀಯ ವಿವಿಯ ಡಾ. ಶಿವಕುಮಾರ, ಡಾ. ಸನೂಪ್ ಎಂ. ಎಸ್, ಬಿಹಾರದ ಡಾ. ಓಂಕಾರ, ಒಡಿಸ್ಸಾ ವಿವಿಯ ಡಾ ಸುಶಾಂತ್ ನಾಯಕ, ದೆಹಲಿ ವಿವಿಯ ಡಾ. ಅಖಿಲೇಶ್ ಮಿಶ್ರಾ, ಜೋತ್ಸ್ನಾ, ಡಾ. ಸಂತೋಷ , ಡಾ. ಶಿವಂ, ಪ್ರಸಾದ್ ಸ್ವಾಮಿ, ರಾಜು ಶಿಂಧೆ, ಪವನ ಪಾಟೀಲ, ಗಂಗಾಧರ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

ಡಾ. ಬಸವರಾಜ ಖಂಡಾಳೆ ಸ್ವಾಗತಿಸಿದರು. ಗಂಗಾಧರ ಸಾಲಿಮಠ ವಂದಿಸಿದರು.



ಹುಮನಾಬಾದ:ನೂತನವಾಗಿ ಕನ್ನಡ ಸೇನೆ ಕರ್ನಾಟಕ ಸಂಘಟನೆಯ ಮಹಿಳಾ ಜಿಲ್ಲಾಧ್ಯಕ್ಷರಾಗಿ ಆಯ್ಕೆಯಾದ ಸಾಕ್ಷಿ ಆರ್. ಹಿರೇಮಠ ಇವರನ್ನು ಆಶ್ರಯ ದೀಪ ಟ್ರಸ್ಟ್‌ನ (ರಿ) ವತಿಯಿಂದ ಉಪಾಧ್ಯಕ್ಷ ಅರವಿಂದ ಜೋಗಿರೆರವರು ಸನ್ಮಾನಿಸಿ ಶುಭ ಕೋರಿದರು. ಈ ಸಂದರ್ಭದಲ್ಲಿ ಖಜಾಂಚಿ ಮೋಹನಸಿಂಗ್, ಸದಸ್ಯರಾದ ಉದಯಕುಮಾರ ವಾರದ್, ಯುವರಾಜ್ ಐಹೊಳೆ, ರೇವಣಸಿದ್ಧಯ್ಯ ಹಿರೇಮಠ ಉಪಸ್ಥಿತರಿದ್ದರು. (ಮಲ್ಲಮ್ಮ ನುಡಿ ಚಿತ್ರ).

## ಕೊಪ್ಪಳ ಲೋಕಾಯುಕ್ತ: ಜು. 19 ರಂದು ಯಲಬುರ್ಗಾದಲ್ಲಿ ಅಹವಾಲು ಸ್ವೀಕಾರ ಸಭೆ




ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಗೌರವಾನ್ವಿತ ಲೋಕಾಯುಕ್ತರು ಬೆಂಗಳೂರು ಹಾಗೂ ಅಪರ ಪೊಲೀಸ್ ಮಹಾನಿರ್ದೇಶಕರು, ಕರ್ನಾಟಕ ಲೋಕಾಯುಕ್ತ ಬೆಂಗಳೂರು ಅವರ ಆದೇಶದ ಮೇರೆಗೆ ಕೊಪ್ಪಳ ಲೋಕಾಯುಕ್ತ ಅಧಿಕಾರಿಗಳಿಂದ ಯಲಬುರ್ಗಾ ಹಾಗೂ ಕುಕನೂರು ತಾಲ್ಲೂಕುಗಳನ್ನೊಳಗೊಂಡಂತೆ ಸಾರ್ವಜನಿಕರ ಕುಂದುಕೊರತೆಗಳ ಅಹವಾಲು ಸ್ವೀಕರಿಸಲು ಜುಲೈ 19 ರಂದು ಬೆಳಿಗ್ಗೆ 11 ರಿಂದ ಮಧ್ಯಾಹ್ನ 1.30 ಗಂಟೆಯವರೆಗೆ ಯಲಬುರ್ಗಾ ತಾಲ್ಲೂಕು ಪಂಚಾಯತ್ ಸಭಾಂಗಣದಲ್ಲಿ ಅಹವಾಲು ಸ್ವೀಕಾರ ಸಭೆಯನ್ನು ಹಮ್ಮಿಕೊಳ್ಳಲಾಗಿದೆ.

ಈ ಸಭೆಯಲ್ಲಿ ಲೋಕಾಯುಕ್ತ ಅಧಿಕಾರಿಗಳು ಎಲ್ಲಾ ಇಲಾಖೆಯ ತಾಲ್ಲೂಕಮಟ್ಟದ ಅಧಿಕಾರಿಗಳೊಂದಿಗೆ ಸಭೆ ನಡೆಸಲಿದ್ದಾರೆ. ಯಲಬುರ್ಗಾ ಹಾಗೂ ಕುಕನೂರು ತಾಲ್ಲೂಕುಗಳ ವ್ಯಾಪ್ತಿಯ ಸಾರ್ವಜನಿಕರಲ್ಲಿ ಯಾರಿಗಾದರೂ ಸರ್ಕಾರಿ ಅಧಿಕಾರಿಗಳಿಂದ ತಮಗೆ ಆಗಬೇಕಾದ ಕೆಲಸಗಳಲ್ಲಿ ವಿಳಂಬವಾಗಿದ್ದರೆ ಅಥವಾ ಅಧಿಕಾರಿಗಳು ನ್ಯಾಯಯುತವಾಗಿ ಮಾಡಿಕೊಡಬೇಕಾದ ಕೆಲಸಗಳಲ್ಲಿ ವೃಥಾ ತೊಂದರೆ ಕೊಡುತ್ತಿದ್ದರೆ ಅಥವಾ ಲಂಚ ಕೇಳುವುದು ಇತ್ಯಾದಿ ದುರಾಡಳಿತದಲ್ಲಿ ತೊಡಗಿದ್ದರೆ, ಈ ಕುರಿತು ಸಾರ್ವಜನಿಕರು ತಮ್ಮ ಕುಂದುಕೊರತೆಗಳನ್ನು ನೇರವಾಗಿ ಬಂದು ಸಲ್ಲಿಸಲು ಹಾಗೂ ಸ್ಥಳದಲ್ಲಿಯೇ ಇದ್ದ ಅಧಿಕಾರಿಗಳೊಂದಿಗೆ ಕೆಲಸ ನೆರವೇರಿಸಿಕೊಳ್ಳಲು ಅಥವಾ ಸ್ಥಳದಲ್ಲಿಯೇ ದೂರು ಅರ್ಜಿಯ ಫಾರಂ ನಂ: 1 & 2 ತೆ–ಗೆದುಕೊಂಡು ದೂರು ನೀಡಲು ಅನುಕೂಲ ಕಲ್ಪಿಸಲಾಗಿದೆ. ಸಂಬಂಧಿಸಿದ ತಾಲ್ಲೂಕಿನ ಸಾರ್ವಜನಿಕರು ಈ ಸಭೆಯ ಸದುಪಯೋಗಪಡೆದುಕೊಳ್ಳಲು ಈ ಮೂಲಕ ತಿಳಿಸಲಾಗಿದೆ. ಹೆಚ್ಚಿನ ಮಾಹಿತಿಗಾಗಿ ಮೊಬೈಲ್ ಸಂಖ್ಯೆ: 9364062699, 9364062700, 9364062701, 9364062702 ಹಾಗೂ 9364062703 ಗೆ ಸಂಪರ್ಕಿಸಬಹುದು ಎಂದು ಕರ್ನಾಟಕ ಲೋಕಾಯುಕ್ತ ಕೊಪ್ಪಳ ಪೊಲೀಸ್ ಉಪಾಧೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಗೋ ಶಾಲೆ ವಾರ್ಷಿಕೋತ್ಸವ ನಾಳೆ

ಮಲ್ಲಮ್ಮ ನುಡಿ ವಾರ್ತೆ

ಬೀದರ. ಜು. 17 : ತಾಲ್ಲೂಕಿನ ನಾಗೋರಾ ಗ್ರಾಮದ ಕಾಮಧೇನು ಗೋ ಶಾಲೆಯಲ್ಲಿ ಜುಲೈ 19 ರಂದು ಬೆಳಿಗ್ಗೆ 11ಕ್ಕೆ ವಾರ್ಷಿಕೋತ್ಸವ ಹಾಗೂ ಸನ್ಮಾನ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ತಮಲೂರಿನ ಶಿವಾನಂದ ಶಿವಾಚಾರ್ಯರು ದಿವ್ಯ ಸಾನಿಧ್ಯ ವಹಿಸುವರು. ಬೀದರ್ ದಕ್ಷಿಣ ಶಾಸಕ ಡಾ. ಶೈಲೇಂದ್ರ ಬೆಲ್ದಾಳೆ ಅಧ್ಯಕ್ಷತೆ ವಹಿಸುವರು. ಮುಖ್ಯಅತಿಥಿಗಳಾಗಿ ತೋಟಗಾರಿಕೆ ಕಾಲೇಜಿನ ಡೀನ್ ಡಾ. ಎಸ್.ವಿ. ಪಾಟೀಲ, ಪಶು ವೈದ್ಯಕೀಯ ಕಾಲೇಜಿನ ಸಹ ಪ್ರಾಧ್ಯಾಪಕ ಡಾ. ಚನ್ನಪ್ಪಗೌಡ ಬಿರಾದಾರ ಪಾಲ್ಗೊಳ್ಳುವರು.

ತೋಟಗಾರಿಕೆ ಕಾಲೇಜಿನ ಸಹಾಯಕ ಪ್ರಾಧ್ಯಾಪಕರಾದ ಡಾ. ವಿಜಯ ಮಹಾಂತೇಶ, ಡಾ. ವಿ.ಪಿ. ಸಿಂಗ್, ಪಂಚಗವ್ಯ ತಜ್ಞ ಡಾ. ಡಿ.ಪಿ. ರಮೇಶ, ಗೋ ಸೇವಾ ಗತಿವಿಧಿಯ ಕರ್ನಾಟಕ ಉತ್ತರ ಪ್ರಾಂತ ಸಹ ಸಂಯೋಜಕ ಚನ್ನಬಸವಂತ ರೆಡ್ಡಿ ಹಾಗೂ ಕಲಬುರಗಿ ವಿಭಾಗ ಸಂಯೋಜಕ ಶ್ರೀಕಾಂತ ಮೋದಿ ಅವರನ್ನು ಸನ್ಮಾನಿಸಲಾಗುವುದು ಎಂದು ಗೋ ಶಾಲೆಯ ಸಂಚಾಲಕ ಶಿವಕುಮಾರ ಹಿರೇಮಠ ತಿಳಿಸಿದ್ದಾರೆ.

ಇದೇ ವೇಳೆ ಗೋ ಉತ್ಪನ್ನಗಳ ಪ್ರದರ್ಶನ, ಮಾರಾಟ, ಬೀದರನ ಶ್ರೀ ಸಿದ್ಧರಾಮೇಶ್ವರ ಆಯುರ್ವೇದಿಕ್ ಮೆಡಿಕಲ್ ಕಾಲೇಜು ಸಹಯೋಗದಲ್ಲಿ ಉಚಿತ ಆರೋಗ್ಯ ತಪಾಸಣಾ ಶಿಬಿರ ನಡೆಯಲಿದೆ. ರೈತರಿಗೆ ಗೋ ಕೃಪಾಮೃತ ಉಚಿತವಾಗಿ ವಿತರಿಸಲಾಗುವುದು ಎಂದು ಹೇಳಿದ್ದಾರೆ.

# ರೋಟರಿ ಕ್ಲಬ್ ಆಫ್ ಬೀದರ್ ಫೋರ್ಟ್ ಕಟ್ಟಿಮನಿ ಅಧ್ಯಕ್ಷ, ಪೊಬ್ಬಾ ಕಾರ್ಯದರ್ಶಿ




ಮಲ್ಲಮ್ಮನುಡಿವಾರ್ತೆ ಬೀದರ. ಜು.17: ರೋಟರಿ ಕ್ಲಬ್ ಆಫ್ ಬೀದರ್ ಫೋರ್ಟ್ ನೂತನ ಅಧ್ಯಕ್ಷರಾಗಿ ಡಾ. ಉಲ್ಲಾಸ್ ಕಟ್ಟಿಮನಿ, ಕಾರ್ಯದರ್ಶಿಯಾಗಿ ಆನಂದಕುಮಾರ ಪೊಬ್ಬಾ ಹಾಗೂ ಖಜಾಂಚಿಯಾಗಿ ಸಚ್ಚಿದಾನಂದ ಚಿದ್ರೆ ಆಯ್ಕೆಯಾಗಿದ್ದಾರೆ.

ಭಾಲ್ಕಿ ತಾಲ್ಲೂಕಿನ ಹಾಲಹಳ್ಳಿ ಸಮೀಪದ ದಾನಾಪಾನಿ ಹೋಟೆಲ್ ಸಭಾಂಗಣದಲ್ಲಿ ಈಚೆಗೆ ನಡೆದ ಸಮಾರಂಭದಲ್ಲಿ ನೂತನ ಪದಾಧಿಕಾರಿಗಳು ಪದಗ್ರಹಣ ಮಾಡಿದರು.

ಮುಖ್ಯ ಅತಿಥಿಯಾಗಿದ್ದ ಔರಾದ್ ತಹಶೀಲ್ದಾರ್ ಮಹೇಶ ಪಾಟೀಲ ಮಾತನಾಡಿ, ಅಂತರರಾಷ್ಟ್ರೀಯ ರೋಟರಿ ಸಂಸ್ಥೆಯು ಸಮಾಜಮುಖಿ ಕಾರ್ಯಗಳಲ್ಲಿ ತೊಡಗಿಸಿಕೊಂಡಿದೆ. ಸಂಸ್ಥೆಯ ಸೇವಾ ಚಟುವಟಿಕೆಗಳ ಲಾಭ ಗ್ರಾಮೀಣ ಭಾಗ ಹಾಗೂ ಅವಶ್ಯಕತೆ ಇರುವ ವ್ಯಕ್ತಿಗಳಿಗೆ ತಲುಪುವಂತಾಗಬೇಕು ಎಂದು ಹೇಳಿದರು. ಅಂತರರಾಷ್ಟ್ರೀಯ ರೋಟರಿ ಜಿಲ್ಲೆ 3160 ಪಬ್ಲಿಕ್ ಇಮೇಜ್ ಚೇರ್‌ಮೆನ್ ಬಸವರಾಜ ಧನ್ನೂರ, ರೋಟರಿ ಕಲ್ಯಾಣ ಝೋನ್ ಸಹಾಯಕ ಗವರ್ನರ್ ಹಾವಶೆಟ್ಟಿ ಪಾಟೀಲ ಮಾತನಾಡಿದರು.

ವಿವಿಧ ಕ್ಷೇತ್ರಗಳಿಗೆ ನೀಡಿದ ಕೊಡುಗೆಗಾಗಿ ಗಾಯಕಿ ಶಿವಾನಿ ಸ್ವಾಮಿ, ದಿಲೀಪ್ ಸೈಕಲ್ ಸ್ಟೋರ್‌ನ ನರೇಂದ್ರ ಸಾಂಗ್ವಿ, ಹೆರಿಗೆ ತಜ್ಞೆ ಡಾ. ವಿಜಯಶ್ರೀ ಬಶೆಟ್ಟಿ, ನುರಿತ ದಂತ ವೈದ್ಯ ಎಸ್.ಎನ್. ಮಠ ಹಾಗೂ ತಿರುಮಲಾ ಸಿಲ್ಕ್ ಶೋ ರೂಂ ಮಾಲೀಕ ಬಾಬುರಾವ್ ಪಸಾರಗೆ ಅವರನ್ನು ಸನ್ಮಾನಿಸಲಾಯಿತು.

ಡಾ. ರಘು ಕೃಷ್ಣಮೂರ್ತಿ, ರವಿ ಮೂಲಗೆ, ಶಿವಕುಮಾರ ಯಲಾಲ್, ಸೂರ್ಯಕಾಂತ ರಾಮಶೆಟ್ಟಿ ಮತ್ತಿತರರು ಇದ್ದರು.

ಕ್ಲಬ್ ನಿಕಟಪೂರ್ವ ಅಧ್ಯಕ್ಷ ಗುಂಡಪ್ಪ ಘೋದೆ ಸ್ವಾಗತಿಸಿದರು. ಪ್ರೊ. ಎಸ್.ಬಿ. ಚಿಟ್ಟಾ ಹಾಗೂ ಝುಹೀರ್ ಅನ್ವರ್ ನಿರೂಪಿಸಿದರು.

**ರೋಟರಿ ಕ್ಲಬ್‌ಗಳಿಗೆ ಬಸವರಾಜ ಧನ್ನೂರ ದೇಣಿಗೆ**

ಸಮಾರಂಭದಲ್ಲಿ ಅಂತರರಾಷ್ಟ್ರೀಯ ರೋಟರಿ ಜಿಲ್ಲೆ 3160 ಪಬ್ಲಿಕ್ ಇಮೇಜ್ ಚೇರ್‌ಮೆನ್ ಬಸವರಾಜ ಧನ್ನೂರ ಅವರು ಬೀದರನ ರೋಟರಿ ಕ್ಲಬ್‌ಗಳಿಗೆ ರೂ. 50 ಸಾವಿರ ದೇಣಿಗೆ ನೀಡಿದರು. ರೋಟರಿ ಕಲ್ಯಾಣ ಝೋನ್ ಸಹಾಯಕ ಗವರ್ನರ್ ಹಾವಶೆಟ್ಟಿ ಪಾಟೀಲ ಅವರಿಗೆ ದೇಣಿಗೆ ಹಣ ಹಸ್ತಾಂತರಿಸಿದರು. ನನ್ನ 50ನೇ ಜನ್ಮದಿನದ ಸವಿ ನೆನಪಿಗಾಗಿ ಜನ ಹಿತದ ಯೋಜನೆ ರೂಪಿಸಿ ಅನುಷ್ಠಾನಗೊಳಿಸಲು ಕ್ಲಬ್‌ಗಳಿಗೆ ದೇಣಿಗೆ ಕೊಡಲಾಗಿದೆ ಎಂದು ಅವರು ತಿಳಿಸಿದರು.

ರೋಟರಿ ಮೂಲಕ ಕಳೆದ ಎರಡೂವರೆ ದಶಕದಿಂದ ಸಮಾಜಕ್ಕೆ ಸಾಧ್ಯವಾದ ಕೊಡುಗೆ ನೀಡಲು ಪ್ರಯತ್ನಿಸಿದ್ದೇನೆ ಎಂದು ಹೇಳಿದರು. ರೋಟರಿ ವಿವಿಧ ಕ್ಷೇತ್ರಗಳ ಜನರು ಒಂದೆಡೆ ಸೇರಿ, ಸಮಾಜ ಸೇವೆ ಮಾಡುವ ವೇದಿಕೆಯಾಗಿದೆ ಎಂದು ತಿಳಿಸಿದರು.

# ನಾಗರಿಕ ಸೇವಾ ಪರೀಕ್ಷೆಯಲ್ಲಿ ಯಶಸ್ಸಿಗೆ ಪ್ರಯತ್ನಿಸಿ



ಬೀದರ.ಜು.17: ವಿದ್ಯಾರ್ಥಿಗಳು ಕೇಂದ್ರ ಲೋಕಸೇವಾ ಆಯೋಗ ನಡೆಸುವ ನಾಗರಿಕ ಸೇವಾ ಪರೀಕ್ಷೆಗಳಲ್ಲಿ ಯಶಸ್ಸುಗಳಿಸಲು ಪ್ರಯತ್ನಿಸಬೇಕು ಎಂದು ವಾಣಿಜ್ಯ ತೆರಿಗೆ ಅಧಿಕಾರಿ ಮಹೇಶ ಮಾಶೆಟ್ಟಿ ಹೇಳಿದರು.

ಇಲ್ಲಿಯ ಕರ್ನಾಟಕ ರಾಜ್ಯ ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾಲಯದ ಪ್ರಾದೇಶಿಕ ಕೇಂದ್ರದಲ್ಲಿ ಬುಧವಾರ ನಡೆದ 2024–25ನೇ ಸಾಲಿನ ಎಂ.ಎ. ಅರ್ಥಶಾಸ್ತ್ರ, ಎಂ.ಕಾಂ, ಎಂ.ಎಸ್ಸಿ ಗಣಿತಶಾಸ್ತ್ರ ವಿದ್ಯಾರ್ಥಿನಿಯರ ಬೀಳ್ಕೊಡುಗೆ, ವೃತ್ತಿ ಸಮಾಲೋಚನೆ ಹಾಗೂ ಮಾರ್ಗದರ್ಶನ ಕುರಿತ ವಿಶೇಷ ಉಪನ್ಯಾಸ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಛಲ, ಜಾಣ್ಮೆ ಹಾಗೂ ಕಠಿಣ ಪರಿಶ್ರಮದಿಂದ ಗುರಿ ತಲುಪಲು ಸಾಧ್ಯವಿದೆ ಎಂದು ತಿಳಿಸಿದರು.

ವಿಶ್ವವಿದ್ಯಾಲಯದ ಸಿಂಧನೂರು ಸ್ನಾತಕೋತ್ತರ ಕೇಂದ್ರದ ಸಂಯೋಜಕ ಡಾ. ಕೆ.ಪಿ. ಸುರೇಶ ಮಾತನಾಡಿ, ಹೆಣ್ಣುಮಕ್ಕಳಿಗೆ ಉನ್ನತ ಶಿಕ್ಷಣ ಕೊಡುವುದು ಹಾಗೂ ಸ್ವಾವಲಂಬಿ ಆಗಿಸುವುದು ವಿಶ್ವವಿದ್ಯಾಲಯದ ಧ್ಯೇಯವಾಗಿದೆ ಎಂದು ಹೇಳಿದರು.

ಭಾರತೀಯ ಜೀವ ವಿಮಾ ನಿಗಮದ ಹಿರಿಯ ಅಭಿವೃದ್ಧಿ ಅಧಿಕಾರಿ ಆರ್.ಜಿ. ಮಠಪತಿ ಮಾತನಾಡಿ, ಸ್ನಾತಕೋತ್ತರ ಶಿಕ್ಷಣ ಪೂರೈಸಿದವರು ಯಾವುದಾದರೂ ಹುದ್ದೆ ಪಡೆಯುವವರೆಗೆ ವಿರಮಿಸಬಾರದು ಎಂದು ತಿಳಿಸಿದರು.

ಸದ್ಗುರು ಸಿದ್ಧಾರೂಢ ಮಹಿಳಾ ಪದವಿ ಕಾಲೇಜು ಪ್ರಾಚಾರ್ಯ ನಾಗಪ್ಪ ಜಾನಕನೋರ ಮಾತನಾಡಿ, ವಿದ್ಯಾರ್ಥಿಗಳು ಸ್ಪರ್ಧಾ ಮನೋಭಾವ ಬೆಳೆಸಿಕೊಳ್ಳಬೇಕು ಎಂದರು.

ಅಧ್ಯಕ್ಷತೆ ವಹಿಸಿದ್ದ ಕೇಂದ್ರದ ನಿರ್ದೇಶಕ ಪ್ರೊ. ಆರ್.ವಿ. ಗಂಗಶೆಟ್ಟಿ ಮಾತನಾಡಿ, ವಿದ್ಯಾರ್ಥಿನಿಯರು ಶಿಕ್ಷಣದ ಮೂಲಕ ಉಜ್ವಲ ಬದುಕು ಕಟ್ಟಿಕೊಳ್ಳಬೇಕು. ಮಾನವೀಯ ಮೌಲ್ಯಗಳನ್ನು ಮೈಗೂಡಿಸಿಕೊಳ್ಳಬೇಕು ಎಂದು ಹೇಳಿದರು.

ವಿದ್ಯಾರ್ಥಿನಿಯರಾದ ಅಶ್ವಿನಿ, ವರ್ಷ, ರಾಧಿಕಾ ಹಾಗೂ ಅನ್ನಪೂರ್ಣ ತಮ್ಮ ಅನಿಸಿಕೆ ವ್ಯಕ್ತಪಡಿಸಿದರು. ವಿವಿಧ ಸ್ಪರ್ಧೆಗಳಲ್ಲಿ ವಿಜೇತರಾದವರಿಗೆ ಬಹುಮಾನ ವಿತರಿಸಲಾಯಿತು.

ಪ್ರಮುಖರಾದ ಪ್ರಭಾಕರ ಗಂಗಶೆಟ್ಟಿ, ಸಂಜೀವ ಕುಲಕರ್ಣಿ, ಉಪನ್ಯಾಸಕರಾದ ಈಶ್ವರ ರೆಡ್ಡಿ, ಡಾ. ಪಂಡಿತ ಗಂಗಶೆಟ್ಟಿ, ಡಾ. ನಾಗೇಂದ್ರಪ್ಪ, ಡಾ. ಸಂಗಪ್ಪ ತೌಡಿ, ರವಿ, ಡಾ. ಅನ್ನಪೂರ್ಣ, ಶ್ರೀಲತಾ, ಪ್ರೇಮಲತಾ, ರೇಣುಕಾ, ಅರ್ಚನಾ, ಪ್ರಿಯಾಂಕ, ಸಿಬ್ಬಂದಿ ಶಂಕರ, ಮಲ್ಲಿಕಾರ್ಜುನ, ಮಹೇಶ, ಲಕ್ಷ್ಮಿ ಇದ್ದರು. ಪ್ರಿಯಂಕಾ ನಿರೂಪಿಸಿದರು. ಕೋಮಲ್ ಸ್ವಾಗತಿಸಿದರು. ಪುಷ್ಪಾ ವಂದಿಸಿದರು.

# ಗುರುಬಸವೇಶ್ವರ ಅನುಭವ ಮಂಟಪದಲ್ಲಿ 197ನೆಯ ಬಸವ ಜ್ಯೋತಿ



ಮಲ್ಲಮ್ಮ ನುಡಿ ವಾರ್ತೆ

ಕಮಲನಗರ:ಜು.17: ತಾಲೂಕಿನ ಮುಧೋಳ ಬಿ ಗ್ರಾಮದಲ್ಲಿ ಇತ್ತೀಚಿಗೆ ಗುರುಬಸವೇಶ್ವರ ಅನುಭವ ಮಂಟಪದಲ್ಲಿ 197ನೆಯ ಬಸವ ಜ್ಯೋತಿ ಕಾರ್ಯಕ್ರಮ ವಚನ ಪಿತಾಮಹ ಫ ಗೂ ಹಳಕಟ್ಟಿ ಅವರ ಸ್ಮರಣೋತ್ಸವ ಕಾರ್ಯಕ್ರಮ ಜರುಗಿತು.

ಕಾರ್ಯಕ್ರಮದ ಭಕ್ತಿಸೇವೆಯನ್ನು ಶರಣೆ ಪೂಜಾ ರಾಜಕುಮಾರ ಕುಂಬಾರವರು ನಡೆಸಿಕೊಟ್ಟರು ಕಾರ್ಯಕ್ರಮದ ಅನುಭವದ ನುಡಿಯನ್ನು ಕುರುಬಸವೇಶ್ವರ ಅನುಭವ ಮಂಟಪದ ಅಧ್ಯಕ್ಷರಾದ ಶರಣ ನಾಗಯ್ಯ ಸ್ವಾಮಿಯವರು ನುಡಿದರು ಬಸವ ಜ್ಯೋತಿ ಎಂದರೆ ಬೇರೇನೂ ಇಲ್ಲ ಕತ್ತಲೆಯಿಂದ ಬೆಳಕಿನ ಕಡೆಗೆ ಅಜ್ಞಾನದಿಂದ ಜ್ಞಾನದ ಕಡೆಗೆ ಸಾಗುವದೆ ಬಸವ ಜ್ಯೋತಿ ಎಂದು ದಯಾನಂದ ಸರಸ್ವತಿಯವರ ಉದಾಹರಣೆಯ ವ್ಯಾಖ್ಯಾನದೊಂದಿಗೆ ಮಾನವನು ಟೀ–ಕೆಗೆ ಗುರಿಯಾದಾಗ ಖಿನ್ನತೆಗೆ ಒಳಗಾಗಬಾರದೆಂದು ಸಮಾಜವನ್ನು ಪ್ರೋತ್ಸಾಹಿಸುವ ರೀತಿಯಲ್ಲಿ ಬಹಳ ಮಾರ್ಮಿಕವಾಗಿ ನುಡಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಪಿಕೆಪಿಎಸ್‌ನ ಅಧ್ಯಕ್ಷರು ಆಗಿರುವ ಶರಣ ಗುರುನಾಥರ ಒಟ್ಟಿಗೆ ಬರುವಹಿಸಿ ಕೊಂಡು ಅನುಭವ ಮಂಟಪದಲ್ಲಿ ಕಾರ್ಯಕ್ರಮ ಬಹಳ ಅದ್ಭುತವಾಗಿ ಸುಂದರವಾಗಿ ಅಚ್ಚುಗಟ್ಟಾಗಿ ನಡೆಸಿಕೊಂಡು ಬರುತ್ತಿರುವ ಅನುಭವ ಮಂಟಪದ ಅಧ್ಯಕ್ಷರಾದ ಶರಣ ಶ್ರೀ ನಾಗಯ್ಯ ಸ್ವಾಮಿ ಅವರನ್ನು ಹಾಗೂ ಪದಾಧಿಕಾರಿಗಳ ಕುರಿತು ಪ್ರೋತ್ಸಾಹಿಸುವ ನಿಟ್ಟಿನಲ್ಲಿ ನನ್ನ ಎಲ್ಲಾ ರೀತಿಯ ಸಹಕಾರ ವಿರುವದೆಂದು ತಿಳಿಸಿದರು ಇದೇ ಸಂದರ್ಭದಲ್ಲಿ ಧ್ವಜಾರೋಹಣವನ್ನು ನೆರವೇರಿಸಿ ಕೊಟ್ಟಿರುವ ಸಂಗಯ್ಯ ಸ್ವಾಮಿಯವರು ಉಪಸ್ಥಿತರಿದ್ದರು ಹಾಗೂ ಜ್ಯೋತಿ ಪ್ರಜ್ವಲ್ ಕಾರ್ಯಕ್ರಮವನ್ನು ಗ್ರಾಮದ ಲಿಂಗಾಯತ ಸಮಾಜದ ಮುಖಂಡರಾದ ಗ್ರಾಮ ಪಂಚಾಯಿತಿಯ ಮಾಜಿ ಅಧ್ಯಕ್ಷರಾದ ಪ್ರಸ್ತುತ ಗ್ರಾಮ ಪಂಚಾಯಿತಿ ಸದಸ್ಯರಾದ ಶರಣ ಧನರಾಜ ಗುಡ್ಡ ಅವರು ಮಾತನಾಡಿ ಬರುವ ಶ್ರಾವಣ ಮಾಸದಲ್ಲಿ ನಡೆಯುತ್ತಿರುವ ಪ್ರವಚನ ಕಾರ್ಯಕ್ರಮಕ್ಕೆ ಸಂಪೂರ್ಣ ನನ್ನ ಬೆಂಬಲ ವಿರುತ್ತದೆ ಎಂದು ಹುರಿದುಂಬಿಸುವ ಮಾತುಗಳು ನುಡಿಗಳನ್ನು ನುಡಿದರು ಪ್ರಸ್ತಾವಿಕ ನುಡಿಯನ್ನು ಪ್ರಗತಿಪರ ರೈತರಾದ ಶರಣ ಹವಾಗಿರಾವ ಒಟ್ಟಿಗೆ ಅವರು ಫ ಗು ಹಳಕಟ್ಟಿ ಅವರ ಜೀವನ ಚರಿತ್ರೆ ಕುರಿತು ಸುಂದರವಾಗಿ ವ್ಯಾಖ್ಯಾನಿಸಿದರು ಹಾಗೂ ನಿರೂಪಣೆಯನ್ನು ಬಸವ ಗುರುಕುಲದ ಶಿಕ್ಷಕರಾದ ಶರಣ ನಾಗನಾಥ ಶಂಕು ನಡೆಸಿಕೊಟ್ಟರು ಸ್ವಾಗತವನ್ನು ಗುರುಬಸವೇಶ್ವರ ಅನುಭವ ಮಂಟಪದ ಕಾರ್ಯದರ್ಶಿಗಳಾದ ಶರಣ ಬಸವರಾಜ ಕೆಳ್ಗೆ ನಡೆಸಿಕೊಟ್ಟರು ವಂದನಾರ್ಪಣೆ ಶರಣ ಬಸವರಾಜ ಮಾಡಿದರು.

# ಜಿಲ್ಲೆಯ ಪ್ರವಾಸಿ ತಾಣಗಳ ವೀಕ್ಷಣೆಗೆ ಬಸ್ ಸೌಲಭ್ಯ; ಜು.19 ರಂದು ಚಾಲನೆ

ಬೀದರ. ಜು.17: ಬೀದರ ಜಿಲ್ಲೆಯ ಪ್ರವಾಸಿ ತಾಣಗಳನ್ನು ವೀಕ್ಷಣೆ ಮಾಡಲು ಕರ್ನಾಟಕ ರಾಜ್ಯ ಪ್ರವಾಸೋದ್ಯಮ ಅಭಿವೃದ್ಧಿ ನಿಗಮ ನಿಯಮಿತ ಬೆಂಗಳೂರು ವತಿಯಿಂದ ಬೀದರ ಜಿಲ್ಲೆಗೆ ಬಸ್ಸನ್ನು ಒದಗಿಸಿರುವುದರಿಂದ ಜುಲೈ.19 ರಂದು ಬೆಳಿಗ್ಗೆ 11 ಗಂಟೆಗೆ ಬೀದರ ಕೋಟೆಯಿಂದ ಬಸ್ ಚಾಲನೆ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ ಎಂದು ಸಹಾಯಕ ನಿರ್ದೇಶಕರು ಹಾಗೂ ಸದಸ್ಯ ಕಾರ್ಯದರ್ಶಿಗಳು, ಜಿಲ್ಲಾ ಪ್ರವಾಸೋದ್ಯಮ ಅಭಿವೃದ್ಧಿ ಸಮಿತಿ ಬೀದರ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಬೀದರ ಪ್ರವಾಸಿ ತಾಣಗಳ ವಿವರ: ಬೀದರ ಜಿಲ್ಲೆಯ ಬೀದರ ಕೋಟೆ, ಮಹಮ್ಮದ ಗವಾನ್ ಮದರಸಾ, ಚೌಖಂಡಿ ಮತ್ತು ಅಷ್ಟೂರ್ ಟೂಮ್ಸ್, ಬರೀದ ಷಾಹಿ ಉದ್ಯಾನವನ, ಶ್ರೀ ಕ್ಷೇತ್ರ ಝರನಿ ನರಸಿಂಹ ದೇವಸ್ಥಾನ, ಗುರುದ್ವಾರ, ಪಾಪನಾಶ ಮಹಾದೇವ ದೇವಸ್ಥಾನ, ಬಸವಕಲ್ಯಾಣ ಕೋಟೆ, ಭಾಲ್ಕಿ ಕೋಟೆ, ಅನುಭವ ಮಂಟಪ, ವೀರಭದ್ರೇಶ್ವರ ದೇವಸ್ಥಾನ, ಚಳಕಾಪೂರ ಗ್ರಾಮದ ಸಿದ್ದಾರೂಢ ಮಠ, ಹನುಮಾನ ದೇವಸ್ಥಾನ ಇತ್ಯಾದಿ ಪ್ರವಾಸಿ ತಾಣಗಳನ್ನು ಒಳಗೊಂಡಿರುತ್ತವೆ.

ಕಾರ್ಯಕ್ರಮಕ್ಕೆ ಜನಪ್ರತಿನಿಧಿಗಳು ಹಾಗೂ ಸಾರ್ವಜನಿಕರು ಆಗಮಿಸಿ ಕಾರ್ಯಕ್ರಮವನ್ನು ಯಶಸ್ವಿಯಾಗಿಸಬೇಕೆಂದು ಅವರು ತಿಳಿಸಿದ್ದಾರೆ.

# ಜೆಸ್ಕಾಂ: ಗ್ರಾಹಕರ ಕುಂದು ಕೊರತೆ ನಿವಾರಣಾ ಸಭೆ ಜು.19ಕ್ಕೆ

ಬೀದರ. ಜು.17 : ಜೆಸ್ಕಾಂ ಹುಮನಾಬಾದ ಕಾರ್ಯ ಮತ್ತು ಪಾಲನೆ ವಿಭಾಗ ವ್ಯಾಪ್ತಿಯ ಹುಮನಾಬಾದ, ಮನ್ನಾಏಖೇಳ್ಳಿ ಹಾಗೂ ಬಸವಕಲ್ಯಾಣ ಉಪ–ವಿಭಾಗಗಳಲ್ಲಿ ಜುಲೈ.19 ರಂದು ಗ್ರಾಹಕರ ಕುಂದು–ಕೊರತೆ ನಿವಾರಣಾ ಸಭೆಯನ್ನು ಕಾರ್ಯನಿರ್ವಾಹಕ ಇಂಜಿನಿಯರರು(ವಿ), ಗು.ವಿ.ಸ.ಕಂ.ನಿ ಹುಮನಾಬಾದ ಅವರ ಅಧ್ಯಕ್ಷತೆಯಲ್ಲಿ ಏರ್ಪಡಿಸಲಾಗಿರುತ್ತದೆ ಎಂದು ಹುಮನಾಬಾದ ಕಾರ್ಯ ಮತ್ತು ಪಾಲನೆ ವಿಭಾಗದ ಕಾರ್ಯನಿರ್ವಾಹಕ ಅಭಿಯಂತರರು(ವಿ) ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಸಭೆಗಳ ವಿವರ: ಜುಲೈ.19 ರಂದು ಬೆಳಿಗ್ಗೆ 11 ರಿಂದ 1 ಗಂಟೆಯವರೆಗೆ ಹುಮನಾಬಾದ ಉಪ ವಿಭಾಗದ ಘಾಟಬೋರಾಳ ಶಾಖೆ ಕಛೇರಿಯಲ್ಲಿ, ಮನ್ನಾಏಖೇಳ್ಳಿ ಉಪ ವಿಭಾಗದ ಮನ್ನಾಏಖೇಳ್ಳಿ ಶಾಖೆ ಕಛೇರಿಯಲ್ಲಿ ಹಾಗೂ ಬಸವಕಲ್ಯಾಣ ಉಪ ವಿಭಾಗದ ಮುಚಳಂಬಾ ಶಾಖೆ ಕಛೇರಿಯಲ್ಲಿ ಸಭೆಗಳು ನಡೆಯಲಿವೆ.

ಕಾರಣ ಸಾರ್ವಜನಿಕರು ಹಾಗೂ ಗು.ವಿ.ಸ.ಕಂ.ನಿ, ಗ್ರಾಹಕರು ಸಭೆಯಲ್ಲಿ ಉಪಸ್ಥಿತರಿದ್ದು, ಕುಂದು ಕೊರತೆಯ ಅರ್ಜಿಗಳನ್ನು ಸಲ್ಲಿಸಬಹುದಾಗಿದೆ ಎಂದು ಅವರು ತಿಳಿಸಿದ್ದಾರೆ.

# ನಾಳೆ ಜನ ಸಂಪರ್ಕ ಸಭೆ

ಬೀದರ. ಜು.17 : ಬೀದರ ಕಾರ್ಯ ಮತ್ತು ಪಾಲನೆ ವಿಭಾಗ ವ್ಯಾಪ್ತಿಯ ಔರಾದ(ಬಿ), ಭಾಲ್ಕಿ, ಬೀದರ, ಕಮಠಾಣ ಉಪ ವಿಭಾಗದಲ್ಲಿ ಜುಲೈ.19 ರಂದು ಜನ ಸಂಪರ್ಕ ಸಭೆ ಹಾಗೂ ಕೆಇಆರ್‌ಸಿಯ (ಎಸ್.ಒ.ಪಿ) ಮಾನದಂಡಗಳನ್ನು ಕುರಿತು ಅರಿವು ಮೂಡಿಸುವಿಕೆ ಕಾರ್ಯಕ್ರಮವನ್ನು ಕಾರ್ಯ ನಿರ್ವಾಹಕ ಇಂಜಿನಿಯರರು(ವಿ),/ ಸಹಾಯಕ ಕಾರ್ಯನಿರ್ವಾಹಕ ಇಂಜಿನೀಯರರು(ವಿ) ಗುವಿಸಕಂನಿ ಅವರ ಅಧ್ಯಕ್ಷತೆಯಲ್ಲಿ ಏರ್ಪಡಿಸಲಾಗಿರುತ್ತದೆ ಎಂದು ಬೀದರ ಕಾರ್ಯ ಮತ್ತು ಪಾಲನೆ ವಿಭಾಗದ ಕಾರ್ಯನಿರ್ವಾಹಕ ಅಭಿಯಂತರರು(ವಿ) ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಸಭೆಗಳ ವಿವರ: ಜುಲೈ.19 ರಂದು ಬೆಳಿಗ್ಗೆ 9 ಗಂಟೆಗೆ ಔರಾದ್ (ಬಿ) ಉಪ ವಿಭಾಗ ಕಛೇರಿಯಲ್ಲಿ, ಬೀದರ (ನಗರ) ಉಪ ವಿಭಾಗ ಕಛೇರಿಯಲ್ಲಿ, ಕಮಠಾಣ ಉಪ ವಿಭಾಗ ಕಛೇರಿಯಲ್ಲಿ ಹಾಗೂ ಬೆಳಿಗ್ಗೆ 11 ಗಂಟೆಗೆ ಭಾಲ್ಕಿ ಉಪ ವಿಭಾಗ ಕಛೇರಿಯಲ್ಲಿ, ಬೀದರ(ಗ್ರಾಮೀಣ) ಉಪ ವಿಭಾಗ ಕಛೇರಿಯಲ್ಲಿ ಸಭೆಗಳು ನಡೆಯಲಿವೆ. ಕಾರಣ ಸಾರ್ವಜನಿಕರು ಹಾಗೂ ಗುವಿಸಕಂನಿ ಗ್ರಾಹಕರು ಸದರಿ ಸಭೆಯಲ್ಲಿ ಉಪಸ್ಥಿತರಿದ್ದು ಕುಂದುಕೊರತೆಯ ಅರ್ಜಿಗಳನ್ನು ಸಲ್ಲಿಸಬಹುದಾಗಿದೆ ಎಂದು ಅವರು ತಿಳಿಸಿದ್ದಾರೆ.

# ಪ್ರಕಾಶ್ ಹಳ್ಳಿಖೇಡ್ ಜನ್ಮದಿನ ಆಚರಣೆ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಜು. 17 : ದಲಿತ ರಕ್ಷಣಾ ಹೋರಾಟ ಸಮಿತಿ (ರಿ) ಪ್ರಕಾಶ್ ಹಳ್ಳಿಖೇಡ್ ಸಂಸ್ಥಾಪಕ ರಾಜ್ಯಾಧ್ಯಕ್ಷರಾದ ಇವರು ಹುಟ್ಟುಹಬ್ಬದ ಪ್ರಯುಕ್ತ ದಲಿತ ರಕ್ಷಣಾ ಹೋರಾಟ ಸಮಿತಿಯಾ ಪದಾಧಿಕಾರಿಗಳು ಸ್ನೇಹಿತರು ಸೇರಿ ಹುಟ್ಟುಹಬ್ಬದ ವಿಜೃಂಭಣೆಯಿಂದ ಮಾಡಲಾಯಿತ್ತು. ರಮೇಶ್ ಕಟ್ಟಿತುಗಾಂವ್, ಸ್ವಾಮಿದಾಸ್ ಕೆಂಪನೊರ್, ನೀಲಕಂಠ ಬೆಂಡೆ, ಸುಧಾಕರ ಕೊಳ್ಳುರ, ಘಾಳೆಪ್ಪ ಅಂತಿ, ಸಂಗಮೇಶ ಎಣಕೂರ, ವಿಲ್ಸನ್ ಕೊಡ್ತೇನೋರ್ ,

ಕಮಲ್ಹಾಸನ್ ಬಾವಿದೊಡ್ಡಿ, ಜೇಮ್ಸ್ ಇಸ್ಲಾಮ್ಪುರ್, ಧನರಾಜ್ ಬೆಂಮಳ್ಖೇಡಾ, ರಾಮಣ್ಣ ಜೋಳದಪಗಾ, ಲಖನ್ ಮುಜಾನಾಯಕ್,

ಸ್ವಾಮಿದಾಸ ರಾಜಗೀರಾ, ರಾಜು ಮುಗುನೂರ್, ಚಿತಾನಂದ್ ಸಂತೋಶಕರ್, ಜೋಹಲ್ ಜಲ್ದೆ, ಸಂತೋಷ ಹಳ್ಳಿಖೆಡ್,

ಇವರೆಲ್ಲಾ ಸೇರಿ ಜನ್ಮದಿನದ ಶುಭಾಶಯನ್ನು ಕೋರಿ ಹಾರೈಸಿದ್ದಾರೆ.

# ಅಂತರಾಷ್ಟ್ರೀಯ ಜನಸಂಖ್ಯೆ ದಿನಾಚರಣೆ



ಬೀದರ. ಜು. 17 : ಕಿತ್ತೂರ್ ರಾಣಿ ಚನ್ನಮ್ಮ ಮಹಿಳಾ ಮಂಡಲ ಶಕ್ತಿಸದನ (ಸ್ವದಾರ ಗ್ರಹ) ಟೀಚರ್ಸ್ ಕಾಲೋನಿ ಬೀದರ್ ಕೇಂದ್ರದಲ್ಲಿ ಅಂತರಾಷ್ಟ್ರೀಯ ಜನಸಂಖ್ಯೆ ದಿನಾಚರಣೆ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಯಿತು.

ಈ ಕಾರ್ಯಕ್ರಮಕ್ಕೆ ಸಂಸ್ಥೆಯ ಸಿಬ್ಬಂದಿಗಳಾದ ಶ್ರೀಯುತ ಮನೋಹರ್ ಬಿ ಸಾಳಂಕೆ ಅವರು ಕಾರ್ಯಕ್ರಮವನ್ನು ವಿದೇಶಿಸಿ ಮಾತನಾಡುತ್ತಾ ವಿಟಿ ಮೀರಿದ ಜನಸಂಖ್ಯೆಯಿಂದ ದೇಶಕ್ಕೆ ಗಂಡಾಂತರ ಎಂದು ತಿಳಿಸಿದರು ಭಾರತದ ಜನಸಾಂದ್ರತೆಯು ಪ್ರತಿ ಚದರ ಕಿ. ಮೀಟರ್ಗೆ 492 ಜನರಿದ್ದಾರೆ. ಇದ–ರಿಂದ ಸರ್ಕಾರಕ್ಕೆ ಮೂಲ ಸೌಕರ್ಯಗಳಾದ ಶಿಕ್ಷಣ. ವಸತಿ. ಆರೋಗ್ಯ. ಮುದ್ದಾದ ಸೌಲಭ್ಯಗಳನ್ನು ಒದಗಿಸಲು ಸರ್ಕಾರಕ್ಕೆ ಕಷ್ಟವಾಗುತ್ತದೆ ಎಂದು ತಿಳಿಸಿದರು. ಮುಂದುವರೆದ ರಾಷ್ಟಗಳಲ್ಲಿ ಜನಸಾಂದ್ರತೆಯು ತೀರ ಕಡಿಮೆಯಾಗಿದೆ. ಇದರಿಂದ ಅಲ್ಲಿನ ಪ್ರಜೆಗಳಿಗೆ ಎಲ್ಲಾ ರೀತಿಯ ಸೌಲಭ್ಯಗಳು ಒದಗಿಸುತ್ತೇವೆ. ಸದ್ಯದ ಭಾರತದ ಜನಸಂಖ್ಯೆಯು 147 ಕೋಟಿಗಿಂತ ಹೆಚ್ಚಾಗಿದೆ ಇದು ತುಂಬಾ ಅಂತಕಕಾ–ರಿಯ ವಿಷಯವಾಗಿದೆ ಎಂದು ತಿಳಿಸಿದರು. ವೇದಿಕೆಯ ಮೇಲೆ ಮಕ್ಕಳು ಹಕ್ಕುಗಳ ರಕ್ಷಣೆಯ ಸಮಾಜದ ಕಾರ್ಯಕರ್ತರಾದ ಶ್ರೀ ಸಿದ್ದಾರ್ಥರವರು ಉಪಸ್ಥಿತಿದ್ದರು.

ಈ ಕಾರ್ಯಕ್ರಮದಲ್ಲಿ ಸಾಂತ್ವನ, ಶೆಟ್ಟಿ ಸದನ ಕೇಂದ್ರದ ಸಿಬ್ಬಂದಿಗಳು ಹಾಗೂ ಫಲಾನುಭವಿಗಳು ಇದ್ದರು. ಕಾರ್ಯಕ್ರಮಕ್ಕೆ ಸ್ವಾಗತವನ್ನು ಶ್ರೀಮತಿ ಗೀತಾಶ್ರೀ ಹರಿಹರವರು ನೆರವೇರಿಸಿದರು.

ಕಾರ್ಮಿಕರ ರಾಜ್ಯ ವಿಮಾ ನಿಗಮ ಒಂದು ಪ್ರಗತಿಪರ ಹೆಜ್ಜೆಯಾಗಿದ್ದು,

# ಇಎಸ್‌ಐಸಿ 2025ರ ಸ್ಪ್ರೀ ವಿಮಾ ಆರೋಗ್ಯ ರಕ್ಷಣೆ ಸೌಲಭ್ಯ ನೋಂದಾವಣೆ ಸೂಚನೆ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ಜುಲೈ 17: ಕಾರ್ಮಿಕ ರಾಜ್ಯ ನಿಗಮವು (ಇಎಸ್‌ಐಸಿ) 2025ರ ಸ್ಪ್ರೀ (Scheme For Promotion Of Registration Of Employers And Employees)ಉದ್ಯೋಗದಾತರು ಮತ್ತು ಉದ್ಯೋಗಿಗಳನೋಂದಣಿಯನ್ನು ಉತ್ತೇಜಿಸುವ ಯೋಜನೆ–2025) ಎಂಬ ನವೀಕೃತ ಯೋಜನೆಯನ್ನು ಮಾನ್ಯ ಕೇಂದ್ರ ಕಾರ್ಮಿಕ ಮತ್ತು ಉದ್ಯೋಗ ಹಾಗೂ ಯುವಜನ ಮತ್ತು ಕ್ರೀಡಾ ಸಚಿವರಾದ ಡಾ.ಮನ್ಸುಖ್ ಮಾಂಡವೀಯ ಅವರ ಅಧ್ಯಕ್ಷತೆಯಲ್ಲಿ ಹಿಮಾಚಲ ಪ್ರದೇಶದ ಶಿಮ್ಲಾದಲ್ಲಿ ನಡೆದ ಕಾರ್ಮಿಕರ ರಾಜ್ಯ ವಿಮಾ ನಿಗಮದ 196ನೇ ಸಭೆಯಲ್ಲಿ ಅನುಮೋದಿಸಿದೆ ಎಂದು ಕಾರ್ಮಿಕರ ರಾಜ್ಯ ವಿಮಾ ನಿಗಮ ಶಾಖೆ ವ್ಯವಸ್ಥಾಪಕರು ಅವರು ತಿಳಿಸಿದ್ದಾರೆ.

ಉದ್ಯೋಗದಾತರು ಮತ್ತು ಉದ್ಯೋಗಿಗಳನೋಂದಣಿಯನ್ನು ಉತ್ತೇಜಿಸುವ ಯೋಜನೆ 2025 ಸ್ಪ್ರೀ ಕಾರ್ಮಿಕರ ರಾಜ್ಯ ವಿಮಾ ನಿಗಮವು ಸಾಮಾಜಿಕ ಭದ್ರತಾ ವ್ಯಾಪ್ತಿಯನ್ನು ವಿಸ್ತರಿಸಲು ಅನುಮೋದಿಸಿದ ಒಂದು ವಿಶೇಷ ಉಪಕ್ರಮವಾಗಿದ್ದು, ದಿನಾಂಕ ಜುಲೈ 1 ರಿಂದ ಡಿಸೆಂಬರ್ 31ನೇ ವರೆಗೆ ಸಕ್ರಿಯವಾಗಿದ್ದು, ಗುತ್ತಿಗೆ ಹಾಗೂ ತಾತ್ಕಾಲಿಕ ಕಾರ್ಮಿಕರು ಸೇರಿದಂತೆ ಇಎಸ್‌ಇ ಅಡಿಯಲ್ಲಿ ಇನ್ನೂ ನೋಂದಾವಣೆಯಾಗದ ಉದ್ಯೋಗದಾತರು ಮತ್ತು ಉದ್ಯೋಗಿಗಳು ಯಾವುದೇ ಪರಿಶೀಲನೆ ಅಥವಾ ಹಿಂದಿನ ಅವಧಿಯ ಯಾವುದೇ ಬಾಕಿಯ ಬೇಡಿಕೆ ಇಲ್ಲದೇ ನೋಂದಾಯಿಸಿಕೊಳ್ಳಬೇಕು ಒಂದು ಬಾರಿಯ ಅವಕಾಶವನ್ನು ಒದಗಿಸುತ್ತದೆ.

2025ರ ಸ್ಪ್ರೀ ಅಡಿಯಲ್ಲಿ ಉದ್ಯೋಗದಾತರು ತಮ್ಮ ಘಟಕಗಳು ಮತ್ತು ಉದ್ಯೋಗಿಗಳನ್ನು ಇಎಸ್‌ಐಸಿ ಪೋರ್ಟಲ್, ಶ್ರಮ್ ಸುವಿಧಾ, ಮತ್ತು ಎಂಸಿಎ (ಇಖಖಅ ೮ಿಂಡಿಣಚಿಟ, ,ಎಡಿಚಿಟ , ಣ– ತುಜುಚಿಚಿ, ಒಅಂ) ಪೋರ್ಟಲ್ ಮೂಲಕ ಡಿಜಿಟಲ್ ರೂಪದಲ್ಲಿ ನೋಂದಾಯಿಸಿಕೊಳ್ಳಬೇಕು. ಉದ್ಯೋಗದಾತರು ತಾವು ಘೋಷಿಸಿದ ದಿನಾಂಕದಿಂದ ನೋಂದಣಿಯನ್ನು ಪರಿಗಣಿಸಲಾಗುತ್ತದೆ. ನೋಂದಣಿಯ ಪೂರ್ವ ಅವಧಿಗೆ ಯಾವುದೇ ವಂತಿಗೆ ಮತ್ತು ಸೌಲಭ್ಯವನ್ನು ಅನ್ವಯಿಸುವುದಿಲ್ಲ. ನೋಂದಣಿಯ ಪೂರ್ವ ಅವಧಿಯ ಯಾವುದೇ ದಾಖಲೆಗಳ ಪರಿಶೀಲನೆ ಅಥವಾ ಬೇಡಿಕೆ ಇರುವುದಿಲ್ಲ. ಈ ಯೋಜನೆಯು ಸ್ವಯಂಪ್ರೇರಿತವಾದ ಅನುಸರಣೆಯನ್ನು ಪ್ರೋತ್ಸಾಹಿಸಿ, ಹಿಂದಿನ ಅವಧಿಗೆ ದಂಡ ಪಾವತಿಸಬೇಕಾದ ಭಯವನ್ನು ಹೋಗಲಾಡಿಸಿ, ನೋಂದಾವಣೆಯ ಪ್ರಕ್ರಿಯೆಯನ್ನು ಸರಳೀಕರಿಸಲಾಗಿದೆ.

2025ರ ಸ್ಪ್ರೀ ಅನುಮೋದಿಸುವ ಮೊದಲು ನಿಗಧಿತ ಅವಧಿಯಲ್ಲಿ ನೋಂದಾವಣೆ ಮಾಡದಿದ್ದಲ್ಲಿ ಕಾನೂನು ಕ್ರಮ ಹಾಗೂ ಹಿಂದಿನ ಅವಧಿಯ ಬಾಕಿ ಬೇಡಿಕೆಗೆ ಕಾರಣವಾಗುತ್ತಿತ್ತು, 2025ರ ಸ್ಪ್ರೀ ಈ ಅಡೆತಡೆಗಳನ್ನು ನಿವಾರಿಸಿ ನೋಂದಾವಣೆಯಿಂದ ಬಿಟ್ಟುಹೋದ ಘಟಕಗಳು ಮತ್ತು ಕಾರ್ಮಿಕರನ್ನು ಇಎಸ್‌ಐ ವ್ಯಾಪ್ತಿ ಒಳಗೆ ಸೇರಿಸಿ ಸಾಮಾಜಿಕ ಭದ್ರತೆಯನ್ನು ಖಚಿತಪಡಿಸುತ್ತದೆ.

2025ರ ಸ್ಪ್ರೀ ಪ್ರಾರಂಭವು ಕಾರ್ಮಿಕರ ರಾಜ್ಯ ವಿಮಾ ನಿಗಮದ ಒಂದು ಪ್ರಗತಿಪರ ಹೆಜ್ಜೆಯಾಗಿದ್ದು, ಸರಳ ಮತ್ತು ಹಿಂದಿನ ಅವಧಿಯ ಬಾಕಿಯ ಬೇಡಿಕೆಯಿಲ್ಲದೆ ನೋಂದಾವಣೆಯಾಗಿ ಸುಲಭವಾಗಿ ಸಾಮಾಜಿಕ ಭದ್ರತೆಗೆ ಒಳಪಡುವ ಯೋಜನೆಯಾಗಿದೆ. ಈ ಯೋಜನೆಯು ಉದ್ಯೋಗದಾತರು ಕೇವಲ ತಮ್ಮ ಕಾರ್ಯಪಡೆಯ ಕ್ರಮಬದ್ಧಗೊಳಿಸುವಿಕೆಯನ್ನು ಪ್ರೋತ್ಸಾಹಿಸುವುದಲ್ಲದೆ, ಇನ್ನೂ ಹೆಚ್ಚಿನ ಕಾರ್ಮಿಕರನ್ನು ವಿಶೇಷವಾಗಿ ಗುತ್ತಿಗೆ ವಲಯದ ಕಾರ್ಮಿಕರ ಇಎಸ್‌ಐ ಕಾಯ್ದೆಯಡಿಯಲ್ಲಿ ದೊರೆಯುವ ಅಗತ್ಯ ಆರೋಗ್ಯ ರಕ್ಷಣೆ ಹಾಗೂ ಸಾಮಾಜಿಕ ಸೌಲಭ್ಯಗಳನ್ನು ಪಡೆಯುವುದನ್ನು ಉತ್ತೇಜಿಸುತ್ತದೆ. ಇದರೊಂದಿಗೆ ಇಎಸ್‌ಐಸಿಯು ಅಗತ್ಯ ಆರೋಗ್ಯ ರಕ್ಷಣೆ ಮತ್ತು ಸಾಮಾಜಿಕ ಭದ್ರತೆಯನ್ನು ತಲುಪಿಸುವ ತನ್ನ ಬದ್ಧತೆಯನ್ನು ಉಳಿಸಿಕೊಂಡು ಭಾರತದ ಕಾರ್ಮಿಕ ಕಲ್ಯಾಣ ಕೇಂದ್ರಿತ ದೃಷ್ಟಿಕೋನಕ್ಕೆ ಅನುಗುಣವಾಗಿದೆ ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಜು.19 ರಂದು ವಿದ್ಯುತ್ ವ್ಯತ್ಯಯ

ಬಳ್ಳಾರಿ,ಜು.17–ಬಳ್ಳಾರಿ ಗ್ರಾಮೀಣ ಉಪ–ವಿಭಾಗ ಜೆಸ್ಕಾಂ ವ್ಯಾಪ್ತಿಯ 110ಕೆ.ವಿ ಅಲ್ಲಿಪುರ–ಬಳ್ಳಾರಿ ಉತ್ತರ ಮಾರ್ಗದ ಎಲ್‌ಐಎಲ್‌ಓ ನಿರ್ಮಾಣ ಕಾರ್ಯವನ್ನು ತುರ್ತಾಗಿ ಕೈಗೊಳ್ಳುತ್ತಿರುವುದರಿಂದ 110/11ಕೆ.ವಿ ಯ ಸೋಮಸಮುದ್ರ ವಿದ್ಯುತ್ ಉಪ–ಕೇಂದ್ರ ಮತ್ತು 33/11ಕೆ.ವಿ ಗುಡದೂರು ವಿದ್ಯುತ್ ಉಪಕೇಂದ್ರದಿಂದ ವಿದ್ಯುತ್ ಸರಬರಾಜು ಆಗುವ ಎಲ್ಲಾ 11ಕೆ.ವಿ ಮಾರ್ಗಗಳಲ್ಲಿ ಜು.19 ರಂದು ಬೆಳಗ್ಗೆ 07 ಗಂಟೆಯಿಂದ ಸಂಜೆ 06 ಗಂಟೆಯವರೆಗೆ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯವಾಗಲಿದೆ.

*ವಿದ್ಯುತ್ ವ್ಯತ್ಯಯವಾಗುವ ಪ್ರದೇಶಗಳು:*

110/11ಕೆ.ವಿ ಶ್ರೀಧರಗಡ್ಡೆ ಉಪ–ಕೇಂದ್ರದಿಂದ ವಿದ್ಯುತ್ ಸರಬರಾಜು ಆಗುವ ಎಲ್ಲಾ 11ಕೆ.ವಿ ಫೀಡರ್‌ಗಳು ಮತ್ತು 33/11ಕೆ.ವಿ ಗುಡದೂರು ಉಪ–ಕೇಂದ್ರದಿಂದ ವಿದ್ಯುತ್ ಸರಬರಾಜು ಎಲ್ಲಾ 11ಕೆ.ವಿ. ಫೀಡರ್‌ಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ.

ಸಾರ್ವಜನಿಕರು ಮತ್ತು ವಿದ್ಯುತ್ ಗ್ರಾಹಕರು ಸಹಕರಿಸಬೇಕೆಂದು ಜೆಸ್ಕಾಂನ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರಾದ ಮೋಹನಬಾಬು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಆಕ್ಷೇಪಣೆ ಅರ್ಜಿಗೆ ಅವಕಾಶ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ಜುಲೈ 17, (ಕ.ವಾ) : ಶಹಾಪೂರ ತಾಲೂಕಿನ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಯಿಂದ ಮಾ.ಪಾಟೀಲ ಟ್ರೇಡರ್ಸ್ ಮಾ.ಶಾಂತಗೌಡ ತಂದೆ ಭೀಮನಗೌಡ ಪಾಟೀಲ ಮರಣ ಹೊಂದಿದ ಹಿನ್ನೆಲೆ ಹಂಚಿಕೆಯಾಗಿರುವ ನಿವೇಶನ ಸಂಖ್ಯೆ 272ನ್ನು ಅವರ ವಾರಸುದಾರರಾದ ಶ್ರೀಮತಿ ಸುವರ್ಣ ಗಂಡ ಶಾಂತಗೌಡ ಪಾಟೀಲ, ಮಾ.ಪಾಟೀಲ ಟ್ರೇಡರ್ಸ್‌ರವರಿಗೆ ನೊಂದಣಿ ಮಾಡಿಕೊಡಲು ಆಕ್ಷೇಪಣೆ ಅರ್ಜಿಸಲ್ಲಿಸಲು ಅವಕಾಶ ಕಲ್ಪಿಸಲಾಗಿದೆ ಎಂದು ಶಹಾಪೂರ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ ಕಾರ್ಯದರ್ಶಿ ಅವರು ತಿಳಿಸಿದ್ದಾರೆ.

ಲೈಸನ್ಸ್ ಪಡೆದು ವ್ಯಾಪಾರ ವಹಿವಾಟು ಮಾಡುತ್ತಿರುವ ಮಾ.ಪಾಟೀಲ ಟ್ರೇಡರ್ಸ್ ಮಾ.ಶಾಂತಗೌಡ ತಂದೆ ಭೀಮನಗೌಡ ಪಾಟೀಲ ಅವರು 2025ರ ಮೇ 29 ರಂದು ಮರಣ ಹೊಂದಿರುವುದರಿಂದ ಸದರಿಯವರಿಗೆ ಹಂಚಿಕೆಯಾಗಿರುವ ನಿವೇಶನ ಸಂಖ್ಯೆ 272ನ್ನು ಅವರ ವಾರಸುದಾರರಾದ ಶ್ರೀಮತಿ ಸುವರ್ಣ ಗಂಡ ಶಾಂತಗೌಡ ಪಾಟೀಲ, ಮಾ.ಪಾಟೀಲ ಟ್ರೇಡರ್ಸ್‌ರವರಿಗೆ ನೊಂದಣಿ ಮಾಡಿಕೊಡಲು ಆಕ್ಷೇಪಣೆ ಅರ್ಜಿಸಲ್ಲಿಸಲು ಅವಕಾಶ ನೀಡಿದೆ, ಈ ಪ್ರಕಟಣೆ ಪತ್ರಿಕೆಯಲ್ಲಿ ಪ್ರಕಟವಾದ ದಿನಾಂಕದಿಂದ 7 ದಿನ ಒಳಗೆ ಆಕ್ಷೇಪಣೆ ಸಲ್ಲಿಸಬೇಕು, ನಂತರ ಬಂದ ಆಕ್ಷೇಪಣೆ ಪರಿಗಣಿಸಲಾಗುವುದಿಲ್ಲ ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕುರುಗೋಡು: ಜು.19 ರಂದು ವಿದ್ಯುತ್ ವ್ಯತ್ಯಯ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜು.17–ಕುರುಗೊಡು ಉಪ–ಕೇಂದ್ರ ಜೆಸ್ಕಾಂ ವ್ಯಾಪ್ತಿಯ ವಿದ್ಯುತ್ ವಿತರಣಾ ಕೇಂದ್ರದ ತ್ರೈಮಾಸಿಕ ನಿರ್ವಹಣೆ ಮತ್ತು ದುರಸ್ತಿ ಕಾರ್ಯ ತುರ್ತಾಗಿ ಕೈಗೊಳ್ಳುತ್ತಿರುವುದರಿಂದ 110/11ಕೆವಿ ಯ ಉಪಕೇಂದ್ರದಿಂದ ವಿದ್ಯುತ್ ಸರಬರಾಜು ಆಗುವ ಎಲ್ಲಾ 11 ಕೆ.ವಿ ಮಾರ್ಗಗಳಲ್ಲಿ ಜು.19 ರಂದು ಬೆಳಗ್ಗೆ 10 ಗಂಟೆಯಿಂದ ಸಂಜೆ 06 ಗಂಟೆಯವರೆಗೆ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯವಾಗಲಿದೆ.

**ವಿದ್ಯುತ್ ವ್ಯತ್ಯಯವಾಗುವ ಪ್ರದೇಶಗಳು:**

110/11ಕೆ.ವಿ ಕುರುಗೋಡು ಉಪ–ಕೇಂದ್ರದಿಂದ ವಿದ್ಯುತ್ ಸರಬರಾಜು ಆಗುವ ಎಲ್ಲಾ 11ಕೆ.ವಿ ಫೀಡರ್‌ಗಳು ಮತ್ತು ಎಫ್–15 ಸೋಲಾರ್ ಮಾರ್ಗಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ.

ಜು.19 ರಂದು ಉಪ–ಕೇಂದ್ರದ ಎಲ್ಲಾ ಕೃಷಿ ಮಾರ್ಗಗಳನ್ನು ರಾತ್ರಿ 12 ಗಂಟೆಯಿಂದ ಬೆಳಿಗ್ಗೆ 07 ಗಂಟೆಯವರೆಗೆ ವಿದ್ಯುತ್ ಸರಬರಾಜು ಚಾಲನೆಗೊಳಿಸಲಾಗುವುದು.

ಸಾರ್ವಜನಿಕರು ಮತ್ತು ವಿದ್ಯುತ್ ಗ್ರಾಹಕರು ಸಹಕರಿಸಬೇಕೆಂದು ಕುರುಗೋಡು ಜೆಸ್ಕಾಂನ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರಾದ ರಾಜೇಂದ್ರ ಪ್ರಸಾದ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಜು.19 ರಂದು ವಿದ್ಯುತ್ ವ್ಯತ್ಯಯ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜು.17–ಬಳ್ಳಾರಿ ನಗರ ಉಪವಿಭಾಗ–2ರ ಜೆಸ್ಕಾಂ ವ್ಯಾಪ್ತಿಯ 110/11ಕೆ.ವಿ ಸೋಮಸಮುದ್ರ ವಿದ್ಯುತ್ ಉಪ–ಕೇಂದ್ರದಲ್ಲಿ ವಿದ್ಯುತ್ ಲೈನುಗಳ ನಿರ್ವಹಣೆ ಕಾರ್ಯ ಕೈಗೊಳ್ಳುತ್ತಿರುವುರಿಂದ ಜು.19 ರಂದು ಬೆಳಿಗ್ಗೆ 07 ಗಂಟೆಯಿಂದ 06 ಗಂಟೆಯವರೆಗೆ 11 ಕೆ.ವಿ.ಯ ಎಫ್–06 ಮತ್ತು ಎಫ್–10 ಫೀಡರನಲ್ಲಿ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯವಾಗಲಿದೆ.

**ವಿದ್ಯುತ್ ವ್ಯತ್ಯಯವಾಗುವ ಪ್ರದೇಶಗಳು:**

ಎಫ್–06 ತಾಳೂರು ರೋಡ್, ಸ್ನೇಹ ಕಾಲೋನಿ, ಶ್ರೀನಗರ, ರೇಣುಕಾ ನಗರ, ಭಗತ್‌ಸಿಂಗ್ ನಗರ, ಕನ್ನಡ ನಗರ, ಮಹಾನಂದಿ ಕೊಟ್ಟಂ, ಪಾರ್ವತಿ ನಗರ, ಎಸ್.ಪಿ.ಸರ್ಕಲ್, ಶಾಸ್ತ್ರೀ ನಗರ, ಬ್ಯಾಂಕ್ ಕಾಲೋನಿ, ಬಸವನಕುಂಟೆ, ಸಿರುಗುಪ್ಪ ರೋಡ್, ರಾಮ ನಗರ, ಅವಂಬಾವಿ.

ಎಫ್–10 ರ ಅಶೋಕ ನಗರ, ಹಾವಂಭಾವಿ, ಟಿ.ಎಂ.ಜಿ ಲೇಔಟ್, ರಾಮ ನಗರ, ಜಯನಗರ, ಗಾಯತ್ರಿ ನಗರ, ಭುವನಗಿರಿ ಕಾಲೋನಿ, ವೀರನಗೌಡ ಕಾಲೋನಿ, ಗಣೇಶ ನಗರ ಸೇರಿದಂತೆ ಇನ್ನೂ ಮುಂತಾದ ಏರಿಯಾಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ.

ಸಾರ್ವಜನಿಕರು ಮತ್ತು ವಿದ್ಯುತ್ ಗ್ರಾಹಕರು ಸಹಕರಿಸಬೇಕೆಂದು ಜೆಸ್ಕಾಂನ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಜವಳಗೇರಾ ಕರ್ನಾಟಕ ಪಬ್ಲಿಕ್ ಶಾಲೆಯಲ್ಲಿ ವಿಶೇಷ ಕಾರ್ಯಕ್ರಮ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಜುಲೈ 17– ಜಿಲ್ಲೆಯ ಸಿಂಧನೂರು ತಾಲೂಕಿನ ಜವಳಗೇರಾ ಗ್ರಾಮದ ಕರ್ನಾಟಕ ಪಬ್ಲಿಕ್ ಪ್ರೌಢ ಶಾಲೆಯಲ್ಲಿ ಜಿಲ್ಲಾಡಳಿ, ಜಿಲ್ಲಾ ಪಂಚಾಯತ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಹಾಗೂ ಜಿಲ್ಲಾ ಮಹಿಳಾ ಸಬಲೀಕರಣ ಘಟಕ ರಾಯಚೂರು ವತಿಯಿಂದ ಮಹಿಳೆಯರ ಶಿಕ್ಷಣದ ಮಹತ್ವ ಕುರಿತು ಕಾರ್ಯಕ್ರಮ ಇತ್ತೀಚೆಗೆ ಯಶಸ್ವಿಯಾಗಿ ನಡೆಯಿತು.

ಈವೇಳೆ ಮೀಷನ್ ಯೋಜನೆಯ ಜಿಲ್ಲಾ ಸಂಯೋಜಕರಾದ ಬಾವಸಲಿ ಅವರು ಮಾತನಾಡಿ, ಬೇಟಿ ಬಚಾವೋ ಬೇಟಿ ಪಡಾವೊ ಈ ಕಾರ್ಯಕ್ರಮದ ಮುಖ್ಯ ಉದ್ದೇಶ ಹೆಣ್ಣು ಮಗುವನ್ನು ಉಳಿಸಿ, ಹೆಣ್ಣು ಮಗುವನ್ನು ಓದಿಸಿ, ಹೆಣ್ಣು ಮಕ್ಕಳ ಶಿಕ್ಷಣಕ್ಕೆ ಉತ್ತೇಜಿಸುವುದಾಗಿದೆ. ಹೆಣ್ಣು ಈ ಸಮಾಜದ ಮುಖ್ಯವಾಹಿನಿಗೆ ಬರುವಂತೆ ಮಾಡುವುದು ಜೊತೆಗೆ ಯಾರೂ ಕೂಡ ಹೆಣ್ಣು ಗಂಡು ಎಂದು ಲಿಂಗ ತಾರತಮ್ಯ ಮಾಡದೆ ಹೆಣ್ಣನ್ನು ಗೌರವಿಸುವ ಮನೋಭಾವ ಬೆಳೆಸಿಕೊಳ್ಳಬೇಕು ಎಂದರು.

ಎಲ್ಲರೂ ಹೆಣ್ಣು ಮಕ್ಕಳ ಉನ್ನತ ಶಿಕ್ಷಣಕ್ಕೆ ಪ್ರೋತ್ಸಾಹಿಸಬೇಕು. ಸಾಮಾಜಿಕ ಪಿಡುಗುಗಳಾದ ,ಬಾಲ್ಯ ವಿವಾಹ, ಬಾಲ ಕಾರ್ಮಿಕ ಪದ್ದತಿ, ಹೆಣ್ಣು ಭ್ರೂಣಹತ್ಯೆ ಇಂತಹ ಅನಿಷ್ಠ ಪದ್ಧತಿಯನ್ನು ನಾವೆಲ್ಲರೂ ತೊಲಗಿಸಬೇಕು. ಇಂತಹ ಅನಿಷ್ಠ ಪದ್ಧತಿಗೆ ಪ್ರೋತ್ಸಾಹ ನೀಡುವವರ ವಿರುದ್ಧ ಕಾನೂನಿನಲ್ಲಿ ಕಠಿಣ ಶಿಕ್ಷೆ ಇದೆ ಎಂದರು.

ಹೆಣ್ಣು ಮಕ್ಕಳು ಸರ್ಕಾರದ ವಿವಿಧ ಯೋಜನೆಗಳ ಲಾಭವನ್ನು ಪಡೆದು ದೇಶದ ಉತ್ತಮ ನಾಗರೀಕರಾಗಬೇಕು. ಮಕ್ಕಳ ಏಳಿಗೆಗಾಗಿ ಸಾರ್ವಜನಿಕರು ಮಕ್ಕಳ ಸಹಾಯವಾಣಿ ಸಂಖ್ಯೆ–1098ನ್ನು ಬಳಸಬಹುದು ಎಂದರು.

ಇದೇ ಸಂದರ್ಭದಲ್ಲಿ ಶಾಲೆಯ ಮುಖ್ಯ ಶಿಕ್ಷಕರಾದ ಗಂಗಾಧರ, ಸಹ ಶಿಕ್ಷಕರಾದ ಅನ್ನಮ್ಮ, ಸಹ ಮಕ್ಕಳ ಸಹಾಯವಾಣಿ ಅಧಿಕಾರಿ ಮುಕ್ಕಣ್ಣ ಸೇರಿದಂತೆ ಶಾಲೆಯ ವಿವಿಧ ಶಿಕ್ಷಕರು ಮತ್ತು ವಿದ್ಯಾರ್ಥಿಗಳು ಕಾರ್ಯಕ್ರಮದಲ್ಲಿ ಇದ್ದರು.

# ರಾಷ್ಟ್ರ ಪ್ರಶಸ್ತಿಗೆ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಜುಲೈ 17 –ಭಾರತ ಸರ್ಕಾರದ ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಮಂತ್ರಾಲಯ ನವದೆಹಲಿ ಇವರಿಂದ ಪ್ರತಿ ವರ್ಷದ ಡಿಸೆಂಬರ್ 3ನೇ ದಿನಾಂಕದಂದು ಆಚರಿಸಲಾಗುತ್ತಿರುವ ರಾಷ್ಟ್ರಮಟ್ಟದ ವಿಶ್ವವಿಕಲಚೇತನರ ದಿನಾಚರಣೆ–2025ಯ ಅಂಗವಾಗಿ ವಿಕಲಚೇತನರ ಸಬಲೀಕರಣಕ್ಕಾಗಿ ವಿವಿಧ ಕ್ಷೇತ್ರಗಳಲ್ಲಿ ಗಣನೀಯ ಸೇವೆ ಸಲ್ಲಿಸಿದ ವ್ಯಕ್ತಿಗಳು ಹಾಗೂ ಸಂಸ್ಥೆಗಳಿಂದ ರಾಷ್ಟ್ರ ಪ್ರಶಸ್ತಿಗೆ ಅರ್ಜಿ ಆಹ್ವಾನಿಸಲಾಗಿದೆ. ಆಸಕ್ತರು ಅರ್ಜಿಯನ್ನು ವೆಬ್‌ಸೈಟ್ ವಿಳಾಸ: www.depwd.gov.in ಹಾಗೂ ರಾಷ್ಟ್ರೀಯ ಪುರಸ್ಕಾರ ಪೋರ್ಟಲ್ ವಿಳಾಸ: www.awards.gov.inನಲ್ಲಿ ಜುಲೈ 31ರೊಳಗಾಗಿ ಸಲ್ಲಿಸಬಹುದಾಗಿದೆ. ಆನ್‌ಲೈನ್ ಮುಖಾಂತರ ಸಲ್ಲಿಸಿದ ಅರ್ಜಿಯನ್ನು ಈ ಇಲಾಖೆಗೆ ತ್ರಿ–ಪ್ರತಿಯ ಹಾರ್ಡ್ ಪ್ರತಿಗಳೊಂದಿಗೆ ಸಲ್ಲಿಸಬಹುದಾಗಿದೆ ಎಂದು ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕುಂಭಮೇಳ ವಂಚಿತರಿಗೆ ಮಿನಿ ಕುಂಭಮೇಳ ನೋಡುವ ಭಾಗ್ಯ

## ಕರ್ನಾಟಕದಲ್ಲಿ ಮಿನಿ ಕುಂಭಮೇಳ.

---**ಇಲಕಲ್ ಎಂದಾ** ಕ್ಷಣ ಎಲ್ಲರಿಗೂ ನೆನಪಾಗುವದು ಕೌರವ ಚಿತ್ರದ ""ಇಳಕಲ್ ಸೀರೆ ಉಟ್ಕೊಂಡು ಮೊಣಕಾಲಮೊಟ ಎತಿಗೊಂಡು ಏರಿ ಮೇಲೆ ಏರಿ ಬಂದ ನಾರಿ ಬುಟ್ಟಿಯಲ್ಲಿ ಬುತ್ತಿ ತಂದ ಪೋರಿ"" ಎಂಬ ಸಾಂಗು ನೆನಪಿಗೆಬರುತ್ತದೆ. ಮಹಿಳೆಯರು ತೊಡುವ ವಿವಿಧ ಶೈಲಿಯ ಹಬ್ಬದ ವಿಶೇಷ ಸೀರೆಗಳು.

ಮತ್ತು ಕೆಂಪು ಶಿಲೆಗೆ ಹೆಸರುವಾಸಿಯಾದ ಇಲಕಲ್ ಈಗ ಮತ್ತೊಂದು ಐತಿಹಾಸಿಕ ಕ್ಷಣಕ್ಕೆ ಸಾಕ್ಷಿಯಾಗಲಿದೆ.

ಉತ್ತರ ಕರ್ನಾಟಕದ ಕಿತ್ತೂರು,ಕಲ್ಯಾಣ ಕರ್ನಾಟಕದ ಅತಿ ದೊಡ್ಡ ಕುಂಭಮೇಳ ಇಲಕಲ್ಲದಲ್ಲಿ ಆಗಸ್ಟ್ 08 ರಿಂದ ಪ್ರಾರಂಭವಾಗಲಿದೆ. ಈವರೆಗೂ ಕುಂಭಮೇಳ ಎಂದರೆ ಏನು ಎಂದು ಗೊತ್ತಿಲ್ಲದ ಜನರಿಗೆ ದಕ್ಷಿಣ ಭಾರತದ ಕುಂಭ ಮೇಳವಾಗಿ ಕೊಪ್ಪಳ ಜಾತ್ರೆಯನ್ನು ಬಣ್ಣಿಸಲಾಗುತ್ತಿದೆ. ಇಲಕಲ್ಲ ನಗರದಲ್ಲಿ ಇದೇ ಪ್ರಥಮ ಬಾರಿಗೆ ಕುಂಭಮೇಳ ಯಜ್ಞ ಯಾಗಾದಿಗಳ 9 ಅಗ್ನಿಕುಂಡಗಳ ಮಹಾಪೂಜೆಯೊಂದಿಗೆ ಏಳು ದಿನ ಮಿನಿ ಮಹಾ ಕುಂಭಮೇಳ ನಡೆಯಲಿದೆ.

ದೇಶದ ವಿವಿಧ ಹಿಮಾಲಯ ಪರ್ವತ ಗಡಿಬಾಗ. ಹಿಮಪಾತ, ಜಲಪಾತ, ದೇವಸ್ಥಾನಗಳಲ್ಲಿ ತಮ್ಮದೆ ಶಕ್ತಿಯಿಂದ ತಪಗೈದು ಸಾಧಿಸಿದ ಮಾಹಾ ಸಾಧ್ವಿಗಳು, ನಾಗ ಸಾಧುಗಳು, ನೂರಾರು ಸಂಖ್ಯೆಯಲ್ಲಿ ಸೇರುತ್ತಿದ್ದು ಪ್ರಯಾಗರಾಜದಲ್ಲಿ ನಡೆದ ಕುಂಭಮೇಳದಂತೆಯೇ ಇಲಕಲ್ ನಗರದಲ್ಲಿ ಮಿನಿ ಮಹಾ ಕುಂಭಮೇಳ ನಡೆಯಲಿದ್ದು ಮಾಹಾ ಕುಂಭ ಮೇಳದಿಂದ ವಂಚಿತರಾದವರಿಗೆ ಸಾಕ್ಷಾತ ಕುಂಭಮೇಳದಂತೆ ನಡೆಯುವ ಮಿನಿ ಮಹಾ ಕುಂಭಮೇಳದಲ್ಲಿ ತಾವೆಲ್ಲರೂ ಪಾಲ್ಗೊಳ್ಳಲು ಸುವರ್ಣ ಅವಕಾಶ ಸಿಕ್ಕಂತಾಗಿದೆ.

ಭಾರತ ದೇಶದಲ್ಲಿ ಸುಮಾರು 66 ಕೋಟಿ ಜನ ವೀಕ್ಷಣೆ ಮಾಡಿರುವ ಜನಗಳ ಮಧ್ಯೆ ಕುಂಭಮೇಳ ನೋಡದೆ ಇದ್ದವರು ಕುಂಭಮೇಳದ ಮಾದರಿಯಲ್ಲಿ ನಡೆಯುವ ಪೂಜೆ,ಯಜ್ಞ, ಯಾಗಾದಿ ನೋಡುವ ಭಾಗ್ಯ ಅವಕಾಶ ಇಲಕಲ್ ನಗರ ಕರ್ನಾಟಕದ ಜನತೆ ಒದಗಿಸಿ ಕೊಟ್ಟಿದ್ದು ಕುಂಭಮೇಳ ನೋಡದೆ ಇರುವವರು ತಪ್ಪದೇ ಬಂದು ಮಿನಿ ಕುಂಭ ಮೇಳ ವೀಕ್ಷಣೆ ಮಾಡಬೇಕೆಂದು ಇಲಕಲ್ಲ ನಾಗರಿಕರ ಕಮಿಟಿ ಆಯೋಜನೆ ಮಾಡಿದ್ದು ವಯಸ್ಸಾದವರು ಮತ್ತು ಮಹಿಳೆಯರು ಹೆಚ್ಚಿನ ಪ್ರಮಾಣದಲ್ಲಿ ಕುಂಭಮೇಳಕ್ಕೆ ತೆರಳಲು ಆಗಲೇ ಇದ್ದವರಿಗೆ ಕುಂಭಮೇಳದ ವಂಚಿತರಿಗೆ ಅವಕಾಶ ಕಲ್ಪಿಸಿದಂತಾಗಿದೆ.

ನಗರದ ವಿಶಾಲವಾದ ಜಿ ಪಿ ಪಾಟೀಲ್ ಅವರ ಬಯಲು ಜಾಗೆಯಲ್ಲಿ ಮಿನಿ ಮಹಾ ಕುಂಭಮೇಳ ನಡೆಸಲು ಉದ್ದೇಶಿಸಲಾಗಿದ್ದು ಜುನಾಅಕಾಡದ ಕಾರ್ಯದರ್ಶಿಗಳಾದ ಶ್ರೀ ಮಹಾಂತ ಸಹದೇವನಂದಗಿರಿ ಸ್ವಾಮೀಜಿಯವರು ಮಿನಿ ಕುಂಭಮೇಳದ ನೈತೃತ್ವ ವಹಿಸಿದ್ದು, 144 ವರ್ಷಗಳಿಗೊಮ್ಮೆ ನಡೆಯುವ ಮಹಾ ಕುಂಭಮೇಳ ನೋಡಲಾಗದೆ ಅನೇಕ ಆರೋಗ್ಯ ಸಮಸ್ಯೆಯಿಂದ ಬಳಲುತ್ತಿರುವ ಹಿರಿಯರು ಮಹಿಳೆಯರು ಹೆಚ್ಚಿನ ಸಂಖ್ಯೆಯಲ್ಲಿ ಬಂದು ಈ ಮಿನಿ ಮಹಾ ಕುಂಭಮೇಳ ಕಣ್ಣುತುಂಬಿಕೊಳ್ಳಬೇಕೆಂದು ಶ್ರೀ ಮಹಾಂತ ಸಹದೇವನಂದಗಿರಿ ಸ್ವಾಮೀಜಿ ತಿಳಿಸಿರುತ್ತಾರೆ.

ಉತ್ತರ ಭಾರತದಲ್ಲಿ ನಡೆಯುವ ಮಹಾ ಕುಂಭಮೇಳ ಅದೆಷ್ಟೋ ಕರ್ನಾಟಕದ ಜನರಿಗೆ ಗೊತ್ತೇ ಇರಲಿಲ್ಲ 2025 ಜನವರಿಯಲ್ಲಿ ಪ್ರಯಾಗರಾಜದಲ್ಲಿ ನಡೆದ ಕುಂಭಮೇಳ ನೋಡಿದ ನಂತರ ನಮ್ಮ ಜನತೆಗೆ ನಾಗಸಾಧುಗಳೆಂದರೇನು, ಕುಂಭಮೇಳ ಎಂದರೇನು, ಮಹಾ ಕುಂಭಮೇಳದಲ್ಲಿ ಎಷ್ಟೆಲ್ಲಾ ಶಕ್ತಿ ಅಡಗಿದೆ ಮತ್ತು ಹಿಂದೂ ಧರ್ಮದ ಒಳಿತಿಗಾಗಿ ಆಚರಿಸುವ ಕುಂಭಮೇಳ ಹಿಂದುಗಳ ಒಗ್ಗೂಡಿಸುವ ಮತ್ತು ಪ್ರಾರ್ಥನೆಯೊಂದಿಗೆ ದೈವಿ ಶಕ್ತಿ ಒಲಿಸಿಕೊಳ್ಳುವ ತಾಕತ್ತು ಕುಂಭಮೇಳಕ್ಕೆ ಇದೆ ಎಂದು ನಾಗ ಸಾಧುಗಳು ತೋರಿಸಿಕೊಟ್ಟರು.

ಅಸಂಖ್ಯಾತ ನಾಗ ಸಾಧುಗಳ ದೊಡ್ಡ ಸಮೂಹವನ್ನೇ ನೋಡಿದ ಭಾರತದ ಜನತೆ ಮಹಾಕುಂಭ ಮೇಳ ನೋಡಿ ಕುಂಭಮೇಳಕ್ಕೆ ಹಿಂದು ಸಂಪ್ರದಾಯದಲ್ಲಿ ಎಷ್ಟೆಲ್ಲಾ ಶಕ್ತಿ ಇದೆ ಎನ್ನುವದು ಅರಿತು–ಕೊಂಡಿರುತ್ತಾರೆ.

ಕುಂಭಮೇಳ ಹಿಂದುಗಳ ಶಕ್ತಿ ಎಂದು ನಂಬಿರುವ ನಾಗಸಾಧುಗಳ ತ್ಯಾಗ, ತಪಸ್ಸು, ಜನಗಳಿಗಾಗಿ ಮಾಡುವ ನಿಸ್ವಾರ್ಥ ಜಪ ತಪಗಳು ಜನರಿಗಾಗಿಯೇ ಮಾಡುತ್ತಾರೆ ಎಂದು ಗೊತ್ತಾದ ಮೇಲು ನಾವು ಅವರ ಆಶೀರ್ವಾದ ಪಡೆಯದಿದ್ದರೆ ನಾವು ಹಿಂದೂ ಧರ್ಮದ ಅನುಯಾಯಿಗಳೆಂದು ಸಮಾಜಕ್ಕೆ ಗೊತ್ತಾಗಬೇಕೆಂದರೆ ನಿರ್ಭೀತ ಸ್ಥಳದಲ್ಲಿ ಅಪಾರ ಶಕ್ತಿ ಪಡೆದುಕೊಂಡ ನಾಗ ಸಾಧುಗಳ ಆಶೀರ್ವಾದ ಪಡೆಯಲು ಮತ್ತು ಮಿನಿ ಮಹಾ ಕುಂಭಮೇಳದಲ್ಲಿ ಪಾಲ್ಗೊಳ್ಳಲು ಮಹಾ ಕುಂಭಮೇಳದಿಂದ ವಂಚಿತರಾದ ಕರ್ನಾಟಕದ ಭಕ್ತರೆಲ್ಲರೂ ಉತ್ತರ ಭಾರತದಿಂದ ಬರುವ ನಾಗ ಸಾಧುಗಳ ಜಪ–ತಪಗಳ ಶಕ್ತಿಯ ಆಶೀರ್ವಾದ ಎಲ್ಲರೂ ಪಡೆದುಕೊಳ್ಳಲಿ ಎನ್ನುವ ಉದ್ದೇಶಕ್ಕಾಗಿ ಇಲಕಲ್ಲ ನಗರದಲ್ಲಿ ಮಿನಿಕುಂಭಮೇಳ ಏರ್ಪಡಿಸಲಾಗಿದ್ದು ಭಕ್ತರೆಲ್ಲರೂ ಇದರ ಸದುಪಯೋಗ ಪಡೆದುಕೊಳ್ಳಬೇಕೆಂದು ಸ್ವಾಮೀಜಿ ತಿಳಿಸಿರುತ್ತಾರೆ.

ಮಿನಿ ಕುಂಭಮೇಳಕ್ಕೆ ಸುಮಾರು 2 ಲಕ್ಷ ಜನ ಸೇರುವ ನಿರೀಕ್ಷೆಯಲ್ಲಿ ಕಮಿಟಿ ವ್ಯವಸ್ಥೆ ಮಾಡಿಕೊಂಡಿದ್ದು,



ಈವರಿಗೆ ಇಲಕಲ್ಲ ನಗರ ಸೀರೆ ಮತ್ತು ಗ್ರೈನೆಟ್ ಶಿಲೆಗಳಿಗೆ ಹೆಸರುವಾಸಿಯಾಗಿದ್ದು ದಕ್ಷಿಣ ಭಾರತದಲ್ಲಿ ಮಿನಿ ಮಹಾ ಕುಂಭ ಮೇಳ ಏರ್ಪಡಿಸುವುದರ ಮೂಲಕ ಇಲಕಲ್ಲ ನಗರ ಮತ್ತೊಮ್ಮೆ ಐತಿಹಾಸಿಕ ದಾಖಲೆಗೆ ಸಾಕ್ಷಿಯಾಗಲಿದೆ. ಇಲಕಲ್ಲ ನಗರದ ಗಣ್ಯಾತಿ ಗಣ್ಯರು. ವ್ಯಾಪಾರಸ್ಥರು ಸರ್ವ ಸಮಾಜದವರು. ಸಾರ್ವಜನಿಕರು ಮಿನಿ ಮಹಾ ಕುಂಭಮೇಳ ನಡೆಸಲು ತನು–ಮನದನದಿಂದ ತಮ್ಮ ಸೇವೆ ಅರ್ಪಿಸುತ್ತಿದ್ದು ಕುಂಭಮೇಳ ಕರ್ನಾಟಕದಲ್ಲಿಯೇ ಐತಿಹಾಸಿಕ ಕುಂಭಮೇಳವಾಗಿ ಇತಿಹಾಸ ನಿರ್ಮಿಸುವ ಕ್ಷಣ–ಕ್ಕೆ ಮಿನಿ ಮಹಾ ಕುಂಭಮೇಳ ನಡೆಸುವುದರ ಮೂಲಕ ಸಾಕ್ಷಿ ಆಗಲಿದೆ ಎಂದು ಇಲಕಲ್ಲ ನಾಗರಿಕರು ಮಾತನಾಡಿಕೊಳ್ಳುತ್ತಿದ್ದಾರೆ.

ಈ ಕುಂಭ ಮೇಳದಲ್ಲಿ ನಾಗಸಾಧುಗಳು ಸಾದರು ಸಂತರು ಶರಣರು ಮಠಾಧೀಶರು ಪುರೋಹಿತರು ಪೂಜಾ ಸ್ವಾಮೀಜಿಗಳು ಹೀಗೆ ಅನೇಕ ಸಾಧು ಸಂತರು ದೊಡ್ಡ ಪ್ರಮಾಣದ ಸಂಖ್ಯೆಯಲ್ಲಿ ಆಗಮಿಸಲಿದ್ದು ಏಳು ದಿನಗಳ ನಡೆಯುವ ಈ ಮಿನಿ ಕುಂಭಮೇಳ ಸುಮಾರು ದಿನಕ್ಕೆ ಸಾವಿರಾರು ಸಂಖ್ಯೆಯ ಜನರು ಸೇರುವ ನಿರೀಕ್ಷೆಯಲ್ಲಿದ್ದು ಮಿನಿ ಕುಂಭಮೇಳಕ್ಕೆ ಆಗಮಿಸುವ ಎಲ್ಲರಿಗೂ ಕಮಿಟಿಯವರು ಅಚ್ಚುಕಟ್ಟಾದ ಪ್ರಸಾದ ವ್ಯವಸ್ಥೆ ಮಾಡಿದ್ದು ಎಲ್ಲರೂ ಆಗಮಿಸಿ, ನಾಗ ಸಾಧುಗಳ ಸಾಧರು ಸಂತರು ಶರಣರ ಸ್ವಾಮೀಜಿಯವರ ಪುರೋಹಿತರ ಆಶೀರ್ವಾದವನ್ನು ಪಡೆದು ಕೃಪೆಗೆ ಪಾತ್ರರಾಗಬೇಕೆಂದು ಸ್ವಾಮೀಜಿ ಅಭಿಲಾಷೆಯಾಗಿದೆ.

**ಯುವಕರು ವಿದ್ಯಾರ್ಥಿಗಳು ಮಕ್ಕಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಲು ಶ್ರೀ ಮಹಾಂತ ಸಹದೇವಾನಂದಗಿರಿ ಸ್ವಾಮೀಜಿಕರೆ**



ಭವ್ಯ ಭಾರತದ ಕನಸು ಇವತ್ತಿನ ಯುವಕರು ವಿದ್ಯಾರ್ಥಿಗಳು ಮಕ್ಕಳು ಆಗಿರುವುದರಿಂದ ಕುಂಭಮೇಳ ಎಂದರೇನು? ಕುಂಭಮೇಳದ ಪರಿಕಲ್ಪನೆ ತಿಳಿದುಕೊಳ್ಳಬೇಕೆಂದರೆ ಯುವಕರು ವಿದ್ಯಾರ್ಥಿಗಳು ಮಕ್ಕಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವಂತೆ ಪೋಷಕರು ಪ್ರೇರೇಪಿಸಬೇಕು ಹಿಂದೂಧರ್ಮದ ಒಳತಿಗಾಗಿ ಭವಿಷ್ಯದಲ್ಲಿ ಹಿಂದೂ ಧರ್ಮಕ್ಕೆ ಬರುವ ಆಪತ್ತನ್ನು ದೂರ ಮಾಡಲು ಹಿಂದೂ ಧರ್ಮದ ಜಾಗ್ರತಿಯ ಪರಿಕಲ್ಪನೆ ಯುವಕರಿಗೆ ವಿದ್ಯಾರ್ಥಿಗಳಿಗೆ ಮಕ್ಕಳಿಗೆ ತಿಳಿಸಬೇಕಾಗಿರುವುದರಿಂದ ಹೆಚ್ಚಿನ ಸಂಖ್ಯೆಯಲ್ಲಿ ಯುವಕರು ವಿದ್ಯಾರ್ಥಿಗಳು ಮತ್ತು ಮಕ್ಕಳು ಪಾಲ್ಗೊಳ್ಳಬೇಕೆಂದು ಸ್ವಾಮೀಜಿ ಕರೆ ನೀಡಿದೆ.

ಭವಿಷ್ಯದಲ್ಲಿ ಹಿಂದೂ ಧರ್ಮ ನಶಿಸಿಹೋಗುವ ಹಂತಕ್ಕೆ ಬರಲಿದ್ದು ಇಂತಹ ಕುಂಭಮೇಳಗಳಲ್ಲಿ ಪಾಲ್ಗೊಳ್ಳುವುದರ ಮೂಲಕ ಹಿಂದೂ ಧರ್ಮ ರಕ್ಷಣೆ ಮಾಡುವ ಜವಾಬ್ದಾರಿ ನಮ್ಮೆಲ್ಲರ ಮೇಲೆ ಇರುವುದರಿಂದ ಪ್ರಾಚೀನ ಕಾಲದಿಂದ ಹಿಂದುಗಳನ್ನು ಒಗ್ಗೂಡಿಸಲು ಕುಂಭಮೇಳ ಆಯೋಜನೆ ಮಾಡುತ್ತಾ ಬಂದಿದ್ದು ಅನೇಕ ನಾಗ ಸಾಧುಗಳು ಮನೆ ತೊರೆದು ತ್ಯಾಗಿಗಳಾಗಿ ತಂದೆ ತಾಯಿಗಳಿಂದ ದೂರವಾಗಿ ನಮ್ಮೆಲ್ಲರ ಒಳತಿಗಾಗಿ ನಾಗಸಾಧುಗಳು ಮಾಡುವ ತಪಸ್ಸು, ಯಜ್ಞ, ಜಪ, ತಪ ಮತ್ತು ಅವರು ನೀಡುವ ಮಾರ್ಗದರ್ಶನ ಸಂದೇಶ ಪಾಲಿಸುತ್ತ ನಡೆದರೆ ಮಾತ್ರ ಹಿಂದೂ ಧರ್ಮಕ್ಕೆ ಉಳಿಗಾಲ ಇದೆ ಎನ್ನುವುದು ನಾವೆಲ್ಲರೂ ಅರ್ಥ ಮಾಡಿಕೊಳ್ಳಬೇಕು. ಭವಿಷ್ಯದಲ್ಲಿ ಹಿಂದೂ ಧರ್ಮ ಹಿತ ರಕ್ಷಣೆ ಮಾಡುವ ಸಲುವಾಗಿ ಹಿಂದುಗಳು ಈಗಿನಿಂದಲೇ ಜಾಗೃತರಾಗಿ. ಅಲ್ಲಲ್ಲಿ ಆಗಾಗ ನಡೆಯುವ ಇಂತಹ ಕುಂಭಮೇಳಗಳಲ್ಲಿ ಪಾಲ್ಗೊಳ್ಳುವುದರ ಮೂಲಕ ಹಿಂದೂ ಧರ್ಮದ ರಕ್ಷಣೆ ಮಾಡಬೇಕಾದ ಜವಾಬ್ದಾರಿಯನ್ನು ನಾವೆಲ್ಲರೂ ಅರಿತುಕೊಳ್ಳಬೇಕಿದೆ.

ಜನವರಿ ನಡೆದ ಮಹಾ ಕುಂಭಮೇಳದಿಂದ ಇಡೀ ವಿಶ್ವಕ್ಕೆ ಭಾರತದ ಮತ್ತು ಹಿಂದುಗಳ ಶಕ್ತಿ ಏನೆನ್ನುವುದು ಗೋಚರವಾಗಿದ್ದು ನಾಗಸಾಧುಗಳು ಈವರೆಗೂ ಎಲ್ಲಿ ಇದ್ದರೂ ಎಲ್ಲಿ ಇರುತ್ತಾರೆ ಎಲ್ಲಿ ತಪಸ್ಸು ಮಾಡುತ್ತಾರೆ ಎಂತಹ ಶಕ್ತಿ ಒಲಿಸಿಕೊಳ್ಳುತ್ತಾರೆ ಎನ್ನುವುದು ಯಾರಿಗೂ ಗೊತ್ತಿರಲಿಲ್ಲ. ಕುಂಭಮೇಳಗಳೆಂದರೆ ಅಲ್ಪ ಸಲ್ಪ ಜ್ಞಾನ ಹೊಂದಿದ್ದ ನಮ್ಮ ಜನಗಳಿಗೆ ಪ್ರಯಾಗರಾಜದಲ್ಲಿ ನಡೆದ ಮಹಾ ಕುಂಭಮೇಳದಿಂದ ಕುಂಭಮೇಳದ ಶಕ್ತಿ ಮತ್ತು ಕುಂಭಮೇಳಕ್ಕಿರುವ ತಾಕತ್ತನ್ನು ಜಗತ್ತಿಗೆ ತೋರಿಸಿತು.

ಲಕ್ಷಾಂತರ ನಾಗ ಸಾಧುಗಳು ತಮ್ಮ ಕುಟುಂಬ ತೊರೆದು ಲೋಕ ಕಲ್ಯಾಣಕ್ಕಾಗಿ ಜನಗಳ ಶ್ರೇಯೋಭಿವೃದ್ಧಿಗಾಗಿ ಜಪ ತಪ ತಪಸ್ಸು ಮಾಡುವ ಮೂಲಕ ನಾಗ ಸಾಧುಗಳಾಗಿ ಲೋಕ ಕಲ್ಯಾಣಕ್ಕಾಗಿ ಸಂಚರಿಸುತ್ತಾ ನಮ್ಮೆಲ್ಲರ ಒಳಿತಿಗಾಗಿ ಸದಾಕಾಲ ಶ್ರಮಿಸುವ ನಾಗ ಸಾಧುಗಳ ಬಗ್ಗೆ ಮತ್ತು ಅವರ ಶಕ್ತಿಯ ಬಗ್ಗೆ ಈವರೆಗೂ ಯಾರಿಗೂ ತಿಳಿದಿದ್ದಿಲ್ಲ. ಮಹಾ ಕುಂಭಮೇಳದ ನಂತರ ನಾಗ ಸಾಧುಗಳ ಶಕ್ತಿ ಗೋಚರವಾಗಿದ್ದು ಇಷ್ಟೆಲ್ಲಾ ಜಪ, ತಪ, ಯಜ್ಞ, ಯಾಗಾದಿ ಮಾಡಿದ ನಾಗ ಸಾಧುಗಳು ನಾವಿದ್ದಲ್ಲಿಗೆ ಬರುತ್ತಿದ್ದಾರೆಂದರೆ ನಮ್ಮ ಭಾಗ್ಯವೆಂದು ತಿಳಿದುಕೊಂಡು ಆಗಸ್ಟ್ 08 ಪ್ರಾರಂಭವಾಗುವ ಮಿನಿ ಮಹಾ ಕುಂಭಮೇಳದಲ್ಲಿ ನಾವೆಲ್ಲರೂ ಪಾಲ್ಗೊಳ್ಳಲು ಸಿದ್ಧತೆ ಮಾಡಿಕೊಳ್ಳೋಣ.

ಮಾಹಾಕುಂಭಮೇಳ ನೋಡುವ ಭಾಗ್ಯವಂತ ನಮಗೆ ಸಿಗದಿದ್ದರೂ ಇಲಕಲ್ಲ ಜನತೆ ಕರ್ನಾಟಕದ ಜನರಿಗೆ ಮಿನಿ ಮಹಾ ಕುಂಭಮೇಳದ ಮೂಲಕ ಕುಂಭಮೇಳದ ಪರಿಕಲ್ಪನೆ ಕಣ್ಮುಂದೆ ತರಲಿದ್ದಾರೆ ಹಾಗಾಗಿ ಇಂತಹ ಅವಕಾಶ ನಾವು ಯಾರು ತಪ್ಪಿಸಿಕೊಳ್ಳದೆ ಸುಮಾರು ಎರಡು ನೂರ–ರಿಂದ 250 ನಾಗ ಸಾಧುಗಳು ಆಗಮಿಸಲಿದ್ದು ನಾಗಸಾಧುಗಳ ಆಶೀರ್ವಾದ ಪಡೆಯುವುದೇ ನಮ್ಮ ಭಾಗ್ಯವೆಂದು ನಾವು ಅರಿತುಕೊಂಡು ಈ ಕುಂಭ ಮೇಳದಲ್ಲಿ ಪಾಲ್ಗೊಂಡು ಹಿಂದೂಗಳ ಶಕ್ತಿ ಬಲಾಢ್ಯ ಮಾಡುವುದರ ಜೊತೆಗೆ ಹಿಂದುಗಳು ಮನಸ್ಸು ಮಾಡಿದರೆ ಏನೆಲ್ಲಾ ಸಾಧಿಸಬಹುದು ಎನ್ನುವುದನ್ನು ತೋರಿಸಿ ಕೊಡಲಿಕ್ಕೆ ಇಲಕಲ್ ಜನತೆ ಒಂದು ಸುವರ್ಣ ಅವಕಾಶ ಒದಗಿಸಿ ಕೊಟ್ಟಿದ್ದು ಎಲ್ಲರೂ ಮಿನಿ ಕುಂಭಮೇಳದಲ್ಲಿ ಪಾಲ್ಗೊಂಡು ನಾಗ ಸಾಧುಗಳ, ಸಾಧು, ಸಂತರು, ಶರಣರು, ಸ್ವಾಮೀಜಿಗಳು, ಪುರೋಹಿತರ, ಕೃಪೆಗೆ ಪಾತ್ರರಾಗೋಣ.....



ಜಗದೀಶ.ಎಸ್.ಗಿರಡ್ಡಿ.
ಲೇಖಕರು
ಗೊರಬಾಳ.
ಮೊ. 9902470856.

## ಆಧುನಿಕ ಜಗತ್ತಿಗೆ ತಾಯಿತನ ಎತ್ತಿ ಹಿಡಿದ ನಟಿ ಭಾವನ ಸಿದ್ದರಾಮ್ ತಳ್ಳಹಳ್ಳಿ ಶ್ಲಾಘನೀಯ.

ಮಲ್ಲಮ್ಮ ನುಡಿ ವಾರ್ತೆ

ಶಹಾಪೂರ : ಇಂತಹ ಆಧುನಿಕ ಜಗತ್ತಿನಲ್ಲಿ ಹೆಣ್ಣಿಗೆ ಗಂಡ ಅಷ್ಟೇ ಮುಖ್ಯ ಗಂಡನಿಗೆ ಹೆಣ್ಣು ಅಷ್ಟೇ ಮುಖ್ಯ ಎಂಬ ವಾಟಿಕೆಯಂತೆ ಮದುವೆಯಾಗಿ ತಾಯಿತನ ಆಗೋದು ಸೃಷ್ಟಿಯೇ ನೇಮವಾಗಿದೆ ಆದರೆ ಅದೆಷ್ಟೋ ಸಂಸಾರಿಕ ಜೀವನದಲ್ಲಿ ಸಂಗಾತಿ ಇದ್ದರು ಮಕ್ಕಳಾಗುವ ಭಾಗ್ಯವಿಲ್ಲದ ಕೆಲ ಮಾನಸಿಕ ಒತ್ತಡಗಳು ದೇಹದಲ್ಲಿರತಕ್ಕಂತಹ ಕೆಲವು ವಿಟಮಿನ್ಸ್ ಕೊರತೆಯಿಂದ ಹಲವು ಸಮಸ್ಯೆಗಳು ಎದುರಿಸುತ್ತಿರುವುದು ಹಲವು ಸಮಸ್ಯೆಗಳಿಂದ ಎಷ್ಟು ಕುಟುಂಬಗಳು ಬರಳುತ್ತಿವೆ.

ಹೆಂಡತಿಯೋ!

ಪ್ರೇಯಸಿಯೋ ಗರ್ಭಿಣಿ ಎಂದ ತಕ್ಷಣ ಕೈಕೊಟ್ಟು ಹೋದ ಕೋಟಿ ಜನ ಗಂಡಸರಿಂದ ಭೂಮಿಯ ಮೇಲೆ ಅದೆಷ್ಟೋ

ಮಕ್ಕಳು ತಂದೆ ಅಥ್ವಾ ಗಂಡು ಎಂಬುವವನ ಮೇಲೆ ನಂಬಿಕೆ ಕಳೆದುಕೊಂಡಿದೆ!

ಗಂಡಿನ ಸಾಂಗತ್ಯ ಇಲ್ಲದೆ ಒಂದು ಹೆಣ್ಣು ಬದುಕು ಕಟ್ಟಿಕೊಳ್ಳುವ ಆಸೆಯಲ್ಲಿದ್ದಾಳೆ ಅಂದರೆ ಅವಳಿಗೆ



ಗಂಡಸಿನ ಮೇಲೆ ನಂಬಿಕೆ ಇರದೇ ಇರಬಹುದು

ಅಥವಾ ಗಂಡಿನ ಪ್ರೀತಿ ಸಿಗದೆಯು ಇರಬಹುದು

ನಟಿ ಭಾವನರವರು ತಂದೆಯಿಲ್ಲದೆ ಮಗುವನ್ನ ಖಗಿಈ ಮುಖೇನ ಮಗು ಪಡೆಯುತಿದ್ದಾರೆ ಎಂದ ತಕ್ಷಣ ಜಾಲತಾಣಗಳಲ್ಲಿ ಅಸಹ್ಯ ಕಮೆಂಟ್ಸ್ ಗಳನ್ನ ನೋಡಿದಾಗ

ನಾವು ಯಾವ ಸಮಾಜದಲ್ಲಿ ಇದೀವಿ ಅನ್ನಿಸ್ತು ಅವರ ಹೆಣ್ತನದ ಬಗ್ಗೆ ಗೌರವಿಸೋ ಕೆಲಸ ಮಾಡಬೇಕಿದ್ದ ನಾವು

ಇಲ್ಲಾಂದರೆ ಸುಮ್ಮನೇ ಇದ್ದರು ಸಾಕೂ ಆದರೇ

ನಾವೆಲ್ಲಾ ಯಾಕಿಷ್ಟು ಹೃದಯ



ಶೂನ್ಯರಾಗಿ ಬದುಕ್ತಿದೀವಿ ಅಂತ ಅರ್ಥ ಆಗ್ತಿಲ್ಲ.?

ಮಹಾ ಭಾರತದಲ್ಲಿ ಕುಂತಿಗೂ ಹೀಗೆ ಪ್ರಶ್ನೆ ಮಾಡಿದ್ದರೆ

ಪಾಂಡವರ ಜನನ ಆಗ್ತಿರಲಿಲ್ಲ, ಮಹಾಭಾರತವೇ ನಡೆಯುತ್ತಿರಲಿಲ್ಲ!!

ಸಮಾಜದಲ್ಲಿ ಹೇಗಿದ್ದರೂ ಮಾತಾಡಿಕೊಳ್ಳುವುದು ಸಹಜವಾಗಿದೆ ಅದನ್ನು ಮೀರಿ ಸಮಾಜದಲ್ಲಿ ತಮ್ಮದೇ ಆದ ಒಂದು ಛಾಪವನ್ನು ಮೂಡಿಸಿರುವ ನಟಿ ಭಾವನವರಿಗೆ ಸಮಾಜಕ್ಕೆ ಮಾದರಿಯಾಗಿದ್ದಾರೆ ಎಂದು

ಸಿದ್ದರಾಮ ತಳ್ಳಹಳ್ಳಿ ಪತ್ರಿಕೆಯ ಮುಕ್ತವಾಗಿ ತಮ್ಮ ಅನಿಸಿಕೆಯನ್ನು ಹಂಚಿಕೊಂಡಿದ್ದಾರೆ.

## ವ್ಯಕ್ತಿ ಕಾಣೆ: ಪತ್ತೆಗೆ ಮನವಿ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜು.17-ನಗರದ ರಾಣಿತೋಟ ಬಡಾವಣೆಯ ಅಂಗನವಾಡಿ ಶಾಲೆ ಹತ್ತಿರದ ನಿವಾಸಿ ರಿಸ್ವಾಮಿ ಎನ್ನುವ 50 ವರ್ಷದ ವ್ಯಕ್ತಿಯು ಜು.10 ರಂದು ಕಾಣೆಯಾಗಿದ್ದು, ಈ ಕುರಿತು ಎಪಿಎಂಸಿ ಯಾರ್ಡ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಕಾಣೆಯಾದ ವ್ಯಕ್ತಿಯ ಪತ್ತೆಗೆ ಸಹಕರಿಸಬೇಕು ಎಂದು ಪೊಲೀಸ್ ಸಬ್ ಇನ್ಸ್‌ಪೆಕ್ಟರ್ ಮನವಿ ಮಾಡಿದ್ದಾರೆ.

ಚಹರೆ: ಅಂದಾಜು 5.5 ಅಡಿ ಎತ್ತರ, ದುಂಡುಮುಖ, ಬಿಳಿ ಮೈಬಣ್ಣ, ತೆಳುವಾದ ಮೈಕಟ್ಟು ಹೊಂದಿದ್ದು, ಎರಡು ಹುಬ್ಬುಗಳ ಮೇಲೆ ಮತ್ತು ಬಲ ದವಡೆ ಮೇಲೆ ಹಳೆ ಗಾಯದ ಗುರುತು ಇರುತ್ತದೆ. ಕಾಣೆ-ಯಾದ ಸಂದರ್ಭದಲ್ಲಿ ಬಿಳಿ ಬಣ್ಣದ ಅರ್ಧ ತೋಳಿನ ಅಂಗಿ ಮತ್ತು ಕಪ್ಪು ಬಣ್ಣದ ಪ್ಯಾಂಟ್ ಧರಿಸಿರುತ್ತಾನೆ. ಕನ್ನಡ, ತೆಲುಗು, ಹಿಂದಿ ಭಾಷೆ ಮಾತನಾಡುತ್ತಾನೆ.

ಮೇಲ್ಕಂಡ ಚಹರೆಗುರುತುಗಳುಳ್ಳ ವ್ಯಕ್ತಿಯ ಬಗ್ಗೆ ಮಾಹಿತಿ ಸಿಕ್ಕಲ್ಲಿ ಎಪಿಎಂಸಿ ಯಾರ್ಡ್ ಪೊಲೀಸ್ ಠಾಣೆಯ ದೂ.08392-250033 ಮತ್ತು ಬಳ್ಳಾರಿ ಪೊಲೀಸ್ ಕಂಟ್ರೋಲ್ ರೂಂ.08392-258100 ಗೆ ಸಂಪರ್ಕಿಸಬಹುದು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಪೋಷಕರ ಪತ್ತೆಗಾಗಿ ಮನವಿ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜು.17-ನಗರದ ಅಲ್ಲೀಪುರ ಗ್ರಾಮದ ಹೊಸಪೇಟೆ - ಬೆಂಗಳೂರು ಬೈಪಾಸ್ ರಸ್ತೆಯ ಪಕ್ಕದ ಸರ್ವೀಸ್ ರಸ್ತೆಯ ಎಡಪಕ್ಕದಲ್ಲಿ ಯಾ-ರೋ ಅನಾಮಧೇಯ ವ್ಯಕ್ತಿಗಳು ಜು.12 ರಂದು ನವಜಾತ ಹೆಣ್ಣು ಶಿಶುವನ್ನು ಬಿಟ್ಟುಹೋಗಿದ್ದು, ಮಗುವನ್ನು ಬಿಎಂಸಿಆರ್‌ಸಿ ಗೆ ದಾಖಲಿಸಲಾಗಿ ಚಿಕಿತ್ಸೆ ಫಲಕಾರಿಯಾಗದೇ ಮೃತಪಟ್ಟಿದೆ. ಈ ಕುರಿತು ಬಳ್ಳಾರಿ ಗ್ರಾಮೀಣ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಪೋಷಕರ ಪತ್ತೆಗೆ ಸಹಕರಿಸಬೇಕು ಎಂದು ಪೊಲೀಸ್ ಸಬ್ ಇನ್ಸ್‌ಪೆಕ್ಟರ್ ಮನವಿ ಮಾಡಿದ್ದಾರೆ. ಪೋಷಕರ ಬಗ್ಗೆ ಮಾಹಿತಿ ಸಿಕ್ಕಲ್ಲಿ ಬಳ್ಳಾರಿ ಗ್ರಾಮೀಣ ಪೊಲೀಸ್



ಠಾಣೆಯ ದೂ.08392276461, ಮೊ.9480803049 ಮತ್ತು ಬಳ್ಳಾರಿ ಪೊಲೀಸ್ ಕಂಟ್ರೋಲ್ ರೂಂ ದೂ.08392-258100 ಗೆ ಸಂಪರ್ಕಿಸಬಹುದು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ತೋಟಗಾರಿಕೆ ಇಲಾಖೆ: ವಿವಿಧ ಯೋಜನೆಗಳಡಿ ಸಹಾಯಧನಕ್ಕಾಗಿ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜು.17-ತೋಟಗಾರಿಕೆ ಇಲಾಖೆಯಿಂದ ಜಿಲ್ಲೆಯಲ್ಲಿ ತೆ-ೂಟಗಾರಿಕೆ ಬೆಳೆ ಬೆಳೆಯುವ ರೈತ ಫಲಾನುಭವಿಗಳಿಗೆ 2025-26 ನೇ ಸಾಲಿನಲ್ಲಿ ಅನುಷ್ಠಾನಗೊಳಿಸಲಾಗುತ್ತಿರುವ ವಿವಿಧ ಯೋಜನೆಗಳಡಿ ಸಹಾಯಧನ ನೀಡಲು ಉದ್ದೇಶಿಸಲಾಗಿದ್ದು, ಅರ್ಹರಿಂದ ಅರ್ಜಿ ಆಹ್ವಾನಿಸಲಾಗಿದೆ.

**ಯೋಜನೆಗಳು:** ಮಹಾತ್ಮಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆ:

ಹೊಸ ಪ್ರದೇಶ ವಿಸ್ತರಣೆ ಕಾರ್ಯಕ್ರಮದಡಿ (ಬಾಳೆ, ಅಂಜೂರ, ದಾಳಿಂಬೆ, ನುಗ್ಗೆ, ಪೇರಲ, ಪಪ್ಪಾಯ, ತೆಂಗು, ಡ್ರಾಗನ್ ಫ್ರೂಟ್, ನೇರಳೆ, ಸಪೋಟ, ಮಾವು, ಸೀತಾಫಲ್, ಹುಣಸೆ, ಕರಿಬೇವು, ಗುಲಾಬಿ ಹಾಗೂ ಇತರೆ) ಬೆಳೆಗಳಿಗೆ ಮತ್ತು ಕೃಷಿಹೊಂಡ, ಬದುಗಳ ನಿರ್ಮಾಣ, ಕೊಳವೆ ಬಾವಿ ಮರುಪೂರಣ ಘಟಕ ಇತ್ಯಾದಿ ಅನುಷ್ಠಾನಗೊಳಿಸಲಾಗುವುದು.

ರಾಷ್ಟ್ರೀಯ ತೋಟಗಾರಿಕೆ ಮಿಷನ್ ಯೋಜನೆ:

ಹೊಸ ಪ್ರದೇಶ ವಿಸ್ತರಣೆ, ಕೃಷಿಹೊಂಡ (21*21*3ಮೀ), ಈರುಳ್ಳಿ ಶೇಖರಣ ಘಟಕ, ನೆರಳು ಪರದೆ, ಪ್ಲಾಸ್ಟಿಕ್ ಹೊದಿಕೆ, 20 ಹೆಚ್.ಪಿ ಕಡಿಮೆಯುಳ್ಳ ಟ್ರಾಕ್ಟರ್, ಟ್ರಾಕ್ಟರ್ ಚಾಲಿತ ಔಷಧಿ ಸಿಂಪರಣೆ ಉಪಕರಣಗಳು ಮತ್ತು ವಿವಿಧ ಘಟಕಗಳಿಗೆ ಎಲ್ಲಾ ವರ್ಗದ ರೈತರಿಗೆ ಶೇ.50 ರಷ್ಟು ಲಭ್ಯತೆ-ಯ ಮೇರೆಗೆ ಸಹಾಯಧನ ವಿತರಿಸಲಾಗುತ್ತದೆ.

ಪ್ರಧಾನ ಮಂತ್ರಿ-ರಾಷ್ಟ್ರೀಯ ಕೃಷಿ ವಿಕಾಸ ಯೋಜನೆ- ಪ್ರತಿ ಹನಿಗೆ ಅಧಿಕ ಬೆಳೆ:

ಪ್ರಧಾನಮಂತ್ರಿ-ರಾಷ್ಟ್ರೀಯ ಕೃಷಿ ವಿಕಾಸ ಯೋಜನೆ-ಪ್ರತಿ ಹನಿಗೆ ಅಧಿಕ ಬೆಳೆ ಕಾರ್ಯಕ್ರಮದಡಿ ಸಹಾಯಧನ ನೀಡಲಾಗುತ್ತದೆ. ಹೊಸದಾಗಿ ಅಳವಡಿಸುವ ಸಾಮಾನ್ಯ ವರ್ಗ, ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ವರ್ಗದ ಫಲಾನುಭವಿಗಳಿಗೆ ಶೇ.90 ರಂತೆ ಸಹಾಯಧನ ವಿತರಿಸಲಾಗುವುದು.

ಕೇಂದ್ರ ಪುರಸ್ಕೃತ ರಾಷ್ಟ್ರೀಯ ಖಾದ್ಯತೈಲ ಅಭಿಯಾನ-ತಾಳೆ ಬೆಳೆ ಯೋಜನೆ:

2025-26ನೇ ಸಾಲಿನಲ್ಲಿ ತಾಳೆಬೆಳೆ ಬೆಳೆಯಲು ಆಸಕ್ತಿ ಇರುವ ರೈತರು ಕೇಂದ್ರಪುರಸ್ಕೃತ ಖಾದ್ಯ ತೈಲ ಅಭಿಯಾನ - ತಾಳೆ ಬೆಳೆ ಯೋಜನೆಯಡಿ ಹೊಸ ಪ್ರದೇಶ ವಿಸ್ತರಣೆ ಕಾರ್ಯಕ್ರಮಕ್ಕೆ ಪ್ರತೀ ಹೆಕ್ಟೇರ್‌ಗೆ ಶೇ.50 ರಂತೆ ರೂ.29,000, ಮೊದಲನೇ ವರ್ಷದಿಂದ ನಾಲ್ಕು ವರ್ಷಗಳ ಬೇಸಾಯ ನಿರ್ವಹಣೆ ಕಾರ್ಯಕ್ರಮಕ್ಕೆ ಪ್ರತಿ ವರ್ಷ ನಿರ್ವಹಣೆಗೆ ರೂ.5250, ಪ್ರತಿ ಹೆಕ್ಟೇರ್‌ಗೆ ಸಹಾಯಧನ ನೀಡಲಾಗುವುದು.

ಅಂತರ ಬೆಳೆಗೆ ರೂ.5250, ಎತ್ತರವಾದ ತಾಳೆ ಮರಗಳಿಂದ ಹಣ್ಣು ಕಟಾವು ಮಾಡಲು ರೂ.1000, ಪ್ರತಿ ಟನ್‌ಗೆ (ಗರಿಷ್ಠ 60 ಟನ್ ಮಾತ್ರ) ಸಹಾಯಧನ, ಡೀಸೆಲ್ ಪಂಪ್ ಸೆಟ್ ಕೊಳ್ಳಲು ರೂ.8000, ಕೊಳವೆ ಬಾವಿಗೆ ರೂ.50000, ಸಹಾಯಧನ, ತಾಳೆ ಹಣ್ಣು ಕಟಾವು ಮಾಡುವ ಉಪಕರಣ, ಮೊಟೊರೈಸ್ಡ್ ಚಿಸೆಲ್ ರೂ.15000, ತಾಳೆ ಹಣ್ಣು ಕಟಾವು ಏಣಿ ರೂ.5000, ಚಾಫ್ ಕಟ್ಟರ್ ರೂ.50000, ಟ್ರಾಕ್ಟರ್ ಟ್ರೋಲಿ ಖರೀದಿಸಲು ರೂ.1,60,000 (ಶೇ.50 ರಂತೆ) ಸಹಾಯಧನ ನೀಡಲಾಗುವುದು.

ಈ ಎಲ್ಲಾ ಯೋಜನೆಗಳಡಿ ಅಲ್ಪಸಂಖ್ಯಾತರಿಗೆ ಶೇ.15, ವಿಶೇಷ ಚೇತನರಿಗೆ ಶೇ.5 ಮತ್ತು ರೈತ ಮಹಿಳೆಯರಿಗೆ ಶೇ.33 ರಷ್ಟು ಅನುದಾನ ಮೀಸಲಿರಿಸಲಾಗಿದ್ದು, ಆಸಕ್ತ ರೈತ ಫಲಾನುಭವಿಗಳು ಸದುಪಯೋಗಪಡೆದುಕೊಳ್ಳಬೇಕು.

ಹೆಚ್ಚಿನ ಮಾಹಿತಿಗಾಗಿ ಆಯಾ ತಾಲ್ಲೂಕಿನ ತೋಟಗಾರಿಕೆ ಇಲಾಖೆ ಕಚೇರಿಗೆ ಭೇಟಿ ನೀಡಿ ಮಾಹಿತಿ ಪಡೆದು ಅರ್ಜಿ ಸಲ್ಲಿಸಬಹುದು ಎಂದು ತೋಟಗಾರಿಕೆ ಇಲಾಖೆಯ ಉಪನಿರ್ದೇಶಕ ಸಂತೋಷ್ ಸಪ್ಪಂಡಿ ಅವರು ತಿಳಿಸಿದ್ದಾರೆ.

## ಸುತ್ತುಗೋಡೆ ಕಾಮಗಾರಿ ಕಳಪೆ: ಸಾರ್ವಜನಿಕರ ಗಂಭೀರ ಆರೋಪ!

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ: ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿಯ 2024-25ನೇ ಸಾಲಿನ ಮೈಕ್ರೋ ಯೋಜನೆಯಡಿ ನಗರದಲ್ಲಿ ಕೈಗೆತ್ತಿಕೊಂಡಿರುವ ಸುಮಾರು ರೂ.10 ಕೋಟಿಯ ಕಾಮಗಾರಿಗಳು ಕಳಪೆ ಗುಣಮಟ್ಟದಿಂದಾಗಿ ಸಾರ್ವಜನಿಕರಲ್ಲಿ ಅಸಮಾಧಾನ ಉಂಟುಮಾಡಿವೆ. ಈ ಕುರಿತು ಸಾರ್ವಜನಿಕರು ಗಂಭೀರ ಆರೋಪ ಮಾಡುತ್ತಿದ್ದಾರೆ.

"ಭೂಸೇನಾ ನಿಗಮದ ಅಡಿಯಲ್ಲಿ ನಡೆಯುತ್ತಿರುವ ಈ ಕಾಮಗಾರಿಗಳು ತಂತ್ರಜ್ಞಾನ ಮತ್ತು ಗುಣಮಟ್ಟದ ಮೌಲ್ಯಮಾಪನ ಇಲ್ಲದಂತೆ ನಡೆದುಕೊಳ್ಳುತ್ತಿವೆ. ಸಿಮೆಂಟ್ ಕಾಂಕ್ರಿಟ್ ಕೆಲಸವು ಕ್ಯೂರಿಂಗ್ ಇಲ್ಲದೆ ಮಾಡಲಾಗಿದೆ, ಇದ-ರಿಂದ ಬಿರುಕು ಬಿಟ್ಟಿರುವುದು ಗೋಚರಿಸುತ್ತಿದೆ. ಅಲ್ಲದೆ, ರಸ್ತೆ ಡಿವೈಡರ್‌ಗಳಲ್ಲಿನ ಕಲ್ಲುಗಳು ಉದುರಿ ಬೀಳುತ್ತಿರುವುದು ನಾಗರಿಕರಿಗೆ ಅಪಾಯಕಾರಿಯಾಗಿದೆ," ಎಂದು ತಿಳಿಸಿದರು.



"ರಸ್ತೆ ಮೇಲೆ ಇಡಲಾಗಿರುವ ಹೆಚ್ಚಾದ ಪ್ರಮಾಣದ ಕಲ್ಲುಗಳು ವಾಹನ ಸವಾರರು ಹಾಗೂ ಪಾದಚಾರಿಗಳಿಗೆ ತೀವ್ರ ತೆ-ೂಂದರೆ ಉಂಟುಮಾಡುತ್ತಿವೆ. ಅಪಘಾತಗಳು ಸಂಭವಿಸಿದರೆ ಜವಾಬ್ದಾರಿಯಾರುಹೊರುತ್ತಾರೆ?" ಎಂದು ಪ್ರಶ್ನಿಸುತ್ತಿದ್ದಾರೆ.

**"ಭ್ರಷ್ಟಾಚಾರಕ್ಕೆ ಸಿಡುಕು"**

ಅಧಿಕಾರಿಗಳು ಹಾಗೂ ಗುತ್ತಿಗೆದಾರರ ನಡುವೆ ಭ್ರಷ್ಟಾಚಾರ ಮತ್ತು ಹಣ ಕಳವು ನಡೆಯುತ್ತಿದೆ ಎಂಬ ಆರೋಪವನ್ನೂ ಸಾರ್ವಜನಿಕರು ಪ್ರಶ್ನೆ ಮಾಡಿದರು. "ನಗರ ಸುಂದರೀಕರಣದ ಹೆಸರಲ್ಲಿ ಲಕ್ಷಾಂತರ ರೂ. ಲೂಟಿ ಮಾಡಲಾಗುತ್ತಿದೆ. ಕಾಮಗಾರಿಗಳು ವಿಳಂಬವಾಗುತ್ತಿವೆ, ಆದ-ರೆ ಪರಿಣಾಮ ನೀಡುವ ಗುಣಮಟ್ಟವೇ ಇಲ್ಲ," ಎಂದು ಆಕ್ರೋಶ ವ್ಯಕ್ತಪಡಿಸಿದರು.

**ಜಿಲಾಡಳಿತಕ್ಕೆ ಮನವಿ.**

ಜಿಲ್ಲಾಡಳಿತವು ಕೂಡಲೇ ಈ ವಿಷಯವನ್ನು ಗಂಭೀರವಾಗಿ ಪರಿಗಣಿಸಿ, ಕಾಮಗಾರಿಗಳ ಗುಣಮಟ್ಟವನ್ನು ಪರಿಶೀಲಿಸಿ ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು ಸಾರ್ವಜನಿಕರ ಆಗ್ರಹವಾಗಿದೆ.

## CHANGE OF NAME


Herin I, Shivlingayya S/o Shantayya Age 40 Years Occu : Agriculture R/o Kohinoor Tq. Basvakalyan Dist Bidar, do hereby state on oath as under.

1. That, my name is Shivlingayya S/o Shantayya but by mistake the name has been written as Shivanandayya S/o Shantayya in the Aadhar Card bearing Aadhar Card No. 7449 1194 2431.

2. That, in other documents such as Ration Card, Voter Card and other relevant documents the name is written as Shivlingayya S/o Shantayya. Hence in future I Should be callded as Shivlingayya S/o Shantayya.

Hence this proclamation.

Dated : 17-07-2025

Sd/-

Shivlingayya S/o Shantayya

R/o Kohinoor Tq : Basvakalyan

Dist . Bidar.


ಕರಕಳ್ಳಿ ತಾಂಡದಲ್ಲಿ ಕಂದಾಯ ಗ್ರಾಮ ಪರಿವರ್ತನೆಯ ವಿಶೇಷ ಸಭೆ

## ಕರಕಳ್ಳಿ ತಾಂಡಕ್ಕೆ ಸೇವಾ ನಗರ ಎಂದು ಹೆಸರಿಡಲು ಒಕ್ಕೂರಲ ಮನವಿ

ಮಲ್ಲಮ್ಮ ನುಡಿ ವಾರ್ತೆ

ಶಹಾಪುರ: ತಾಲೂಕಿನ ಕರಕಳ್ಳಿ ತಾಂಡಾದಲ್ಲಿ ಕಂದಾಯ ಗ್ರಾಮ ಪರಿವರ್ತನೆಗಾಗಿ ಪಂಚಾಯತ ಅಭಿವೃದ್ಧಿ ಅಧಿಕಾರಿಗಳು, ಕಂದಾಯ ಅಧಿಕಾರಿಗಳು ಹಾಗೂ ಗ್ರಾಮ ಪಂಚಾಯತ ಅಧ್ಯಕ್ಷರು ಮತ್ತು ಪ್ರಮುಖರ ಉಪಸ್ಥಿತಿಯಲ್ಲಿ ವಿಶೇಷ ಗ್ರಾಮ ಸಭೆ ಜರುಗಿತು.



ಈ ಸಂದರ್ಭದಲ್ಲಿ ಮುಖ್ಯ ಅತಿಥಿಗಳಾಗಿ ಪಾಲ್ಗೊಂಡಿದ್ದ ರಾಷ್ಟ್ರಪ್ರಶಸ್ತಿ ಪುರಸ್ಕೃತ ನಿವೃತ್ತ ಶಿಕ್ಷಕ ರೇಖು ಚೌವ್ಹಾಣ ಮಾತನಾಡಿ, ತಾಂಡಾದಲ್ಲಿ ಈಗಾಗಲೇ 5ನೇ ತರಗತಿಯವರೆಗೆ ಉತ್ತಮವಾದ ಶಾಲೆ ನಿರ್ಮಾಣವಾಗಿದೆ, ಸಧ್ಯ ಸ್ಮಶಾನ ಭೂಮಿಗೆ ದಾರಿಯ ಕೊರತೆ ಇದ್ದು, ಚರಂಡಿಗಳ ವ್ಯವಸ್ಥೆಯಾಗಬೇಕು, ಗ್ರಾಮಕ್ಕೆ ಬೇಕಾಗುವ ಅವಶ್ಯಕ ಮೂಲಭೂತ ಸೌಕರ್ಯ ಕಲ್ಪಿಸಲು ಅಧಿಕಾರಿಗಳು ಸಹಕರಿಸಬೇಕು ಎಂದು ತಿಳಿಸಿದರು.

ಇದೇ ಸಂದರ್ಭದಲ್ಲಿ ಗ್ರಾಮದ ಯುವಕರು, ಹಿರಿಯರು ಮನವಿ ಸಲ್ಲಿಸಿದರು. ವಿಶೇಷವಾಗಿ ಇಡೀ ಗ್ರಾಮಸ್ಥರು ಕರಕಳ್ಳಿ ತಾಂಡಕ್ಕೆ ಸೇವಾನಗರ ಎಂದು ನಾಮಕರಣ ಮಾಡಬೇಕೆಂದು ಠರಾವು ಪಾಸು ಮಾಡಿದರು.

ಈ ಸಂದರ್ಭದಲ್ಲಿ ಗ್ರಾಮ ಪಂಚಾಯತಿ ಅಭಿವೃದ್ಧಿ ಅಧಿಕಾರಿ ರಮೇಶ ನಾಯಕ ಮತ್ತು ಗ್ರಾಮ ಲೆಕ್ಕಾಧಿಕಾರಿ ಸುಧೀಶ ಮಾತನಾಡಿದರು.

ಉಕ್ಕಿನಾಳ ಗ್ರಾಮ ಪಂಚಾಯಿತಿ ಅಧ್ಯಕ್ಷ ಶಂಕರಗೌಡ ಕರಕಳ್ಳಿಯವರಿಗೆ ಸನ್ಮಾನಿಸಲಾಯಿತು.

ಗ್ರಾಮ ಪಂಚಾಯಿತಿ ಸದಸ್ಯ ಗೇನುಸೋಮ್ಲು, ಮಾಜಿ ಸದಸ್ಯ ತಿಪ್ಪಣ್ಣ ಸೇರಿದಂತೆ ಹೆಚ್ಚಿನ ಸಂಖ್ಯೆಯಲ್ಲಿ ತಾಂಡಾದ ನಾಗರಿಕರು ಪಾಲ್ಗೊಂಡಿದ್ದರು.

## ಮೇಲ್ಚಾವಣಿ ಕುಸಿಯುವ ಆತಂಕದಲ್ಲಿ ಸಣ್ಣಸಂಭ್ರ ಶಾಲೆಯ ವಿದ್ಯಾರ್ಥಿಗಳು:ಶರಣಬಸಪ್ಪ ಯಲ್ಹೇರಿ ಆಕ್ರೋಶ

ಮಲ್ಲಮ್ಮ ನುಡಿ ವಾರ್ತೆ

ಗುರುಮಠಕಲ್: ತಾಲೂಕಿನ ಸಣ್ಣ ಸಂಭ್ರ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ನಾಲ್ಕು ಮತ್ತು ಏಳನೇ ತರಗತಿ ವಿದ್ಯಾರ್ಥಿಗಳ ಶಾಲಾ ಕೊಠಡಿಗಳ ಮೇಲ್ಚಾವಣಿ ಉದುರಿಬೀಳುತ್ತಿದ್ದು ಭಯಭೀತಿಯಲ್ಲಿ ಮಕ್ಕಳು ವಿದ್ಯಾಭ್ಯಾಸ ಮಾಡುವ ಪರಿಸ್ಥಿತಿ ಇದ್ದರೂ ಇಲಾಖೆ ಗಮನ ಹರಿಸಿಲ್ಲ ಎಂದು ಕರ್ನಾಟಕ ರಕ್ಷಣಾ ವೇದಿಕೆ ತಾಲ್ಲೂಕು ಅಧ್ಯಕ್ಷ ಶರಣಬಸಪ್ಪ ಯಲ್ಹೇರಿ ಆಕ್ರೋಶ ವ್ಯಕ್ತಪಡಿಸಿದ್ದಾರೆ. ಸಮಸ್ಯೆ ತಿಳಿದ ತಕ್ಷಣ ಕರವೇ ಕಾರ್ಯಕರ್ತರೊಂದಿಗೆ ಸ್ಥಳಕ್ಕೆ ಭೇಟಿ ನೀಡಿದ ನಂತರ ಮಾಧ್ಯಮಗಳಿಗೆ ಹೇಳಿಕೆ ನೀಡಿರುವ ಅವರು, ವಿದ್ಯಾರ್ಥಿಗಳು ಜೀವ ಕೈಯಲ್ಲಿಟ್ಟುಕೊಂಡು ಓದು ಬರಹ ಮಾಡುತ್ತಿದ್ದುದು ಕಂಡುಬಂತು, ಈ ಸಮಸ್ಯೆಯನ್ನು ತಕ್ಷಣ ಪರಿಹರಿಸಬೇಕು ಎಂದು ಅವರು ಆಗ್ರಹಿಸಿದರು.

ಗಡಿಭಾಗವಾಗಿರುವ ಗುರುಮಠಕಲ್ ತಾಲೂಕಿನ ಹಲವು ಶಾಲೆಗಳಲ್ಲಿ ಇಲ್ಲಿಯವರೆಗೆ ಮೂಲಭೂತ ಸೌಕರ್ಯಗಳು ಇಲ್ಲದಂತಾಗಿದೆ ಶಿಕ್ಷಣ ಇಲಾಖೆಯಲ್ಲಿ ಒಂದಲ್ಲ ಒಂದು ರೀತಿಯ ಕೊರತೆ ಮತ್ತು ಸಮಸ್ಯೆಗಳು ಎದ್ದು ಕಾಣುತ್ತಿದೆ.



ಸಣ್ಣಸಂಭ್ರ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ ನಾಲ್ಕನೇ ತರಗತಿಯಲ್ಲಿ 21 ವಿದ್ಯಾರ್ಥಿಗಳು ಮತ್ತು 7ನೇ ತರಗತಿಯಲ್ಲಿ 35 ವಿದ್ಯಾರ್ಥಿಗಳು ವಿದ್ಯಾಭ್ಯಾಸ ಮಾಡುತ್ತಿದ್ದು ಶಾಲೆಯ ಮೇಲ್ಚಾವಣಿ ಸಿಮೆಂಟ್ ಉದುರಿ ಬೀಳುತ್ತಿದೆ. ಮಳೆ ಬಂದಾಗ ಮಳೆ ನೀರು ಶಾಲಾ ಕೊಠಡಿ ಸೋರುತ್ತಿರುವ ಮದ್ಯೆಯೇ ಮಕ್ಕಳು ಕೂಡುವ ಪರಿಸ್ಥಿತಿ ಇದೆ. ಬೇರೆ ಕೊಠಡಿಗಳು ಇಲ್ಲದಿರುವ ಕಾರಣ ಅದೇ ಕೊಠಡಿಯಲ್ಲಿ ಕೂಡಿಸಿ ಮಕ್ಕಳಿಗೆ ಹಿಂಸೆ ಕೊಡಲಾಗುತ್ತಿದೆ. ಎಂದು ಅವರು ಆರೋಪಿಸಿದರು.

ಹೇಳುವವರು ಕೇಳುವವರೇ ಇಲ್ಲದಂತಾಗಿರುವ ಗುರುಮಠಕಲ್ ಗಡಿಭಾಗದಲ್ಲಿ ಸರ್ಕಾರಿ ಶಾಲೆಗಳಿಗೆ ಮಕ್ಕಳು ಅನಿವಾರ್ಯವಾಗಿ ಹೋಗುವ ಪರಿಸ್ಥಿತಿ ಇದೆ. ಮಕ್ಕಳಿಗೆ ವಿದ್ಯಾಭ್ಯಾಸ ಮಾಡಲು ಸುಸಜ್ಜಿತ ಹೈಟೆಕ್ ಕೊಠಡಿಗಳು ಬೇಡ ಕನಿಷ್ಟ ಸೋರದ ಬೀಳದ ಕೊಠಡಿಗಳನ್ನು ಒದಗಿಸಲು ಸರ್ಕಾರ ಜಿಲ್ಲಾಡಳಿತ ಪ್ರಯತ್ನ ಮಾಡಿಲ್ಲ ಎಂದು ಅವರು ಆಕ್ರೋಶ ವ್ಯಕ್ತಪಡಿಸಿದ್ದಾರೆ. ಮಕ್ಕಳಿಗೆ ಅನಾಹುತ ಆಗುವುದಕ್ಕಿಂತ ಮುಂಚೆ ಶಿಕ್ಷಣ ಇಲಾಖೆ ಎಚ್ಚೆತ್ತುಕೊಂಡು ಕೊಠಡಿ ದುರಸ್ತಿ ಇಲ್ಲವೇ ಪರ್ಯಾಯ ವ್ಯವಸ್ಥೆಯನ್ನು ಮಾಡಬೇಕು.

ಗಡಿಭಾಗದ ಎಲ್ಲಾ ಶಾಲೆಗಳಿಗೆ ಶಿಕ್ಷಣ ಇಲಾಖೆ ಅಧಿಕಾರಿಗಳು ಭೇಟಿ ನೀಡಿ ಅಲ್ಲಿ ಮಕ್ಕಳಿಗೆ ಸಿಗಬೇಕಾದ ಮೂಲಭೂತ ಸೌಕರ್ಯಗಳ ಬಗ್ಗೆ ಗಮನಹರಿಸಿ ಮಕ್ಕಳಿಗೆ ಸೌಲಭ್ಯಗಳು ದೊರಕಿಸಿಕೊಡಬೇಕು ಎಂದು ಆಗ್ರಹಿಸಿದ್ದಾರೆ. ಈ ಸಂದರ್ಭದಲ್ಲಿ ಕೊಂಕಲ್ ಹೋಬಳಿ ಘಟಕ ಅಧ್ಯಕ್ಷ ಮುನೇಶ್ ಮಾಧವಾರ್, ತಾಲೂಕು ಪದಾಧಿಕಾರಿ ದೇವ ಸಿಂಗ್ ಮಾಧವರ, ತಾಯಪ್ಪ ಕಾಳೆಬೆಳಗುಂದಿ ಇನ್ನಿತರ ಕಾರ್ಯಕರ್ತರು ಉಪಸ್ಥಿತರಿದ್ದರು.

## ಬಾಲ್ಯ ವಿವಾಹ ನಿಷೇಧ, ಪೋಕ್ಸೋ ಕಾಯ್ದೆ ಕುರಿತು ಜಾಗೃತಿ ಮೂಡಿಸುವ ಕಾರ್ಯವಾಗಲಿ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜು.17-ಜಿಲ್ಲೆಯಲ್ಲಿ ಬಾಲ್ಯ ವಿವಾಹ ನಿಷೇಧ ಹಾಗೂ ಪೋಕ್ಸೋ ಕಾಯ್ದೆಯ ಕುರಿತು ಹೆಚ್ಚಾಗಿ ಜಾಗೃತಿ ಮೂಡಿಸುವ ಕೆಲಸವಾಗಬೇಕು ಎಂದು ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಅವರು ಹೇಳಿದರು.

ಗುರುವಾರ, ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ವಿವಿಧ ಯೋಜನೆಗಳ ಜಿಲ್ಲಾ ಮಟ್ಟದ ಸಮನ್ವಯ ಸಮಿತಿ ಹಾಗೂ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಪೊಲೀಸ್ ಇಲಾಖೆಯಿಂದ ಗ್ರಾಮ ಸಭೆಗಳಲ್ಲಿ, ಶಿಕ್ಷಣ ಇಲಾಖೆ ವತಿಯಿಂದ ಪದವಿ ಪೂರ್ವ ಕಾಲೇಜು ಹಾಗೂ ಪ್ರೌಢಶಾಲೆಗಳಲ್ಲಿಯೂ ಸಹ ಬಾಲ್ಯ ವಿವಾಹ ನಿಷೇಧ ಹಾಗೂ ಪೋ-ಕ್ಸೋ ಕಾಯ್ದೆಯ ಕುರಿತು ಅರಿವು ಮೂಡಿಸುವ ಕೆಲಸವಾಗಬೇಕು ಎಂದು ತಿಳಿಸಿದರು.

ಸಮಾಜ ಕಲ್ಯಾಣ, ಹಿಂದುಳಿದ ವರ್ಗಗಳ ಕಲ್ಯಾಣ, ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ಇತರೆ ಇಲಾಖೆಗಳ ವಸತಿ ನಿಲಯಗಳಲ್ಲಿ ಮಕ್ಕಳಿಗೆ ಬಾಲ್ಯವಿವಾಹ ಹಾಗೂ ಪೋಕ್ಸೋ ಕಾಯ್ದೆ ಕುರಿತು ಕಾರ್ಯಾಗಾರ ಹಮ್ಮಿಕೊಳ್ಳಬೇಕು. ಇಲಾಖೆಗಳು ಮತ್ತು ವಿವಿಧ ಸಂಘ-ಸಂಸ್ಥೆಗಳ ಸಹಕಾರ ಪಡೆದುಕೊಳ್ಳಬೇಕು ಎಂದು ನಿರ್ದೇಶನ ನೀಡಿದರು.

ಜಿಲ್ಲೆಯಲ್ಲಿ ಬೇಟಿ ಬಚಾವೋ-ಬೇಟಿ ಪಡಾವೋ ಯೋಜನೆ ಇನ್ನೂ ಹೆಚ್ಚು ಪರಿಣಾಮಕಾರಿಯಾಗುವ ದಿಸೆಯಲ್ಲಿ ಲಿಂಗಾನುಪಾತ ಕಡಿಮೆ ಇರುವ ತಾಲೂಕು ಹಾಗೂ ಗ್ರಾಮ ಪಂಚಾಯತ್‌ಗಳಲ್ಲಿ ಅರಿವು ಮೂಡಿಸುವ ಕೆಲಸ ಮಾಡಬೇಕು ಎಂದರು.

ಜಿಲ್ಲೆಯಲ್ಲಿ 6 ವರ್ಷದೊಳಗಿನ ಮಕ್ಕಳ ಕುಂಠಿತ ಬೆಳವಣಿಗೆ, ತೂಕ ನಿಯಂತ್ರಣ ಅಪೌಷ್ಠಿಕತೆ, ರಕ್ತಹೀನತೆ ತಡೆಗಟ್ಟುವಿಕೆ ಕುರಿತಾಗಿ




ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಪೋಷಣ್ ಅಭಿಯಾನ ಯೋಜನೆಯಿದ್ದು, ಫಲಾನುಭವಿಗಳನ್ನು ಗುರುತಿಸಿ ಪೋಷಣ್ ಟ್ರ್ಯಾಕರ್ ತಂತ್ರಾಂಶದಲ್ಲಿ ಆಧಾರ್ ಸೀಡಿಂಗ್ ಮಾಹಿತಿಯನ್ನು ತಪ್ಪಿಲ್ಲದಂತೆ ನಮೂದಿಸಬೇಕು ಎಂದು ಅಧಿಕಾರಿಗಳಿಗೆ ಸೂಚಿಸಿದರು.

ಅನಾಥ, ನಿರ್ಗತಿಕ, ಪೊಲೀಸ್‌ರಿಂದ ಅಭಿರಕ್ಷಣೆಗಾಗಿ ದಾಖಲಾದ ಮಹಿಳೆಯರು ಆಶ್ರಯ ಪಡೆಯಲು ಜಿಲ್ಲೆಯಲ್ಲಿ ಬಳ್ಳಾರಿಯಲ್ಲಿ ರಾಜ್ಯ ಮಹಿಳಾ ನಿಲಯವಿದ್ದು, ಅವರ ಆರೈಕೆಗಾಗಿ ಸಿಬ್ಬಂದಿಗಳ ಕೊರತೆಯಿದ್ದಲ್ಲಿ ಸಂಬಂಧಿಸಿದ ವಿಭಾಗದ ಅಧಿಕಾರಿಗಳಿಗೆ ಪತ್ರ ಬರೆಯಬೇಕು ಎಂದು ಸಂಸ್ಥೆಯ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು. ಕುಟುಂಬಗಳಲ್ಲಿ ಯಾವುದೇ ಬಗೆಯ ಸಮಸ್ಯೆಗಳಲ್ಲಿ ಹಿಂಸೆಗೊಳಗಾದ ಮಹಿಳೆಯರಿಗೆ ಸಂಬಂಧಿಸಿದಂತೆ ದೌಜನ್ಯಕ್ಕೊಳಗಾದ ಮಹಿಳೆಯರನ್ನು ರಕ್ಷಿಸಲು ಜಿಲ್ಲಾ ಮಟ್ಟದಲ್ಲಿ ಸಂರಕ್ಷಣಾಧಿಕಾರಿಯನ್ನು ನೇಮಿಸಲಾಗಿದ್ದು, ಮಹಿಳೆಯರ ಉಚಿತ ಸಹಾಯವಾಣಿ ಸಂ-ಖ್ಯೆ 181 ನ್ನು ಗ್ರಾಮಗಳಲ್ಲಿ, ಪೊಲೀಸ್ ಠಾಣೆಗಳಲ್ಲಿ ಹೆಚ್ಚಾಗಿ ಪ್ರಚಾರ ನೀಡಬೇಕು ಎಂದರು ತಿಳಿಸಿದರು.

ಮಹಿಳಾ ಮತ್ತು ಮಕ್ಕಳ ದೌರ್ಜನ್ಯ, ಮಹಿಳೆಯರ ಮತ್ತು ಮಕ್ಕಳ ಸಾಗಾಟ, ಕೌಟುಂಬಿಕ ದೌರ್ಜನ್ಯ, ಬಾಲ್ಯವಿವಾಹ ಸೇರಿದಂತೆ ವಿವಿಧ ಪ್ರಕರಣಗಳ ಶೀಘ್ರ ಇತ್ಯರ್ಥಕ್ಕೆ ಕ್ರಮ ವಹಿಸಬೇಕು ಎಂದು ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಅವರು ಅಧಿಕಾರಿಗಳಿಗೆ ಸೂಚಿಸಿದರು.

ಸಭೆಯಲ್ಲಿ ಸಖಿ ಒನ್ ಸ್ಟಾಪ್ ಸೆಂಟರ್, ಬಾಲಕಿಯರ ವಸತಿ ನಿಲಯ, ದಮನಿತ ಮಹಿಳೆಯರ/ ಟ್ರಾನ್ಸ್ ಜೆಂಡರ್ಸ್, ಸಾಂತ್ವನ ಕೇಂದ್ರಗಳು ಸೇರಿದಂತೆ ವಿವಿಧ ಯೋಜನೆಗಳ ಪ್ರಗತಿ ಪರಿಶೀಲನೆ ಜರುಗಿತು. ಈ ಸಂದರ್ಭದಲ್ಲಿ ಬಳ್ಳಾರಿ ನಗರ ಡಿಎಸ್ಪಿ ಚಂದ್ರಕಾಂತ ನಂದಾರೆಡ್ಡಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕ ರಾಮಕೃಷ್ಣ, ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಎಳೆ ನಾಗಪ್ಪ, ಎಲ್ಲಾ ತಾಲೂಕಿನ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು, ವಿವಿಧ ಇಲಾಖೆ ಅಧಿಕಾರಿಗಳು, ಸಂಘ ಸಂಸ್ಥೆಗಳ ಮುಖ್ಯಸ್ಥರು ಹಾಜರಿದ್ದರು.

## ಮಕ್ಕಳ ಕಲಿಕೆ, ಶಾಲಾಭಿವೃದ್ಧಿಗೆ ಶ್ರಮಿಸುವೆ : ಮುಜಾವರ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜು.17–ಮಕ್ಕಳ ಕಲಿಕೆ, ಶಾಲಾ ಅಭಿವೃದ್ಧಿಗೆ ಸರಕಾರ ಅನೇಕ ಯೋಜನೆ ರೂಪಿಸಿದ್ದು ಅದರ ಸದುಪಯೋಗ ಉಪಯೋಗಿಸಿಕೊಂಡು ವಿದ್ಯಾರ್ಥಿಗಳ ಶಿಕ್ಷಣ ಸುಧಾರಣೆ ಹಾಗೂ ಶಾಲೆಯ ಅಭಿವೃದ್ಧಿಗೆ ಶ್ರಮಿಸುವೆ ಎಂದು ಮುಖ್ಯೋಪಾಧ್ಯಾಯ ಕೆ.ಎಚ್. ಮುಜಾವರ ಹೇಳಿದರು.

ತಾಲೂಕಿನ ಯಡಹಳ್ಳಿ ಸರ್ಕಾರಿ ಪ್ರೌಢಶಾಲೆಗೆ ನೂತನ ಮುಖ್ಯೋಪಾಧ್ಯಾಯರಾಗಿ ನಿಯೋಜನೆಗೊಂಡು ಅಧಿಕಾರ ಸ್ವೀಕರಿಸಿ ಮಾತನಾಡಿದ ಅವರು, ಖಾಸಗಿ ಶಾಲೆಗಳಿಗಿಂತ ಇಂದು ಸರ್ಕಾರಿ ಶಾಲೆಗಳ ವಿದ್ಯಾರ್ಥಿಗಳೇ ಹೆಚ್ಚಿನ ಅಂಕ ಪಡೆದು ಮುಂಚೂಣಿಯಲ್ಲಿ ಇದ್ದಾರೆ. ಅದರಲ್ಲೂ ಈ ಶಾಲೆಯ ಬಗೆಗಿರುವ ಪ್ರಶಂಸನೀಯ ಮಾತುಗಳು ನನಗೆ ಇಲ್ಲಿ ಸೇವೆ ಸಲ್ಲಿಸಲು ಉತ್ಸಾಹ ಮೂಡಿಸಿವೆ. ಗ್ರಾಮಸ್ಥರು, ಎಸ್.ಡಿಎಂಸಿ ಸಮೀತಿ ಹಾಗೂ ಶಿಕ್ಷಕರ ಸಹಕಾರದೊಂದಿಗೆ ಪ್ರಾಮಾಣಿಕವಾಗಿ ಕರ್ತವ್ಯ ನಿರ್ವಹಿಸುವೆ ಎಂದರು.

ಪೋಷಣಾ ಅಭಿಯಾನ ಕುರಿತಾಗಿ ತಾಲೂಕ ಅಕ್ಷರದಾಸೋಹ ಅಧಿಕಾರಿ ನಾಗರಾಜ ದೇಶಪಾಂಡೆ ಮಾತನಾಡಿ, ಮಕ್ಕಳಲ್ಲಿ ಅಪೌಷ್ಠಿಕತೆ ಬರಬಾರದು ಎಂಬ ಉದ್ದೇಶದಿಂದ ಸರಕಾರ ಪೌಷ್ಠಿಕ ಶಿರಿಧಾನ್ಯಗಳಾದ ಸಜ್ಜೆ, ಹುರುಳಿ, ನವನೆ, ತರಕಾರಿ, ಮೊಟ್ಟೆ, ಹಣ್ಣು ಮತ್ತು ಹಾಲು ವಿದ್ಯಾರ್ಥಿಗಳಿಗೆ ಬಿಸಿಯೂಟ ವ್ಯವಸ್ಥೆ ಮೂಲಕ ನೀಡುತ್ತಿದ್ದು ವಿದ್ಯಾರ್ಥಿಗಳು ಪ್ರಯೋಜನ ಪಡೆದು ಶಿಕ್ಷಣವಂತರಾಗಿ ಭವಿಷ್ಯ ರೂಪಿಸಿಕೊಳ್ಳಬೇಕು ಎಂದು ಹೇಳಿದರು.

ನಿವೃತ್ತಿ ಹೊಂದಿದ ಶಾಲೆಯ ಮುಖ್ಯೋಪಾಧ್ಯಾಯ ಆರ್.ಟಿ.ಬಾಳಕ್ಕನವರ ಮಾತನಾಡಿ, ಈ ಶಾಲೆಯಲ್ಲಿ ಸುದೀರ್ಘ 11 ವರ್ಷಗಳ ಸೇವೆ ಸಲ್ಲಿಸಿದ್ದು. ಇಲ್ಲಿಯ ಜನತೆ ನನಗೆ ಸಹಕಾರ ನೀಡಿದಂತೆ ನೂತನವಾಗಿ ಬಂದ ಕೆ.ಎಚ್.ಮುಜಾವರಗೆ ಸಹಕಾರ ನೀಡಬೇಕು ಎಂದು ಮನವಿ ಮಾಡಿದರು.

ನಿವೃತ್ತ ಮುಖ್ಯಗುರು ಎ.ಎನ್.ಪೋಲಿಸ್ ಹಾಗೂ ಎ.ಜಿ.ಹೊಸಗೌಡರ ಮಾತನಾಡಿದರು. ಕಾರ್ಯಕ್ರಮದಲ್ಲಿ ಪ್ರೌಢಶಾಲಾ ಎಸ್.ಡಿ.ಎಮ್.ಸಿ ಅಧ್ಯಕ್ಷ ಮಂಜುನಾಥ ಮಾದರ. ಪ್ರಾಥಮಿಕ ಶಾಲೆಯ ಅಧ್ಯಕ್ಷ ಹನಮಂತ ಪಸಂದವರ, ಮುಖ್ಯೋಪಾಧ್ಯಾಯಿಣಿ ಎಮ್.ಎಸ್.ಅಳ್ಳಿಮಟ್ಟಿ, ಸಹಶಿಕ್ಷಕರು, ಗ್ರಾಮಸ್ಥರು ಉಪಸ್ಥಿತರಿದ್ದರು. ಶಿಕ್ಷಕಿ ಸುಜಾತ ಬನಹಟ್ಟಿ ಸ್ವಾಗತಿಸಿ ವಂದಿಸಿದರು.

## ಜುಲೈ ಮಾಹೆಯ ಪಡಿತರ ವಿತರಣೆ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜು.17– ಸಾರ್ವಜನಿಕ ವಿತರಣಾ ಪದ್ಧತಿಯಡಿ ಆದ್ಯತಾ ಪಡಿತರ ಚೀಟಿಯ (ಅಂತ್ಯೋದಯ+ಬಿಪಿಎಲ್) ಫಲಾನುಭವಿಗಳಿಗೆ ಜುಲೈ–2025ರ ಮಾಹೆಯಲ್ಲಿ ರಾಷ್ಟ್ರೀಯ ಆಹಾರ ಭದ್ರತಾ ಕಾಯ್ದೆಯನ್ವಯ ಎಎವೈ ಪಡಿತರ ಚೀಟಿಗೆ 14 ಕೆ.ಜಿ ಅಕ್ಕಿ ಹಾಗೂ 21 ಕೆಜಿ ಜೋಳ ಮತ್ತು ಪಿಎಚ್‌ಎಚ್ ಪ್ರತಿ ಫಲಾನುಭವಿಗೆ 2 ಕೆ.ಜಿ ಅಕ್ಕಿ ಹಾಗೂ 3 ಕೆ.ಜಿ ಜೋಳ ಹಾಗೂ ರಾಜ್ಯ ಸರ್ಕಾರದ ವತಿಯಿಂದ ಅನ್ನಭಾಗ್ಯ ಯೋಜನೆಯಡಿ ಪ್ರತಿ ಫಲಾನುಭವಿಗೆ ಹೆಚ್ಚುವರಿಯಾಗಿ 5 ಕೆ.ಜಿ ಅಕ್ಕಿಯನ್ನು ವಿತರಿಸಲು ಜಿಲ್ಲಾಧಿಕಾರಿಗಳು ಆದೇಶಿಸಿರುತ್ತಾರೆ.

ಈ ತಿಂಗಳು ಪ್ರತಿದಿನ ಬೆಳಿಗ್ಗೆ 8 ರಿಂದ ರಾತ್ರಿ 8 ಗಂಟೆಯವರೆಗೆ ನ್ಯಾಯಬೆಲೆ ಅಂಗಡಿಯನ್ನು ತೆ–ರೆದು ಸರಿಯಾದ ಪ್ರಮಾಣದಲ್ಲಿ ಪಡಿತರ ವಿತರಣೆ ಮಾಡತಕ್ಕದ್ದು, ಒಂದು ವೇಳೆ ಲೋಪದೋಷಗಳು ಕಂಡುಬಂದಲ್ಲಿ ನ್ಯಾಯಬೆಲೆ ಅಂಗಡಿ–ಕಾರರ ಮೇಲೆ ನಿರ್ಧಾಕ್ಷಿಣ್ಯವಾಗಿ ಕ್ರಮ ಕೈಗೊಳ್ಳಲಾಗುವುದು. ಹಂಚಿಕೆಯಾದ ಆಹಾರ ಧಾನ್ಯವನ್ನು ಕಾಳಸಂತೆಯಲ್ಲಿ ಮಾರಾಟ ಮಾಡಿದರೆ ಅಂತವರ ಪಡಿತರ ಚೀಟಿ ರದ್ದುಪಡಿಸಲಾಗುವುದು. ಪಡಿತರ ವಿತರಣೆ ಕುರಿತು ಏನಾದರೂ ದೂರುಗಳಿದ್ದಲ್ಲಿ, ಪೊಲೀಸ್ ಇಲಾಖೆಯ ಸಹಾಯವಾಣಿ ಸಂಖ್ಯೆ 112, ಮೊಬೈಲ ಸಂಖ್ಯೆ 9480803900 ಹಾಗೂ ಆಹಾರ ಇಲಾಖೆಯ ಸಹಾಯವಾಣಿ:1967 ದೂರವಾಣಿ ಸಂಖ್ಯೆ 08354–235094ಗೆ ಕರೆ ಮಾಡಿ ದೂರು ಸಲ್ಲಿಸಬಹುದಾಗಿದೆ. ಇಲ್ಲವೇ ಸಂಬಂಧಿಸಿದ ತಾಲೂಕಿನ ತಹಶೀಲ್ದಾರ ಕಛೇರಿಗೆ ಭೇಟಿ ನೀಡಿ ದೂರು ಸಲ್ಲಿಸಬಹುದು ಎಂದು ಜಿಲ್ಲಾಧಿಕಾರಿ ಸಂಗಪ್ಪ ಪ್ರಕಟಣೆ ಮೂಲಕ ತಿಳಿಸಿದ್ದಾರೆ.

## ವಸತಿನಿಲಯ ಪ್ರವೇಶಕ್ಕೆ ಅರ್ಜಿ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜು.17–ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮೆಟ್ರಿಕ್ ನಂತರದ ಬಾಲಕ ಮತ್ತು ಬಾಲಕಿಯರ ವಿದ್ಯಾರ್ಥಿನಿಲಯಗಳಲ್ಲಿ ಪ್ರವೇಶಕ್ಕಾಗಿ ಹೊಸದಾಗಿ ಪ್ರವೇಶ ಬಯಸುವ ಪ್ರವರ್ಗ–1,2ಎ,2ಬಿ,3ಎ,3ಬಿ,ಪ.ಜಾ ಮತ್ತು ಪ್ರವರ್ಗದ ಸಾಮ್ಯಾನ ಪದವಿ ಕೋರ್ಸಿನಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಂದ 2025–26ನೇ ಸಾಲಿಗೆ ಅರ್ಜಿ ಆಹ್ವಾನಿಸಲಾಗಿದೆ.

ವಿದ್ಯಾರ್ಥಿಗಳು https://shp.karnataka.gov.in/bcwd ಮೂಲಕ ಅರ್ಜಿ ಸಲ್ಲಿಸಬಹುದು. ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ ಅಗಸ್ಟ 18. ಅರ್ಜಿ ಸಲ್ಲಿಸಲು ತಾಂತ್ರಿಕ ತೊಂದರೆಗಳಾದಲ್ಲಿ bcwdhelpline@gmail.com ಇ–ಮೇಲ್ ಮುಖಾಂತರ ಅಥವಾ ಜಿಲ್ಲಾ ಹಾಗೂ ತಾಲೂಕು ಅಧಿಕಾರಿಗಳು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಇವರನ್ನು ಅಗತ್ಯ ದಾಖಲೆಗಳೊಂದಿಗೆ ಸಂಪರ್ಕಿಸಬಹುದು.

ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ 8050770004 ಹಾಗೂ 8050770005ಗೆ ಸಂಪರ್ಕಿಸಬಹುದು ಎಂದು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಆಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಜು.21 ರಂದು ಪ್ರಗತಿ ಪರಿಶೀಲನಾ ಸಭೆ

ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ತಾಲ್ಲೂಕು ಮಟ್ಟದ ಗ್ಯಾರಂಟಿ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆಯನ್ನು ಜುಲೈ 21 ರಂದು ಬೆಳಿಗ್ಗೆ 11 ಗಂಟೆಗೆ ಕೊಪ್ಪಳ ತಾಲೂಕ ಪಂಚಾಯತಿಯ ಸಭಾಂಗಣದಲ್ಲಿ ಹಮ್ಮಿಕೊಳ್ಳಲಾಗಿದೆ.

ಸಭೆಯ ಅಧ್ಯಕ್ಷತೆಯನ್ನು ಕೊಪ್ಪಳ ತಾಲ್ಲೂಕು ಮಟ್ಟದ ಗ್ಯಾರಂಟಿ ಯೋಜನೆಗಳ ಸಮಿತಿ ಅಧ್ಯಕ್ಷರಾದ ಬಾಲಚಂದ್ರನ್ ಸ್ಯಾಮುವೆಲ್ ಅವರು ವಹಿಸುವರು. ಸಭೆಯಲ್ಲಿ ರಾಜ್ಯ ಸರ್ಕಾರದ 5 ಗ್ಯಾರಂಟಿ ಯೋಜನೆಗಳ ಪ್ರಗತಿ ಪರಿಶೀಲನೆ ಹಾಗೂ ಇತರ ವಿಷಯಗಳ ಕುರಿತು ಚರ್ಚೆ ನಡೆಯಲಿದ್ದು, ಐದು ಗ್ಯಾರಂಟಿ ಯೋಜನೆಗಳ ಅನುಷ್ಠಾನಾಧಿಕಾರಿಗಳು ಅಗತ್ಯ ಮಾಹಿತಿಯೊಂದಿಗೆ ಪ್ರತಿನಿಧಿಗಳನ್ನು ನಿಯೋಜಿಸದೆ ಖುದ್ದಾಗಿ ಸಭೆಗೆ ಹಾಜರಾಗುವಂತೆ ಕೊಪ್ಪಳ ತಾ.ಪಂ ಕಾರ್ಯನಿರ್ವಾಹಕ ಅಧಿಕಾರಿ ದುಂಡಪ್ಪ ತುರಾದಿ ತಿಳಿಸಿದ್ದಾರೆ.

### ವಿವಿಧ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆ

## ಕಾಲಮಿತಿಯಲ್ಲಿ ಯೋಜನೆ ಅನುಷ್ಠಾನಕ್ಕೆ ಸಿಇಓ ಸೂಚನೆ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜು.17–ಅಭಿವೃದ್ಧಿ ಕಾಮಗಾರಿಗಳಿಗೆ ರೂಪಿಸಲಾದ ಕ್ರಿಯಾಯೋಜನೆಗಳನ್ನು ಕಾಲಮಿತಿಯಲ್ಲಿ ಅನುಷ್ಠಾನಗೊಳಿಸಲು ಕ್ರಮವಹಿಸಬೇಕೆಂದು ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಶಶಿಧರ ಕುರೇರ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಜಿಲ್ಲೆಯ ಜಮಖಂಡಿ ತಾಲೂಕಾ ಪಂಚಾಯತ ಸಭಾಭವನದಲ್ಲಿ ಗುರುವಾರ ಜಮಖಂಡಿ ಮತ್ತು ರಬಕವಿ–ಬನಹಟ್ಟಿ ತಾಲೂಕುಗಳ ಕಾರ್ಯನಿರ್ವಾಹಕ ಅಧಿಕಾರಿಗಳು, ಸಹಾಯಕ ನಿರ್ದೇಶಕರು ಹಾಗೂ ಪಂಚಾಯತ ಅಭಿವೃದ್ಧಿ ಅಧಿಕಾರಿಗಳ ಜೊತೆ ನಡೆಸಿದ ವಿವಿಧ ಯೋಜನೆಗಳ ಅನುಷ್ಠಾನದ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಯೋಜನೆಗಳಿಗೆ ಸಂಬಂಧಪಟ್ಟ ಎಲ್ಲ ದಾಖಲೆಗಳನ್ನು ಆಧುನಿಕ ತಂತ್ರಜ್ಞಾನ ಬಳಸಿಕೊಂಡು ನಿಖರವಾದ ಮಾಹಿತಿ ನೀಡಬೇಕು. ನಿಯಮಗಳಿಗೆ ಅನುಗುಣವಾಗಿ ಕೆಲಸ ಮಾಡಬೇಕು ಯಾವುದೇ ರೀತಿಯಲ್ಲಿ ವಿಳಂಬಕ್ಕೆ ಅವಕಾಶ ನೀಡಬಾರದು ಎಂದರು.

ಗ್ರಾಮಸ್ಥರ ಭಾಗವಹಿಸುವಿಕೆ ಮತ್ತು ಸಾಮೂಹಿಕ ಹೊಣೆಗಾರಿಕೆ ಮೂಲಕ ಆಡಳಿತವನ್ನು ಬಲಪಡಿಸಬೇಕು. ಕಾಮಗಾರಿಗಳ ಗುಣಮಟ್ಟ, ಸ್ಥಳೀಯರ ಜವಾಬ್ದಾರಿತ್ವ ಹಾಗೂ ಪಾರದರ್ಶಕತೆ ಮುಖ್ಯವಾಗಿದೆ. ಸ್ಥಳೀಯ ಆದಾಯ ಹೆಚ್ಚಳಕ್ಕೆ ಗಮನ ಹರಿಸಬೇಕು. ಗ್ರಾಮ ಪಂಚಾಯತಿಯಲ್ಲಿ ತೆರಿಗೆ ನೂರಕ್ಕೆ ನೂರರಷ್ಟು ಸಂಗ್ರಹಕ್ಕೆ ಕ್ರಮವಹಿಸಬೇಕು ಅಂದಾಗ ಮಾತ್ರ ಅಭಿವೃದ್ಧಿ ಕಾರ್ಯ ಕೈಗೊಳ್ಳಲು ಸಾಧ್ಯವಾಗುತ್ತದೆ. ನಿಗದಿಪಡಿಸಿದ ಗುರಿಗಳ ಪ್ರಗತಿ ಪರಿಶೀಲಿಸಿದ ಅವರು ಕಾಲಮಿತಿಯಲ್ಲಿ ಅನುಷ್ಠಾನಗೊಳಿಸಲು ಮುಂದಾಗಬೇಕು ಎಂದು ಸೂಚಿಸಿದರು.

ವಸೂಲಿ ಪ್ರಕ್ರಿಯೆಯ ನೈಜ ಆಧಾರಗಳು, ಡಿಜಿಟಲ್ ಲೈಬ್ರರಿಗಳ ಸ್ಥಾಪನೆ ಮತ್ತು ಬಳಕೆ, ವಿದ್ಯಾರ್ಥಿಗಳಿಗೆ ಮತ್ತು ಸಾರ್ವಜನಿಕರಿಗೆ ಲಭ್ಯವಿರುವ ಡಿಜಿಟಲ್ ಮೂಲಸೌಕರ್ಯ, ಲೈಬ್ರರಿ ಬಳಕೆಯ ಪ್ರಮಾಣ ಮತ್ತು ನಿರ್ವಹಣೆ, ಗ್ರಾಮ ಪಂಚಾಯತ್ ಕಟ್ಟಡಗಳು, ಕಚೇರಿಗಳ ಮೂಲಭೂತ ಸೌಕರ್ಯಗಳು, ಸೇವಾ ಪೂರೈ–ಕೆಗಾಗಿ ಅನುಕೂಲವಿರುವ ಪರಿಸರ ನಿರ್ಮಾಣ, ಜಲ್ ಜೀವನ್ ಮಿಷನ್, ಎಲ್ಲ ಮನೆಗಳಿಗೆ ನಲಿನ ಮೂಲಕ ಶುದ್ಧ ಕುಡಿಯುವ ನೀರು ಪೂರೈಸುವ ಕಾರ್ಯದ ಪ್ರಗತಿ ಪರಿಶೀಲನೆ ನಡೆಸಿದರು.

ಸಂವಹನ ಕೊಠಡಿಗಳು, ಟ್ಯಾಂಕ್‌ಗಳು, ಪೈಪ್‌ಲೈನ್ ವಿಸ್ತರಣೆ ಬಗ್ಗೆ ಪರಿಶೀಲನೆ, ಜನಸಾಮಾನ್ಯರಿಗೆ ಸೇವೆಯ ಲಭ್ಯತೆ, ಸ್ವಚ್ಛ ಭಾರತ ಮಿಷನ್, ಶೌಚಾಲಯಗಳ ನಿರ್ಮಾಣ ಮತ್ತು ಶೇಕಡಾವಾರು ಬಳಕೆ, ದೈನಂದಿನ ತ್ಯಾಜ್ಯ ನಿರ್ವಹಣೆ, ಒಪ್ಪಂದಿತ ವಾಸ್ತವಿಕತೆ, ಗ್ರಾಮೀಣ ಸ್ವಚ್ಛತೆ–ಯ ಮಟ್ಟದ ಬಗ್ಗೆ ಅಧಿಕಾರಿಗಳಿಗೆ ತಿಳಿಸಿದರು.

ಸಭೆಯಲ್ಲಿ ಜಿಲ್ಲಾ ಪಂಚಾಯತ ಉಪ ಕಾರ್ಯದರ್ಶಿ ಎನ್.ವಾಯ್.ಬಸರಿಗಿಡದ, ಜಮಖಂಡಿ ತಾಲೂಕಾ ಪಂಚಾಯತ ಕಾರ್ಯನಿರ್ವಾಹಕ ಅಧಿಕಾರಿ ಸಚಿನ್ ಎಂ, ರಬಕವಿ–ಬನಹಟ್ಟಿ ತಾಲೂಕಿನ ಕಾರ್ಯನಿರ್ವಾಹಕ ಅಧಿಕಾರಿ ಸಿದ್ದಪ್ಪ ಪಾಟಿಹಾಳ, ಎರಡು ತಾಲೂಕುಗಳ ಸಹಾಯಕ ನಿರ್ದೇಶಕರು ಹಾಗೂ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು ಉಪಸ್ಥಿತರಿದ್ದರು.

### ಪ್ಲಾಸ್ಟಿಕ್ ಧ್ವಜ ಬಳಸದಂತೆ ಸೂಚನೆ

## ಸಂಭ್ರಮದ ಸ್ವಾತಂತ್ರ್ಯೋತ್ಸವ ಆಚರಣೆಗೆ ಡಿಸಿ ಸಂಗಪ್ಪ ಕರೆ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜು.17–ಜಿಲ್ಲೆಯಲ್ಲಿ ಆಗಸ್ಟ 15 ರಂದು ಜರುಗಲಿರುವ ಸ್ವಾತಂತ್ರ್ಯೋತ್ಸವ ಆಚರಣೆಗೆ ಜಿಲ್ಲಾಡಳಿತದಿಂದ ಸಕಲ ಸಿದ್ದತೆ ಮಾಡಿಕೊಳ್ಳಲಾಗುತ್ತಿದೆ ಎಂದು ಜಿಲ್ಲಾಧಿಕಾರಿ ಸಂಗಪ್ಪ ಹೇಳಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಗುರುವಾರ ಜರುಗಿದ ಸ್ವಾತಂತ್ರ್ಯೋತವ ದಿನಾಚರಣೆ ಕುರಿತ ಪೂರ್ವ ಸಿದ್ದತಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಪ್ರತಿ ವರ್ಷದಂತೆ ಈ ವರ್ಷವೂ ಸ್ವಾತಂತ್ರ್ಯೋತ್ಸವವನ್ನು ಸಂಭ್ರಮದಿಂದ ಆಚರಿಸುವ ನಿಟ್ಟಿನಲ್ಲಿ ರಚಿಸಲಾದ ವಿವಿಧ ಸಮಿತಿಗಳ ಸಿದ್ದತೆ ಕುರಿತು ಚರ್ಚಿಸಿ, ಕಾರ್ಯಕ್ರಮದಲ್ಲಿ ಯಾವುದೇ ರೀತಿಯ ಲೋಪವಾಗದಂತೆ ಎಲ್ಲ ರೀತಿ ಸಿದ್ದತೆಗಳನ್ನು ಮಾಡಿಕೊಳ್ಳಬೇಕು. ಪ್ಲಾಸ್ಟಿಕ್ ಧ್ವಜ ಅಂಗಡಿಗಳಲ್ಲಿ ಮಾರಾಟವಾಗದಂತೆ ನಗರಸಭೆ ನಿಗಾವಹಿಸಬೇಕು ಎಂದು ತಿಳಿಸಿದ ಜಿಲ್ಲಾಧಿಕಾರಿಗಳು ಸುತ್ತೋಲೆ ಹೊರಡಿಸುವಂತೆ ಶಾಲಾ ಶಿಕ್ಷಣ ಇಲಾಖೆಗೆ ಸೂಚಿಸಿದರು.

ಆಗಸ್ಟ 15 ರಂದು ಬೆಳಿಗ್ಗೆ 9 ಗಂಟೆಗೆ ಜಿಲ್ಲಾ ಕ್ರೀಡಾಂಗಣದಲ್ಲಿ ಜಿಲ್ಲಾ ಉಸ್ತುವಾರಿ ಸಚಿವರಿಂದ ಧ್ವಜಾರೋಜಹಣ ನೆರವೇರಲಿದ್ದು, ಪೋಲಿಸ್, ಗೃಹರಕ್ಷಕದಳ, ಎನ್‌ಸಿಸಿ, ಸ್ಕೌಟ್ಸ್ ಮತ್ತು ಗೈಡ್ಸ್ ಹಾಗೂ ಮಾಜಿ ಸೈನಿಕರ ತಂಡ ಒಳಗೊಂಡಂತೆ ಆಕರ್ಷಕ ಪಥಸಂಚಲನ ಹಮ್ಮಿಕೊಳ್ಳಲಾಗುತ್ತಿದೆ. ಶಿಷ್ಟಾಚಾರದ ಪ್ರಕಾರ ಆಮಂತ್ರಣ ಪತ್ರಿಕೆ ಮುದ್ರಣ ಹಾಗೂ ಮಾಜಿ ಸೈನಿಕರಿಗೆ, ವಿವಿಧ ಕ್ಷೇತ್ರಗಳಲ್ಲಿ ಉತ್ತಮ ಸೇವೆ ಸಲ್ಲಿಸಿದವರಿಗೆ ಸನ್ಮಾನ ಮಾಡಲಾಗುತ್ತಿದೆ. ಕಾರ್ಯಕ್ರಮದಲ್ಲಿ ಸಾಂಸ್ಕೃತಿಕ ಕಾರ್ಯಕ್ರಮ, ದೇಶಭಕ್ತಿ ಗೀತೆ ಹಾಡಿಸಲು ತಂಡಗಳನ್ನು ಆಯ್ಕೆ ಮಾಡಲು ತಿಳಿಸಿದರು. ಕಾರ್ಯಕ್ರಮ ಯಶಸ್ವಿಗೆ ವಿವಿಧ ಸಮಿತಿಗಳನ್ನು ರಚಿಸಲಾಗಿದ್ದು, ಸಮಿತಿಗೆ ವಹಿಸಿದ ಜವಾಬ್ದಾರಿಯನ್ನು ತಪ್ಪದೇ ಪಾಲಿಸಬೇಕು. ಶಿಷ್ಟಾಚಾರಕ್ಕೆ ಲೋಪವಾಗದಂತೆ ಧ್ವಜ ಸಂಹಿತೆಗೆ ಯಾವುದೇ ತರಹ ಅಪಚಾರವಾಗದಂತೆ ನೋಡಿಕೊಳ್ಳಲು ಸೂಚಿಸಿದ ಅವರು, ಧ್ವಜಾರೋಹಣ ವ್ಯವಸ್ಥೆ ಮಾಡಲು ಭಾರತ ಸೇವಾದಳ, ಪೋಲಿಸ್ ಇಲಾಖೆ, ತಹಶೀಲ್ದಾರ ಹಾಗೂ ಯುವಜನ ಸೇವಾ ಹಾಗೂ ಕ್ರೀಡಾಧಿಕಾರಿಗಳಿಗೆ ವಹಿಸಿದರೆ, ಬಂದೋಬಸ್ತಿ ವ್ಯವಸ್ಥೆಗೆ ಪೋಲಿಸ್ ಇಲಾಖೆಗೆ ತಿಳಿಸಲಾಯಿತು. ಜಿಲ್ಲಾ ಕ್ರೀಡಾಂಗಣ ಸ್ವಚ್ಛತೆಗೆ ನಗರಸಭೆಗೆ ಸೂಚಿಸಲಾಯಿತು.

ಕ್ರೀಡಾಂಗಣದಲ್ಲಿ ಸ್ಟೇಜ ನಿರ್ಮಾಣ, ಗಣ್ಯರಿಗೆ, ಶಾಸಕರಿಗೆ, ಸಂಸದರಿಗೆ ಹಾಗೂ ಸನ್ಮಾನಿತರಿಗೆ, ಪತ್ರಕರ್ತರಿಗೆ ಸೂಕ್ತ ಆಸನಗಳ ವ್ಯವಸ್ಥೆ ಕಲ್ಪಿಸಬೇಕು. ಧ್ವನಿವರ್ಧಕ ಹಾಗೂ ಜನರೇಟರ್ ವ್ಯವಸ್ಥೆ ಕೈಗೊಳ್ಳಲು ಸೂಚಿಸಿದರು. ಕುಡಿಯುವ ನೀರಿನ ವ್ಯವಸ್ಥೆ, ಶಾಲಾ ಮಕ್ಕಳಿಗೆ ಸಿಹಿ ವಿತರಣೆಗೆ ಕ್ರಮವಹಿಸಬೇಕು. ಜಿಲ್ಲಾಡಳಿತ ಭವನ ಸೇರಿದಂತೆ ತಾಲೂಕ ಆಡಳಿತ ಭವನ, ಜಿಲ್ಲಾ ಕ್ರೀಡಾಂಗಣಕ್ಕೂ ವಿದ್ಯುತ್ ಅಲಂಕಾರ ಮಾಡುವಂತೆ ಸೂಚಿಸಲಾಯಿತು.

ಸಭೆಯಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಸಿದ್ದಾರ್ಥ ಗೋಯಲ್, ಅಪರ ಜಿಲ್ಲಾಧಿಕಾರಿ ಅಶೋಕ ತೇಲಿ, ಆಹಾರ ಇಲಾಖೆಯ ಜಂಟಿ ನಿರ್ದೇಶಕ ಶ್ರೀಶೈಲ ಕಂಕಣವಾಡಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಮಂಜುನಾಥ ಡಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕ ಕೆ.ಪ್ರಭಾಕರ, ಪಶು ಇಲಾಖೆಯ ಉಪನಿರ್ದೇಶಕ ಎಸ್.ಎಚ್. ಕರಡಿಗುಡ್ಡ, ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕ ಗುರುಪಾದ ಡೂಗನವರ ಸೇರಿದಂತೆ ಇತರರು ಉಪಸ್ಥಿತರಿದ್ದರು.

## ಯುವನಿಧಿ ನೋಂದಣಿ ಅಭಿಯಾನ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜು.17–ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ ವತಿಯಿಂದ ಜುಲೈ 7 ರಿಂದ ಅಗಸ್ಟ 7ರವರಿಗೆ ಜಿಲ್ಲೆಯ ಪದವಿ ಕಾಲೇಜು ಹಾಗೂ ತಾಂತ್ರಿಕ ಶಿಕ್ಷಣ ಇಲಾಖಾ ವ್ಯಾಪ್ತಿಯಲ್ಲಿನ ಮಹಾವಿದ್ಯಾಲಯಗಳಲ್ಲಿ ಯುವನಿಧಿ ವಿಶೇಷ ನೋಂದಣಿ ಅಭಿಯಾನವನ್ನು ಹಮ್ಮಿಕೊಳ್ಳಲಾಗಿದೆ.

2025ರ ಸಾಲಿನಲ್ಲಿ ತೇರ್ಗಡೆ ಹೊಂದಿರುವ ಪದವಿ, ತಾಂತ್ರಿಕ ಪದವಿ, ಸ್ನಾತಕೋತ್ತರ ಪದವಿ ಮತ್ತು ಡಿಪ್ಲೋಮಾ ಪದವೀಧರರಿಗೆ ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ ರೂಮ್ ನಂ. 135 ಜಿಲ್ಲಾಡಳಿತ ಭವನ ನವನಗರ ಇಲ್ಲಿ ಅರ್ಹ ಅಭ್ಯರ್ಥಿಗಳಿಗೆ ಉಚಿತವಾಗಿ ಯುವನಿಧಿ ಅರ್ಜಿಗಳನ್ನು ಹಾಕಲಾಗುವುದು.

ಹಾಗಾಗಿ ಅಸಕ್ತ ಅಭ್ಯರ್ಥಿಗಳು ತಮ್ಮ ಪದವಿ, ಸ್ನಾತಕೋತ್ತರ ಪದವಿ ಮತ್ತು ಡಿಪ್ಲೋಮಾ ಪದವಿಗೆ ಸಂಬಂಧಿಸಿದ ದಾಖಾಲಾತಿಗಳು ಮತ್ತು ಆಧಾರ ಕಾರ್ಡನೊಂದಿಗೆ ಜಿಲ್ಲಾ ಉದ್ಯೋಗ ವಿನಿಮಯ ಕಚೇರಿಗೆ ಭೇಟಿ ನೀಡಬಹುದು. ಹೆಚ್ಚಿನ ಮಾಹಿತಿಗಾಗಿ ಕಛೇರಿ ದೂರವಾಣಿ ಸಂಖ್ಯೆ 08354–235337 ಹಾಗೂ 7676692029 ಮತ್ತು 7019606100ಗೆ ಸಂಪರ್ಕಿಸಬಹುದು ಎಂದು ಉದ್ಯೋಗಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ತೋಟದ ಶಾಲೆಗೆ ತಾಪಂ ಇಓ ಸಂಪಗಾವಿ ಭೇಟಿ

## ಪಠ್ಯ ವಿಷಯಗಳ ಕುರಿತು ಮಕ್ಕಳೊಂದಿಗೆ ಸಂವಾದ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜು.17–ನಗರಕ್ಕೆ ಸಮೀಪದ ಸಂಗಮಕ್ರಾಸ್ ಬಳಿಯಿರುವ ಹೊನ್ನಾಕಟ್ಟಿ ಸರ್ಕಾರಿ ಕಿರಿಯ ಪ್ರಾಥಮಿಕ (ತೋಟದ ಶಾಲೆ) ಶಾಲೆಗೆ ಗುರುವಾರ ಬಾಗಲಕೋಟೆ ತಾಲೂಕಾ ಪಂಚಾಯತಿ ಕಾರ್ಯನಿರ್ವಾಹಕ ಅಧಿಕಾರಿ ಸುಭಾಷ ಸಂಪಗಾವಿ ಭೇಟಿ ನೀಡಿ ಶಾಲೆಯಲ್ಲಿನ ಮೂಲಭೂತ ಸೌಲಭ್ಯಗಳ ಪರಿಶೀಲನೆ ನಡೆಸಿದರು.

ಶಾಲೆಯ ಪರಿಸರ, ಮಕ್ಕಳ ಶೈಕ್ಷಣಿಕ ಪ್ರಗತಿಯ ಕುರಿತು ಮುಖ್ಯಗುರುಮಾತೆ ಲಕ್ಷ್ಮೀ ಲಮಾಣಿ ಹಾಗೂ ಎಸ್.ಡಿಎಂಸಿ ಅಧ್ಯಕ್ಷ ಸುಭಾಷ ನರಗುಂದ ಅವರ ಜೊತೆ ಚರ್ಚಿಸಿ ಶೌಚಾಲಯ ದುರಸ್ಥಿ, ಶಾಲಾ ಕಂಪೌಂಡ ನಿರ್ಮಾಣ ವ್ಯವಸ್ಥೆ ಹಾಗೂ ಮಕ್ಕಳ ಕಲಿಕೆಗೆ ಅಗತ್ಯವಿರುವ ಉಪಕರಣಗಳನ್ನು ನೀಡುವುದಕ್ಕೆ ಕ್ರಮವಹಿಸುವುದಾಗಿ ಭರವಸೆ ನೀಡಿದರು.

ನಂತರ ಸುಭಾಷ ಸಂಪಗಾವಿ, ಪಠ್ಯದ ವಿಷಯಗಳ ಕುರಿತು ಮಕ್ಕಳೊಂದಿಗೆ ಸಂವಾದ ನಡೆಸಿ ಹಲವಾರು ಪ್ರಶ್ನೆಗಳನ್ನು ಕೇಳಿ ಅವರು ನೀಡಿದ ಉತ್ತರಕ್ಕೆ ಪ್ರಶಂಸೆ ವ್ಯಕ್ತಪಡಿಸಿದರು. ಈರಣ್ಣ ಮಾಸ್ತಿ, ಗುರುಮಾತೆ ಎ.ಎಸ್.ಭೂತನಾಳ ಇದ್ದರು.

## ನಿವೃತ್ತರ ಆರ್ಥಿಕ ಬಿಲ್ ವಾಪಸ್ಸು ಪಡೆಯಲು ಆಗ್ರಹ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜು.17–ಸಂಸತ್ತಿನಲ್ಲಿ ಈಚೆಗೆ ಕೇಂದ್ರ ಸರಕಾರದ ಆರ್ಥಿಕ ಮಂತ್ರಿ ನಿರ್ಮಲಾ ಸೀತಾರಾಮನ್ ಅವರು ಮಂಡಿಸಿರುವ ನಿವೃತ್ತರ ಆರ್ಥಿಕ ಬಿಲ್ಲನ್ನು ಮರಳಿ ಪಡೆಯಲು ಆಗ್ರಹಿಸಿ ಗುರವಾರ ಜಿಲ್ಲಾ ನಿವೃತ್ತ ನೌಕರರ ಸಂಘದ ವತಿಯಿಂದ ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಲಾಯಿತು.

ಈ ಕುರಿತು ಅಖಿಲ ಭಾರತ ನಿವೃತ್ತರ ಫೆಡರೇಷನ್ ನಿರ್ದೇಶನದ ಮೇರೆಗೆ ಜಿಲ್ಲಾಧಿಕಾರಿಗಳಿಗೂ ಹಾಗೂ ತಾಲೂಕು ಸಂಘದಿಂದ ತಹಶೀಲದಾರ ಮುಖಾಂತರ ಪ್ರಧಾನಮಂತ್ರಿಗಳಿಗೆ ಮನವಿ ಸಲ್ಲಿಸಲಾಗಿದೆ ಎಂದು ಜಿಲ್ಲಾ ನಿವೃತ್ತ ನೌಕರರ ಸಂಘದ ಅಧ್ಯಕ್ಷ ವ್ಹಿ.ಬಿ.ಗೋವಿಂದಪ್ಪನವರ ತಿಳಿಸಿದ್ದಾರೆ.

ಸರಕಾರ ತಂದಿರುವ ಬಿಲ್ ಜಾರಿಯಾದರೆ ನಿವೃತ್ತ ನೌಕರರಿಗೆ ಡಿ.ಎ. ಹಾಗೂ ಎಂಟನೆಯ ವೇತನ ಆಯೋಗದಿಂದ ಬಹಳಷ್ಟು ಹಾನಿಯಾಗುತ್ತದೆ ಎಂದು ಮನವಿಯಲ್ಲಿ ಉಲ್ಲೇಖಿಸಲಾಗಿದೆ.

ಈ ಸಂದರ್ಭದಲ್ಲಿ ಜಿಲ್ಲಾ ಸಂಘದ ಗೌರವಾಧ್ಯಕ್ಷ ಎಸ್.ಆರ್.ಮನಹಳ್ಳಿ, ಪ್ರಧಾನ ಕಾರ್ಯದರ್ಶಿ ವಿಜಯರಾವ ಕುಲಕರ್ಣಿ, ಜಿ.ಎಸ್.ಬಡಿಗೇರ, ಎಚ್.ವಿ.ಮಾಗನೂರ, ಡಾ.ಪ್ರಕಾಶ ಖಾಡೆ, ಬಿ.ಜಿ.ಚಿಪ್ಪಲಕಟ್ಟಿ, ಚೆನ್ನಪ್ಪಗೋಳ, ಮೇಟಿ, ದಂಡಣ್ಣವರ, ಬಿ.ವಿ.ಕುಲಕರ್ಣಿ, ನಾಡಗೌಡ, ಬಂದಕೇರಿ, ವಿಜಯಲಕ್ಷ್ಮೀ ಮುರನಾಳ, ಶ್ರೀಮತಿ ಗೊಂಗಡಶೆಟ್ಟಿ, ಶ್ರೀಮತಿ ಮಹೇಂದ್ರಕರ ಸೇರಿದಂತೆ ಹಲವಾರು ನಿವೃತ್ತ ನೌಕರರು ಉಪಸ್ಥಿತರಿದ್ದರು.

ನಂತರ ಲೋಕಸಭಾ ಸದಸ್ಯರಾದ ಪಿ.ಸಿ.ಗದ್ದಿಗೌಡರ ಅವರ ಕಚೇರಿಗೆ ತೆರಳಿ ಮನವಿ ಸಲ್ಲಿಸಿ ಹಣಕಾಸು ಸಚಿವರ ಗಮನಕ್ಕೆ ತರುವಂತೆ ನಿವೃತ್ತ ನೌಕರರು ಮನವಿ ಮಾಡಿದರು.

## ವ್ಯಕ್ತಿ ಕಾಣೆ: ಪತ್ತೆಗೆ ಸಹಕರಿಸಲು ಮನವಿ

ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ತಾಲೂಕಿನ ಇಂದರಗಿ ಗ್ರಾಮದ ನಿವಾಸಿ ಹುಸೇನಪ್ಪ ತಂದೆ ಯಮನಪ್ಪ ಈಳಿಗೇರ ಎಂಬ 82 ವರ್ಷದ ವ್ಯಕ್ತಿಯು 2025 ರ ಮಾರ್ಚ್ 26 ರಿಂದ ಕಾಣೆಯಾಗಿದ್ದು, ಈವರೆಗೂ ಪತ್ತೆಯಾಗಿರುವುದಿಲ್ಲ. ಈ ಬಗ್ಗೆ ಕೊಪ್ಪಳ ನಗರ ಪೊಲೀಸ್ ಠಾಣೆಯಲ್ಲಿ ಗುನ್ನೆ ನಂ: 75/2025 ಕಲಂ: ಮನುಷ್ಯ ಕಾಣೆ ನೇದ್ದರ ಅಡಿಯಲ್ಲಿ ಪ್ರಕರಣ ದಾಖಲಾಗಿದೆ.



ಕಾಣೆಯಾದ ವ್ಯಕ್ತಿಯ ಚಹರೆ: ವ್ಯಕ್ತಿಯು 5.5 ಅಡಿ ಎತ್ತರವಿದ್ದು, ಸಾಧಾರಣ ಮೈಕಟ್ಟು, ಸಾದಗಪ್ಪು ಮೈಬಣ್ಣ ಹಾಗೂ ತಲೆಯಲ್ಲಿ ಬಿಳಿಯ ಕೂದಲುಗಳಿವೆ. ಏರು ಹಣೆ, ಕೋಲು ಮುಖ ಹೊಂದಿದ್ದಾರೆ. ಕನ್ನಡ ಮತ್ತು ಅಲ್ಪಸ್ವಲ್ಪ ಹಿಂದಿ ಭಾಷೆ ಮಾತನಾಡುತ್ತಾರೆ. ಎದೆ–ಯ ಮೇಲೆ ಬಿಳಿಯ ತನ್ನು ಇದೆ (ಬಲಗಡೆ ಕೈಗೆ ಬೆಳ್ಳಿಯ ಕಡಗ ಧರಿಸಿರುತ್ತಾರೆ). ಕಾಣೆಯಾದಾಗ ಬಿಳಿ ಬಣ್ಣದ ಅಂಗಿ ಮತ್ತು ನೀಲಿ ಬಣ್ಣದ ಪ್ಯಾಂಟ್ ಧರಿಸಿದ್ದರು.

ಮೇಲ್ಕಂಡ ಚಹರೆಯ ವ್ಯಕ್ತಿಯ ಕುರಿತು ಯಾರಿಗಾದರೂ ಮಾಹಿತಿ ಇದ್ದಲ್ಲಿ ಅಥವಾ ದೊರೆತಲ್ಲಿ ಕೊಪ್ಪಳ ನಗರ ಪೊಲೀಸ್ ಠಾಣೆ ದೂರವಾಣಿ ಸಂಖ್ಯೆ: 08539–220333, 9480803749, ಕೊಪ್ಪಳ ಕಂಟ್ರೋಲ್ ರೂಮ್ ನಂ.08539–230100 ಮತ್ತು 230222 ಗೆ ಸಂಪರ್ಕಿಸಿ ಮಾಹಿತಿ ನೀಡುವಂತೆ ಕೊಪ್ಪಳ ನಗರ ಪೊಲೀಸ್ ಠಾಣಾಧಿಕಾರಿಗಳು ಪ್ರಕಟಣೆ ಕೋರಿದೆ.

## ವಿವಿಧೆಡೆ ಕೊಪ್ಪಳ ಜಿಲ್ಲಾಧಿಕಾರಿ ಸುರೇಶ ಬಿ. ಇಟ್ನಾಳ ಭೇಟಿ: ರೈತರೊಂದಿಗೆ ಚರ್ಚೆ

ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಕೊಪ್ಪಳ ಜಿಲ್ಲಾಧಿಕಾರಿ ಸುರೇಶ ಬಿ. ಇಟ್ನಾಳ ಅವರು ಗುರುವಾರ ಕೊಪ್ಪಳ ಜಿಲ್ಲೆಯ ವಿವಿಧ ಗ್ರಾಮಗಳ ಹಣ್ಣು ಬೆಳೆಗಳ ಸಂಸ್ಕರಣ ಘಟಕಗಳು, ಕೃಷಿ ಹೊಂಡ ಮತ್ತು ದ್ರಾಕ್ಷಿ ಹಾಗೂ ದಾಳಿಂಬೆ ಬೆಳೆಗಳ ವೀಕ್ಷಣೆ ಮಾಡಿ ರೈತರೊಂದಿಗೆ ಚರ್ಚಿಸಿದರು.



ಕೊಪ್ಪಳ ತಾಲ್ಲೂಕಿನ ಮೆತಗಲ್ ಗ್ರಾಮದಲ್ಲಿ ನಬಾರ್ಡ ವತಿಯಿಂದ ನಿರ್ಮಿಸುತ್ತಿರುವ ಹಣ್ಣು ಬೆಳೆಗಳ ಸಂಸ್ಕರಣ ಘಟಕಕ್ಕೆ ಜಿಲ್ಲಾಧಿಕಾರಿಗಳು ಭೇಟಿ ನೀಡಿ, ಪರಿಶೀಲನೆ ನಡೆಸಿದರು. ನಂತರ ಯಲಬುರ್ಗಾ ತಾಲ್ಲೂಕಿನ ಮಾಟಲದಿನ್ನಿ ಗ್ರಾಮದ ರೈತರ ಕೃಷಿ ಭಾಗ್ಯ ಯೋಜನೆ, ಉದ್ಯೋಗ ಖಾತ್ರಿ ಯೋಜನೆ ಮತ್ತು ರಾಷ್ಟ್ರೀಯ ಕೃಷಿ ವಿಕಾಸ ಯೋಜನೆಯ ಕೃಷಿ ಹೊಂಡ ಮತ್ತು ದ್ರಾಕ್ಷಿ ಹಾಗೂ ದಾಳಿಂಬೆ ಬೆಳೆಗಳ ವೀಕ್ಷಣೆ ಮಾಡಿದರು. ಅಂತರಾಷ್ಟ್ರೀಯ ಸಾವಯವ ಕೃಷಿಕ ಬಸಯ್ಯ ಹಿರೇಮಠ ಅವರ ನುಗ್ಗೆಕಾಯಿ ಸಂಸ್ಕರಣ ಘಟಕಕ್ಕೂ ಭೇಟಿ ನೀಡಿದರು. ನಂತರ ಕುಷ್ಟಗಿ ತಾಲ್ಲೂಕಿನ ಬ್ಯಾಲಿಹಾಳ ಗ್ರಾಮದ ನೈಸರ್ಗಿಕ ಕೃಷಿಕ ಡಾ.ದೇವಿಂದ್ರ ಬಳ್ಳುಟಗಿ ಅವರ ತೋಟಕ್ಕೆ ಭೇಟಿ ನೀಡಿ, ಕೃಷಿ ಸಂಬಂಧಿಸಿದ ವಿಷಯಗಳ ಕುರಿತು ರೈತರೊಂದಿಗೆ ಚರ್ಚೆ ನಡೆಸಿದರು.

ಈ ಸಂದರ್ಭದಲ್ಲಿ ಕೃಷಿ ಇಲಾಖೆಯ ಜಂಟಿ ನಿರ್ದೇಶಕ ರುದ್ರೇಶಪ್ಪ ಟಿ.ಎಸ್., ಉಪನಿರ್ದೇಶಕ ಸಿದ್ದೇಶ್ವರ ಎಲ್., ಮೀನುಗಾರಿಕೆ ಇಲಾಖೆಯ ಉಪನಿರ್ದೇಶಕ ಡಾ. ಶ್ರೀನಿವಾಸ ಕುಲಕರ್ಣಿ, ಕೊಪ್ಪಳ ಕೃಷಿ ತಂತ್ರಜ್ಞರ ಸಂಸ್ಥೆಯ ಉಪಾಧ್ಯಕ್ಷರಾದ ವೀರಣ್ಣ ಕಮತರ, ತೋಟಗಾರಿಕೆ ಇಲಾಖೆಯ ಉಪನಿರ್ದೇಶಕ ಕೃಷ್ಣ ಉಕ್ಕುಂದ, ರಾಯಚೂರು ಕೃಷಿ ವಿಶ್ವವಿದ್ಯಾಲಯದ ಡಾ. ರವಿ ಸೇರಿದಂತೆ ಕೃಷಿ ಹಾಗೂ ತೆ–ೋಟಗಾರಿಕೆ ಇಲಾಖೆಯ ಇತರೆ ಅಧಿಕಾರಿ ಮತ್ತು ಸಿಬ್ಬಂದಿಗಳು ಉಪಸ್ಥಿತರಿದ್ದರು.

# ಸರ್ಕಾರಿ ಪ್ರೌಢಶಾಲೆ ಅಲಿಯಂಬರ್ ಯಲ್ಲಿ ಶಾಲಾ ಸಂಸತ್ತು ಚುನಾವಣೆ





ಮಲ್ಲಮ್ಮ ನುಡಿ ವಾರ್ತೆ

ದಿನಾಂಕ 16.07.2025 ರಂದು ಸರಕಾರಿ ಪ್ರೌಢಶಾಲೆ ಅಲೆಯಂಬರ ತಾ/ಜಿ /ಬೀದರ ನಲ್ಲಿ ಶಾಲಾ ಸಂಸತ್ತು ಚುನಾವಣೆಯನ್ನು ನಡೆಸಲಾಯಿತು. ವಿದ್ಯಾರ್ಥಿ ದಿಸೆ ಯಲ್ಲಿಯೇ ಸಾರ್ವತ್ರಿಕ ಚುನಾವಣೆಯ ಬಗ್ಗೆ ಜಾಗೃತಿ ಮೂಡಿಸುವ ಉದ್ದೇಶದಿಂದ ಶಾಲೆಯಲ್ಲಿ ಸಾರ್ವತ್ರಿಕ ಚುನಾವಣೆ ನಡೆಯುವ ಮಾದರಿಯಲ್ಲಿ ಶಾಲಾ ಸಂಸತ್ತು ಚುನಾವಣೆ ನಡೆಸಲಾಯಿತು. ಸಂಸದೀಯ ಮಾದರಿಯ ಚಟುವಟಿಕೆಯ ಅರಿವು ಮೂಡಿಸುವುದು ಕೂಡ ಇದರ ಉದ್ದೇಶವಾಗಿದೆ. ಶಾಲಾ ಆವರಣದಲ್ಲಿ ವಿದ್ಯಾರ್ಥಿಗಳು ತಮ್ಮ ಆಧಾರ ಕಾರ್ಡನ್ನು ಗುರುತಿನ ಪತ್ರವಾಗಿ ತೋರಿಸಿ ಎಡಗೈ ತೋರು ಬೆರಳಿಗೆ ಶಾಯಿಯನ್ನು ಹಾಕಿಸಿಕೊಂಡು ಗೌಪ್ಯ ಮತದಾನದಲ್ಲಿ ಭಾಗಿಯಾಗಿದ್ದರು. ಈ ಮತದಾನವು ಇವಿಎಂ ಮತ ಯಂತ್ರದ ಮಾದರಿಯನ್ನೇ ಇಟ್ಟುಕೊಂಡು ಮೊಬೈಲ್ ಫೋನಿನ ಮೂಲಕ ಮತವನ್ನು ವಿದ್ಯಾರ್ಥಿಗಳಿಗೆ ಹಾಕಿಸಲಾಯಿತು. ಇದರಲ್ಲಿ ಎಲ್ಲಾ ವಿದ್ಯಾರ್ಥಿಗಳು ಉತ್ಸಾಹದಿಂದ ಭಾಗಿಯಾಗಿದ್ದೆ ವಿಶೇಷತೆ. ಪ್ರೌಢಶಾಲೆಯ 8 9 10ನೇ ತರಗತಿಯ ಮಕ್ಕಳನ್ನು ಈ ಪ್ರಕ್ರಿಯೆಯಲ್ಲಿ ಪಾಲ್ಗೊಳ್ಳುವಂತೆ ಪ್ರೇರೇಪಿಸಲಾಯಿತು. ಲೋಕಸಭೆ, ವಿಧಾನಸಭೆ, ಅಥವಾ ಸ್ಥಳೀಯ ಚುನಾವಣೆಗಳ ಮಾದರಿಯಲ್ಲಿಯೇ ಶಾಲಾ ಹಂತದ ಚುನಾವಣೆ ಮೂಲಕ ಚುನಾಯಿತ ಸದಸ್ಯರನ್ನು ಆಯ್ಕೆ ಮಾಡಲಾಯಿತು. ಹಾಗೂ ಆಯ್ಕೆಯಾದ ಸದಸ್ಯರಿಗೆ ಅವರ ಸಾಮರ್ಥ್ಯಕ್ಕೆ ತಕ್ಕಂತೆ ಖಾತೆಗಳನ್ನು ಕೂಡ ಹಂಚಿಕೆ ಮಾಡಲಾಯಿತು. ಆಯ್ಕೆಯಾದ ಸದಸ್ಯರ ಹುದ್ದೆಗಳ ಘೋಷಣೆಯನ್ನು ಶ್ರೀ ಶಿವಕಾಂತ ಕನ್ನಡ ಸಹ ಶಿಕ್ಷಕರು ನೆರವೇರಿಸಿದರು. ಈ ಎಲ್ಲಾ ಸದಸ್ಯರಿಗೆ ಪ್ರತಿಜ್ಞಾ ವಿಧಿಯನ್ನು ಶಾಲಾ ಸಂಸತ್ತು ಸದಸ್ಯರಲ್ಲಿ ಆಯ್ಕೆಯಾದ ಸಭಾಪತಿ ಕು, ಅಮಿತ ತಂದೆ ಕಲ್ಲಪ್ಪ ಅವರು ಬೋಧಿಸಿದರು. ಶಾಲೆಯಲ್ಲಿ ಕಲಿಕೆಯ ಜೊತೆಗೆ ಮಕ್ಕಳ ಶಾಲಾ ಸಂಸತ್ತು ಕೂಡ ಹೆಚ್ಚು ಮಹತ್ವ ಪಡೆದಿದೆ. ಶಾಲೆಯ ಪ್ರತಿಯೊಂದು ಚಟುವಟಿಕೆಯಲ್ಲಿ ಮಕ್ಕಳ ಭಾಗವಹಿಸುವಿಕೆ ಮತ್ತು ಅಭಿವ್ಯಕ್ತ ಪಡಿಸುವಿಕೆ ತುಂಬಾ ಮಹತ್ವದ್ದಾಗಿದೆ. ಮಕ್ಕಳಲ್ಲಿ ಪ್ರಜಾಸತ್ತಾತ್ಮಕ ಪ್ರಜ್ಞೆಯನ್ನು ಬೆಳೆಸಲು ಇಂತಹ ಚಟುವಟಿಕೆಗಳು ಅಗತ್ಯವಾಗಿದ್ದು ಪ್ರಜಾ ಪ್ರಭುತ್ವದ ಮೂಲಾಂಶಗಳನ್ನು ಎತ್ತಿ ಹಿಡಿಯಲು ಶಾಲಾ ಸಂಸತ್ತು ಚುನಾವಣೆ ಒಂದು ಮಾದರಿಯಾಗಿದೆ. ಈ ಶಾಲಾ ಸಂಸತ್ತು ಚುನಾವಣೆಯಲ್ಲಿ ಶಾಲೆಯ ಸಹ ಶಿಕ್ಷಕರುಗಳೇ ಅಧಿಕಾರಿಗಳಾಗಿದ್ದರು. ಚುನಾವಣಾ ಆಯುಕ್ತರು ಹಾಗೂ ಚುನಾವಣಾ ಅಧಿಕಾರಿಗಳಾಗಿ ಶ್ರೀ ಇಸ್ಮಾಯಿಲ ಮುಖ್ಯೋಪಾಧ್ಯಾಯರುಗಳು ಪಿ ಆರ್ ಓ ಶ್ರೀಮತಿ ರಾಮಬಾಯಿ ಇಂಗ್ಲಿಷ್ ಸಹ ಶಿಕ್ಷಕಿಯರು ಎ ಪಿ ಆರ್ ಓ ಶ್ರೀಮತಿ ಸಂಗೀತಾ ಗಣಿತ ಸಹ ಶಿಕ್ಷಕಿಯರು ಪೋಲಿಂಗ್ ಆಫೀಸರ್ ಗಳಾಗಿ ಶ್ರೀ ಶಿವಕಾಂತ ಕನ್ನಡ ಸಹ ಶಿಕ್ಷಕರು ಶ್ರೀ ಶಿವಾನಂದ ವಿಜ್ಞಾನ ಸಹಶಿಕ್ಷಕರು ಶ್ರೀ ಭೀಮಣ್ಣ ಹಿಂದಿ ಸಹ ಶಿಕ್ಷಕರು ವೀಕ್ಷಕರಾಗಿ ಶ್ರೀ ಶಿವಾನಂದ ಮೇತ್ರೆ ದೈಹಿಕ ಶಿಕ್ಷಕರು ಸಂಚಾಲಕರಾಗಿ ಶ್ರೀಮತಿ ಉಷಾಕಿರಣ ಸಮಾಜ ವಿಜ್ಞಾನ ಸಹ ಶಿಕ್ಷಕಿಯರು ಹಾಗೂ ಶ್ರೀಮತಿ ನಾಗಮ್ಮ ಸೇವಕಿಯಾಗಿ ಅದೇ ರೀತಿ ಏಜೆಂಟರುಗಳಾಗಿ 8ನೇ ತರಗತಿಯ ಚಿತ್ರಮ್ಮ 9ನೇ ತರಗತಿಯ ಅಂಬಿಕಾ 10 ನೇ ತರಗತಿಯ ಶಿವಶಂಕರ ವಿದ್ಯಾರ್ಥಿಗಳು ಭಾಗಿಯಾಗಿ ಈ ಶಾಲಾ ಸಂಸತ್ತು ಚುನಾವಣೆಯನ್ನು ಯಶಸ್ವಿಗೊಳಿಸಿದ್ದರು.

# ಜಾನುವಾರು ವ್ಯಾಪಾರಿಗಳ ಮೇಲೆ ದೌರ್ಜನ್ಯ: ಸಂಸತ್‌ನಲ್ಲಿ ಧ್ವನಿ ಎತ್ತಲು ಆಗ್ರಹ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಜು. 17 : ದೇಶದ ಹಲವು ರಾಜ್ಯಗಳಲ್ಲಿ ಜಾನುವಾರು ವ್ಯಾಪಾರಿಗಳ ಮೇಲೆ ನಡೆಯುತ್ತಿರುವ ದೌರ್ಜನ್ಯದ ಕುರಿತು ಸಂಸತ್ತಿನಲ್ಲಿ ಧ್ವನಿ ಎತ್ತಬೇಕು ಎಂದು ಖುರೇಶ್ ಕಾನ್ಫರೆನ್ಸ್ ಸಂಘಟನೆಯ ರಾಜ್ಯ ಅಧ್ಯಕ್ಷ ನಬಿ ಖುರೇಶಿ ಅವರು ಸಂಸದ ಅಸದುದ್ದೀನ್ ಓವೈಸಿ ಅವರನ್ನು ಒತ್ತಾಯಿಸಿದರು.

ಬೀದರ್‌ನಲ್ಲಿ ಅಸದುದ್ದೀನ್ ಓವೈಸಿ ಅವರಿಗೆ ಈ ಕುರಿತು ಮನವಿ ಪತ್ರ ಸಲ್ಲಿಸಿದರು.

ಹೆಚ್ಚಿನ ರಾಜ್ಯಗಳಲ್ಲಿ ಜಾನುವಾರು ಸಾಗಣೆ ವೇಳೆ ಜಾನುವಾರು ವ್ಯಾಪಾರಿಗಳ ಮೇಲೆ ದೌರ್ಜನ್ಯ, ದೈಹಿಕ ಹಿಂಸೆ, ಗುಂಪು ಹಲ್ಲೆಯಂತಹ ಘಟನೆಗಳು ಜರುಗುತ್ತಿವೆ ಎಂದು ಗಮನ ಸೆಳೆದರು. ಕೆಲ ಸಮಾಜ ವಿರೋಧಿ ಶಕ್ತಿಗಳು ರಸ್ತೆ ಹಾಗೂ ಹೆದ್ದಾರಿಗಳಲ್ಲಿ ಮುಗ್ಧ ಜಾನುವಾರು ವ್ಯಾಪಾರಿಗಳ ಜಾನುವಾರುಗಳನ್ನು ನಿರ್ಭಯವಾಗಿ ಲೂಟಿ ಮಾಡುತ್ತಿದ್ದಾರೆ. ಆದರೂ ಪೊಲೀಸರು ಅಪರಾಧಿಗಳ ವಿರುದ್ಧ ಕ್ರಮ ಕೈಗೊಳ್ಳುತ್ತಿಲ್ಲ ಎಂದು ಆರೋಪಿಸಿದರು. ಕೇಂದ್ರ ಸರ್ಕಾರದ ಮಟ್ಟದಲ್ಲಿ ರಾಷ್ಟ್ರೀಯ ಮಾಂಸ ಮಂಡಳಿ, ಎಲ್ಲ ರಾಜ್ಯಗಳಲ್ಲಿ ಮಾಂಸ ಮಂಡಳಿ ರಚನೆ, ದೇಶದಲ್ಲಿ ಕಸಾಯಿಖಾನೆಗಳು, ಜಾನುವಾರು ಮಾರುಕಟ್ಟೆಗಳ ಆಧುನೀಕರಣ ಹಾಗೂ ಮಾಂಸ ವ್ಯಾಪಾರಕ್ಕೆ ಸಂಬಂಧಿಸಿದ ಸಮಸ್ಯೆಗಳ ಪರಿಹಾರಕ್ಕೆ ಕೇಂದ್ರ ಹಾಗೂ ರಾಜ್ಯ ಸರ್ಕಾರಗಳ ಮೇಲೆ ಒತ್ತಡ ತರಬೇಕು ಎಂದು ಮನವಿ ಮಾಡಿದರು. ಇದಕ್ಕೆ ಸ್ಪಂದಿಸಿದ ಅಸದುದ್ದೀನ್ ಓವೈಸಿ ಅವರು ಜಾನುವಾರು ವ್ಯಾಪಾರಿಗಳ ಸಮಸ್ಯೆ ಕುರಿತು ಧ್ವನಿ ಎತ್ತಲಾಗುವುದು ಎಂದು ಭರವಸೆ ನೀಡಿದರು.

# ಮುಖ್ಯಮಂತ್ರಿಗಳ ಮಾಧ್ಯಮ ಸಂಜೀವಿನಿ ಯೋಜನೆ: ಕಠಿಣ ಷರತ್ತುಗಳನ್ನು ಸಡಿಲಿಸಲು ಪ್ರಭಾಕರ್ ಗೆ ಕೆಯುಡಬ್ಲ್ಯೂಜೆ ಮನವಿ

ಬೆಂಗಳೂರು:ಜು.17:ಮುಖ್ಯಮಂತ್ರಿಗಳ ಮಾಧ್ಯಮ ಸಂಜೀವಿನಿ ಯೋಜನೆಯಲ್ಲಿನ ಕಠಿಣ ಷರತ್ತಗಳನ್ನು ಸಡಿಲಿಸಿ, ಸರಳೀಕರಣ ಮಾಡಬೇಕು ಎಂದು ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘ (ಕೆಯುಡಬ್ಲೂಜೆ) ಮುಖ್ಯಮಂತ್ರಿಗಳ ಮಾಧ್ಯಮ ಸಲಹೆಗಾರರಾದ ಕೆ.ವಿ.ಪ್ರಭಾಕರ್ ಅವರಲ್ಲಿ ಮನವಿ ಮಾಡಿದೆ.

ಕೆಯುಡಬ್ಲ್ಯೂಜೆ ರಾಜ್ಯಾಧ್ಯಕ್ಷ ಶಿವಾನಂದ ತಗಡೂರು ನೇತೃತ್ವದ ವಿಧಾನಸೌಧದಲ್ಲಿ ಭೇಟಿ ಮಾಡಿದ ನಿಯೋಗ, ಮಾಧ್ಯಮ ಮಾನ್ಯತೆ ಪಡೆದ ಪತ್ರಕರ್ತರು ಮತ್ತು ಅವರ ಕುಟುಂಬಕ್ಕೆ ಈ ಯೋಜನೆಯನ್ನು ಸೀಮಿತ ಮಾಡಿರುವುದರಿಂದ ಹೆಚ್ಚು ಪತ್ರಕರ್ತರು ಯೋಜನೆಯಿಂದ ವಂಚಿತರಾಗುತ್ತಾರೆ ಎನ್ನುವ ವಿಷಯವನ್ನು ಅವರ ಗಮನಕ್ಕೆ ತಂದಿತು.

ವಾರ್ತಾ ಇಲಾಖೆಯಲ್ಲಿ ಮಾಧ್ಯಮ ಪಟ್ಟಿಯಲ್ಲಿರುವ ಪತ್ರಿಕೆಗಳು ಮತ್ತು ಸುದ್ದಿಮಾಧ್ಯಮಗಳಲ್ಲಿ ಕೆಲಸ ಮಾಡುವ ಎಲ್ಲಾ ಪತ್ರಕರ್ತರಿಗೂ ಯೋಜನೆಯನ್ನು ವಿಸ್ತಾರ ಮಾಡಬೇಕು ಎನ್ನುವ ಕೆಯುಡಬ್ಲೂಣಟಿಜಜಜಿಟಿಜಜಜೆ ಮನವಿಗೆ ಕೆ.ವಿ.ಪ್ರಭಾಕರ್ ಅವರು ಸಕಾರತ್ಮಕವಾಗಿ ಸ್ಪಂದಿಸಿದ್ದು, ಪರಿಶೀಲಿಸುವ ಭರವಸೆ ನೀಡಿದ್ದಾ- ರೆ. ಮುಖ್ಯಮಂತ್ರಿಗಳ ಮಾಧ್ಯಮ ಸಂಜೀವಿನಿ ಯೋಜನೆಯನ್ನು ಪತ್ರಿಕಾ ದಿನಾಚರಣೆ ಸಂದರ್ಭದಲ್ಲಿಯೇ ಜಾರಿಗೆ ನೀಡಿರುವುದು ಸ್ವಾಗತಾರ್ಹವಾಗಿದ್ದು, ಅದಕ್ಕಾಗಿ ಪ್ರಭಾಕರ್ ಅವರಿಗೆ ನಿಯೋಗ ಅಭಿನಂದನೆಗಳನ್ನು ಸಲ್ಲಿಸಿತು. ತುಮಕೂರಿನಲ್ಲಿ ನಡೆದ 39ನೇ ರಾಜ್ಯ ಪತ್ರಕರ್ತರ ಸಮ್ಮೇಳನದಲ್ಲಿ ಪತ್ರಕರ್ತರಿಗೆ ಉಚಿತ ಆರೋಗ್ಯ ಯೋಜನೆಯನ್ನು ಜಾರಿಗೆ ತರಬೇಕು ಎನ್ನುವ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ (ಕೆಯುಡಬ್ಲೂಜೆ) ಹಕ್ಕೊತ್ತಾಯಕ್ಕೆ ಸ್ಪಂಧಿಸಿದ್ದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಅದೇ ವೇದಿಕೆಯಲ್ಲಿ ಯೋಜನೆ ಜಾರಿಗೆ ತರುವುದಾಗಿ ಘೋಷಿಸಿದ್ದು ಅಷ್ಟೇ ಅಲ್ಲ, ಬಜೆಟ್‌ನಲ್ಲಿಯೂ ಪ್ರಕಟಿಸಿ ನುಡಿದಂತೆ ನಡೆದಿದ್ದರು. ಈ ನಿಟ್ಟಿನಲ್ಲಿ ಸಿಎಂ ಮಾಧ್ಯಮ ಸಲಹೆಗಾರ ಕೆ.ವಿ.ಪ್ರಭಾಕರ್ ಅವರ ಪಾತ್ರವೂ ಪ್ರಾಮುಖ್ಯವಾಗಿತ್ತು ಎನ್ನುವುದನ್ನು ಕೆಯುಡಬ್ಲ್ಯೂಜೆ ಮನವಿಯಲ್ಲಿ ಸ್ಮರಿಸಿದೆ.

ನಿಯೋಗದಲ್ಲಿ ಸಂಘದ ರಾಜ್ಯ ಕಾರ್ಯಕಾರಿ ಸಮಿತಿ ಸದಸ್ಯ ಎನ್. ರವಿಕುಮಾರ್, ಜಿ.ಮುಮ್ತಾಜ್ ಅಲೀಂ ಜೊತೆಗಿದ್ದರು.



# ಶಿಕ್ಷಣದ ಗುಣಮಟ್ಟ ಸುಧಾರಿಸಿ:ಸಂಸದ ಸಾಗರ ಖಂಡ್ರೆ



ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಜು.17: ಬಡ ಮಕ್ಕಳು ವಿದ್ಯಾರ್ಜನೆ ಮಾಡುವ ಸರಕಾರಿ ಶಾಲೆಗಳ ಬೆಳವಣಿಗೆಗೆ ಅಗತ್ಯ ಇರುವ ಎಲ್ಲ ಸೌಲಭ್ಯಗಳನ್ನು ಕಲ್ಪಿಸಲಾಗುವುದು ಎಂದು ಸಂಸದ ಸಾಗರ ಖಂಡ್ರೆ ಹೇಳಿದರು. ಪಟ್ಟಣದ ಬಸವ ನಗರ ಬಡಾವಣೆಯ ಶಶಿಕಾಂತ ಎಸ್. ಎಲ್.ಪಾಟೀಲ್ ಸರಕಾರಿ ಹಿರಿಯ ಪ್ರಾಥಮಿಕ ಶಾಲೆಯ ಆವರಣದಲ್ಲಿ ಬುಧವಾರ ಆಯೋಜಿಸಿದ್ದ 27.55 ಲಕ್ಷ ಅನುದಾನದ ನೂತನ ಕೊಠಡಿಗಳ ನಿರ್ಮಾಣಕ್ಕೆ ಶಂಕುಸ್ಥಾಪನೆ ನೆರವೇರಿಸಿ ಅವರು ಮಾತನಾಡಿದರು.

ಮಕ್ಕಳ ಕಲಿಕೆಗೆ ಬೇಕಿರುವ ಉತ್ತಮ ಶಾಲಾ ಕಟ್ಟಡಗಳು, ಕುಡಿಯುವ ನೀರು, ಶೌಚಾಲಯ, ಆಟದ ಮೈದಾನ, ವಿಜ್ಞಾನ ಪ್ರಯೋಗಾಲಯ ಸೇರಿದಂತೆ ಎಲ್ಲ ಸವಲತ್ತುಗಳನ್ನು ಕಲ್ಪಿಸಲಾಗುತ್ತಿದೆ. ಆದರೆ, ಖಾಸಗಿ ಶಾಲೆಗಳಿಗೆ ಹೋಲಿಸಿದರೇ ಸರಕಾರಿ ಶಾಲೆಗಳಲ್ಲಿ ಶಿಕ್ಷಣದ ಮಟ್ಟ ಕುಸಿಯುತ್ತಿದೆ ಎಂದು ಆತಂಕ ವ್ಯಕ್ತಪಡಿಸಿದರು.

ಶಿಕ್ಷಕರಾದವರೂ ಸರಕಾರಿ ಶಾಲೆಗಳ ಬಲವರ್ಧನೆಗೆ ಕಾಳಜಿ ವಹಿಸಬೇಕು. ಮಕ್ಕಳ ದಾಖಲಾತಿ ಹೆಚ್ಚಿಸಲು ಪ್ರಯತ್ನ ಹಾಕಬೇಕು. ಗುಣಮಟ್ಟದ ಶಿಕ್ಷಣ ಕಲ್ಪಿಸುವ ಪ್ರಯತ್ನ ಆದರೆ ಮಾತ್ರ ಸರಕಾರಿ ಶಾಲೆಗಳು ಉಳಿಯುತ್ತವೆ ಎಂದರು. ಮಕ್ಕಳ ಕಲಿಕೆಗೆ ಪೂರಕವಾಗಿ ಹೊಸದಾಗಿ ಕೊಠಡಿಗಳ ನಿರ್ಮಾಣಕ್ಕೆ ಚಾಲನೆ ನೀಡಲಾಗಿದೆ. ನಿಗದಿತ ಅವಧಿಯಲ್ಲಿ ಗುತ್ತಿಗೆದಾರರು ಗುಣಮಟ್ಟದ ಕಾಮಗಾರಿ ಮಾಡಿಕೊಡಬೇಕು ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಲೋಕೋಪಯೋಗಿ ಇಲಾಖೆಯ ಎಇಇ ಅಲ್ತಾಫ್, ಪ್ರಭಾರಿ ಶಿಕ್ಷಣಾಧಿಕಾರಿ ರೋಹಿದಾಸ ರಾಠೋಡ, ಶಿಕ್ಷಣ ಸಂಯೋಜಕ ಮಲ್ಲಿಕಾರ್ಜುನ ಕನ್ನಾಳೆ, ಕಚೇರಿ ವ್ಯವಸ್ಥಾಪಕ ಶಿವಕುಮಾರ ಪುಲಾರಿ, ಪ್ರಥಮ ದರ್ಜೆ ಗುತ್ತಿಗೆದಾರ ರಾಜಕುಮಾರ ಬಿರಾದಾರ್, ಮುಖ್ಯಗುರು ರಾಜಶೇಖರ, ಶಿಕ್ಷಕ ಹಣಮಶೆಟ್ಟಿ ಸೇರಿದಂತೆ ಹಲವರು ಇದ್ದರು.

# ವೃತ್ತಿಪರ ಪತ್ರಕರ್ತರಿಗೆ ವಿಪುಲ ಅವಕಾಶ:ದೇವಯ್ಯ ಗುತ್ತೇದಾರ



ಕಲಬುರಗಿ,ಜು.17: ಮಾಧ್ಯಮ ಕ್ಷೇತ್ರದಲ್ಲಿ ವೃತ್ತಿಪರ ಪತ್ರಕರ್ತರಿಗೆ ಇಂದಿನ ದಿನಮಾನದಲ್ಲಿ ವಿಪುಲ ಅವಕಾಶವಿದ್ದು, ಪತ್ರಿಕೋದ್ಯಮದ ವಿದ್ಯಾರ್ಥಿಗಳಿಗೆ ಮುಂದೇನೆಂಬ ಚಿಂತೆಯ ಭಯ ಬೇಡ ಎಂದು ವಿಜಯ ಕರ್ನಾಟಕ ದಿನಪತ್ರಿಕೆಯ ಕಲಬುರಗಿ ಅವೃತ್ತಿಯ ಸ್ಥಾನಿಕ ಸಂಪಾದಕ ದೇವಯ್ಯ ಗುತ್ತೇದಾರ್ ಹೇಳಿದರು.

ಕಲಬುರಗಿಯ ಶರಣಬಸವ ವಿಶ್ವವಿದ್ಯಾಲಯ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಹಾಗೂ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘ ಇವುಗಳ ಸಂಯುಕ್ತಾಶ್ರಯದಲ್ಲಿ ಗುರುವಾರ ಶರಣಬಸವ ವಿಶ್ವವಿದ್ಯಾಲಯದ ಪತ್ರಿಕೋದ್ಯಮ ಮತ್ತು ಸಮೂಹ ಸಂವಹನ ವಿಭಾಗದ ಅನುಭವ ಮಂಟಪದಲ್ಲಿ ಆಯೋಜಿಸಿದ ಪತ್ರಿಕಾ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಹಿಂದೆಲ್ಲ ಪತ್ರಿಕೋದ್ಯಮ ವಿದ್ಯಾರ್ಥಿಗಳಿಗೆ ಮುಂದಿನ ಭವಿಷ್ಯ ಕಟ್ಟಿಕೊಳ್ಳಲು ಪತ್ರಿಕೆ, ಸುದ್ದಿ ವಾಹಿನಿಗಳನ್ನೆ ಅವಲಂಬಿಸಬೇಕಿತ್ತು. ಇದೀಗ ಸಾಮಾಜಿಕ ಮಾಧ್ಯಮ ವೇಗವಾಗಿ ಬೆಳೆಯುತ್ತಿರುವುದರಿಂದ ಇಲ್ಲಿಯೂ ಉದ್ಯೋಗದ ಅವಕಾಶ ಹೆಚ್ಚಿದೆ. ಅದರಲ್ಲಿಯೂ ವೃತ್ತಿಪರತೆ ಮೈಗೂಡಿಸಿಕೊಂಡವರಿಗೆ, ಭಾಷೆಯ ಮೇಲೆ ಪ್ರಭುದ್ಧತೆ ಇರುವವರಿಗೆ ಅವಕಾಶ ಹೆಚ್ಚು. ಕಾರ್ಪೋರೇಟ್ ಕಂಪನಿಯಲ್ಲಿ ಸಾರ್ವಜನಿಕ ಸಂಪರ್ಕಾಧಿಕಾರಿಯಾಗಿಯೂ ಕೆಲಸ ಮಾಡಬಹುದಾಗಿದೆ. ಇದಲ್ಲದೆ ಫೋಟೋ ಎಡಿಟಿಂಗ್, ಡಿಸೈನ್, ಜಾಹೀರಾತು ಅನೇಕ ವಿಭಾಗದಲ್ಲಿ ಉದ್ಯೋಗ ಇವೆ ಎಂದರು.

ಸುದ್ದಿ ವಾಹಿನಿ ಬಂದ ಮೇಲೆ ಮುದ್ರಣ ಮಾಧ್ಯಮದ ಕಥೆ ಮುಗಿಯಿತು ಎನ್ನುತ್ತಿದ್ದರು. ಅದರೆ ಇಂದಿಗೂ ವಿದ್ಯುನ್ಮಾನ ವಾಹಿನಿಕ್ಕಿಂತ ಮುದ್ರಣ ಮಾಧ್ಯಮ ತನ್ನ ಸಾಮಾಜಿಕ ಜವಾಬ್ದಾರಿ ಬಹಳ ಎಚ್ಚರಿಕೆಯಿಂದ ನಿಭಾಯಿಸುತ್ತಿದೆ ಎಂದು ಹಲವಾರು ಪ್ರಕರಣದಲ್ಲಿ ಸುಪ್ರೀಂಕೋರ್ಟ್ ಅಭಿಪ್ರಾಯಪಟ್ಟಿದೆ. ಹೀಗಾಗಿ ಪತ್ರಿಕಾ ವೃತ್ತಿಗೆ ಬರುವ ಪ್ರತಿಯೊಬ್ಬ ವಿದ್ಯಾರ್ಥಿ ಪ್ರತಿ ದಿನ ದಿನಪತ್ರಿಕೆಗಳನ್ನು ಓದುವ ಮೂಲಕ ಮತ್ತು ಜ್ಞಾನ ಹೆಚ್ಚಿಸಿಕೊಳ್ಳಬೇಕೆಂದ ಅವರು, ತನಿಖಾ ವರದಿ ಮಾಡುಚಾದ ದಾಖಲೆ ಇಟ್ಟುಕೊಳ್ಳುವುದು ಒಳಿತು ಎಂದರು. ಇಂದು ನಿಜ ಸುದ್ದಿಗಾಗಿ ಪರಿಶ್ರಮ ಪಡಬೇಕಿದೆ. ಫ್ಯಾಕ್ಟ್ ನ್ಯೂಸ್ ನೀಡಬೇಕಾದ ನಾವು ಸುದ್ದಿ ಮಾಡಲು ಫ್ಯಾಕ್ಟ್ ಚೆಕ್ ಮಾಡುವ ಪರಿಸ್ಥಿತಿಯಲ್ಲಿದ್ದೇವೆ. ಪತ್ರಕರ್ತನಾದವನು ಜೀವಪರ, ಜನಪರವಾಗಿದ್ದು, ಪತ್ರಿಕಾ ಧರ್ಮದ ಮೌಲ್ಯ ಎತ್ತಿ ಹಿಡಿಯಬೇಕು. 181 ದೇಶಗಳ ಪೈಕಿ ಪತ್ರಿಕಾ ಸ್ವಾತಂತ್ರ್ಯದಲ್ಲಿ ಭಾರತ ಇಂದು 151ನೇ ಸ್ಥಾನದಲ್ಲಿದೆ. ಅದೇ ರೀತಿ ವಾಕ್ ಸ್ವಾತಂತ್ರ್ಯದಲ್ಲಿ 109ನೇ ಸ್ಥಾನ. ವಿಶ್ವದ ಬಲಿಷ್ಠ ಪ್ರಜಾಪ್ರಭುತ್ವದಲ್ಲಿ ಪತ್ರಿಕಾ ಮತ್ತು ವಾಕ್ ಸ್ವಾತಂತ್ರ್ಯ ಉಳಿಸುಚ ಜವಾಬ್ದಾರಿ ಪತ್ರಕರ್ತರ ಮೇಲಿದೆ. ಪತ್ರಿಕಾ ದಿನಾಚರಣೆಯ ಈ ಸಂದರ್ಭದಲ್ಲಿ ನಾವೆಲ್ಲರು ಇದನ್ನು ಅವಲೋಕನ ಮಾಡಿಕೊಳ್ಳಲು ಇದು ಸೂಕ್ತ ಕಾಲ ಎಂದು ಅಭಿಪ್ರಾಯಪಟ್ಟರು

ಕೌಶಲ್ಯಕ್ಕೆ ಮಹತ್ವ ಕೊಡಿ:

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಕಲಬುರಗಿ ಉಪನಿರ್ದೇಶಕ ಜಡಿಯಪ್ಪ ಗೆದ್ಲಗಟ್ಟಿ ಮಾತನಾಡಿ, ಕೌಶಲ್ಯ ಇದ್ದಲ್ಲಿ ಮಾತ್ರ ಮನುಷ್ಯನಿಗೆ ಬೆಲೆ ಇದೆ. ಹೀಗಾಗಿ ನಿಮ್ಮ ಆಸಕ್ತಿಯ ವಿಷಯದಲ್ಲಿ ಕೌಶಲ್ಯತೆ ಹೆಚ್ಚಿಸಿಕೊಳ್ಳಬೇಕು. ಕಥೆ, ಕಾದಂಬರಿ, ಸಾಹಿತ್ಯ ಓದು ವೃತ್ತಪರತೆ ಹೆಚ್ಚಿಸಲು ಅನುಕೂಲವಾಗಲಿದೆ. ಇನ್ನು ಮೊಬೈಲ್ ಬಳಕೆ ಸಿಮಿತವಾಗಿ ಬಳಸಿ ಅನಗತ್ಯ ಅದರಲ್ಲಿಯೇ ಕಳೆದು ಹೋಗಬೇಡಿ ಎಂದು ವಿದ್ಯಾರ್ಥಿಗಳಿಗೆ ಕಿವಿಮಾತು ಹೇಳಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಶರಣಬಸವ ವಿಶ್ವವಿದ್ಯಾಲಯದ ಕುಲಪತಿ ಡಾ. ಅನಿಲಕುಮಾರ ಜಿ. ಬಿಡವೆ ಮಾತನಾಡಿ, ಇಂದು ಯಾವುದೇ ಒಂದು ಗಣ್ಯರ ಭಾಷಣವನ್ನು ಎ.ಐ. ತಂತ್ರಜ್ಞಾನ ಸಹಾಯದಿಂದ ಕ್ಷಣಾರ್ಧದಲ್ಲಿ ತಮಗೆ ಬೇಕಾದ ಭಾಷೆಯಲ್ಲಿ ಭಾಷಾಂತರ ಮಾಡಬಹುದಾಗಿದೆ. ಇಷ್ಟರ ಮಟ್ಟಿಗೆ ತಂತ್ರಜ್ಞಾನ ಬೆಳೆದಿದ್ದು, ಇದನ್ನು ಸದ್ಬಳಕೆ ಮಾಡಿಕೊಳ್ಳಬೇಕು. ಶರಣಬಸವ ವಿ.ವಿ. ಶೈಕ್ಷಣಿಕ ಪಠ್ಯಕ್ರಮದ ಜೊತೆ ಮಾನವೀಯ ಮೌಲ್ಯ ಬಿತ್ತುವ ಕೆಲಸ ಮಾಡುತ್ತಿದೆ ಎಂದರು.

ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ಪ್ರಧಾನ ಕಾರ್ಯದರ್ಶಿ ಸಂಗಮನಾಥ ರೇವತಗಾಂವ ಮಾತನಾಡಿ, ಶರಣಬಸವ ವಿ.ವಿ. ಪತ್ರಿಕೋದ್ಯಮ ವಿಷಯದಲ್ಲಿ ಚಲನಶೀಲವಾಗಿ ಕಾರ್ಯನಿರ್ವಹಿಸುತ್ತಿದೆ. ಪತ್ರಿಕೋದ್ಯಮ ವಿದ್ಯಾರ್ಥಿಗಳು ಪತ್ರಿಕೆ ಓದುವ ಸಂಸ್ಕೃತಿ ಬೆಳೆಸಿಕೊಳ್ಳಬೇಕು ಎಂದು ಕರೆ ನೀಡಿದರು.

ಇದೇ ಸಂದರ್ಭದಲ್ಲಿ ಸೇಡಂ ಪತ್ರಕರ್ತರ ಸಂಘದಿಂದ ಪತ್ರಿಕಾ ಕ್ಷೇತ್ರದಲ್ಲಿನ ಗಣನೀಯ ಸೇವೆಗೆ ಕೊಡಮಾಡುವ ಬಿ.ಮಹಾದೇವಪ್ಪ ಪ್ರಶಸ್ತಿಗೆ ಭಾಜನರಾಗಿರುವ ವಿಶ್ವವಿದ್ಯಾಲಯದ ಸಮಾಜ ನಿಕಾಯದ ಡೀನ್ ಟಿ.ವಿ.ಶಿವಾನಂದನ್ ಅವರನ್ನು ಕುಲಪತಿ ಡಾ.ಅನೀಲಕುಮಾರ್ ಜಿ. ಬಿಡವೇ ಸೇರಿದಂತೆ ಗಣ್ಯರು, ವಿಭಾಗದ ಪ್ರಾಧ್ಯಾಪಕವೃಂದ ಅವರನ್ನು ಸನ್ಮಾನಿಸಿ ಗೌರವಿಸಲಾಯಿತು.

ಕಾರ್ಯಕ್ರಮದಲ್ಲಿ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಜಿಲ್ಲಾಧ್ಯಕ್ಷ ಬಾಬುರಾವ್ ಯಡ್ರಾಮಿ ಸೇರಿದಂತೆ ಪತ್ರಿಕೋದ್ಯಮ ವಿಭಾಗದ ಪ್ರಾಧ್ಯಾಪಕರು, ವಿದ್ಯಾರ್ಥಿಗಳು ಇದ್ದರು. ವಿಶ್ವವಿದ್ಯಾಲಯದ ಸಮಾಜ ನಿಕಾಯದ ಡೀನ್ ಟಿ.ವಿ.ಶಿವಾನಂದನ್ ಸರ್ವರನ್ನು ಸ್ವಾಗತಿಸಿದರು. ಪತ್ರಿಕೋದ್ಯಮ ವಿಭಾಗದ ಚೇರ ಪರ್ಸನ್ ಡಾ.ಸುನಿತಾ ಪಾಟೀಲ ನಿರೂಪಿಸಿದರು. ಚಂದ್ರಶೇಖರ ಕ- ಕ್ಕೇರಿ ವಂದಿಸಿದರು. ವಿದ್ಯಾರ್ಥಿನಿ ಸೌಮ್ಯ ಪ್ರಾರ್ಥನೆಗೈದರು.

# ಅಪ್ರಾಪ್ತ ಮಗಳ ಮೇಲೆ 3 ವರ್ಷ ನಿರಂತರ ಲೈಂಗಿಕ ದೌರ್ಜನ್ಯ : ಪಾಪಿಗೆ 3 ಜೀವಾವಧಿ ಶಿಕ್ಷೆ

ಮಲ್ಲಮ್ಮ ನುಡಿ ವಾರ್ತೆ

ತಿರುವನಂತಪುರಂ:ಜು.17: ತನ್ನ ಅಪ್ರಾಪ್ತ ಮಗಳ ಮೇಲೆ 5 ವರ್ಷದವಳಿದ್ದಾಗಿನಿಂದ 8 ವರ್ಷದ ತನಕ ಸತತ ಮೂರು ವರ್ಷಗಳ ಕಾಲ ನಿರಂತರ ಲೈಂಗಿಕ ದೌರ್ಜನ್ಯ ಎಸಗಿದವನಿಗೆ ಕೇರಳದ ಇಡುಕ್ಕಿ ಫಾಸ್ಟ್ ಟ್ರ್ಯಾಕ್ ವಿಶೇಷ ನ್ಯಾಯಾಲಯ 3 ಜೀವಾವಧಿ ಶಿಕ್ಷೆ ವಿಧಿಸಿದೆ. ಅದರ ಜೊತೆ 3 ಲಕ್ಷ ರೂ. ದಂಡ ವಿಧಿಸಲಾಗಿದೆ.

ಕರಿಮನೂರ್ ಬಳಿಯ ಬಾಡಿಗೆ ಮನೆಯಲ್ಲಿದ್ದಾಗ ಅಪರಾಧಿ ಈ ಕೃತ್ಯ ಎಸಗಿದ್ದ. 2020 ರಲ್ಲಿ ಈ ಕೃತ್ಯ ಬೆಳಕಿಗೆ ಬಂದಿತ್ತು. ನಿರಂತರ ಹೊಟ್ಟೆ ನೋವಿನಿಂದ ಬಳಲುತ್ತಿದ್ದ ಬಾಲಕಿಯನ್ನು ಚಿಕಿತ್ಸೆಗೆ ಕರೆತಂದಾಗ, ತಂದೆಯ ಕೃತ್ಯಗಳಿಂದ ನನಗೆ ಈ ಸಮಸ್ಯೆ ಆಗಿದೆಯೇ ಎಂದು ತಾಯಿಯ ಬಳಿ ಪ್ರಶ್ನಿಸಿತ್ತು. ಏನಾಯಿತು ಎಂದು ತಾಯಿ ವಿವರವಾಗಿ ಕೇಳಿದ ನಂತರ ಮತ್ತು ನಂತರದ ಕೌನ್ಸೆಲಿಂಗ್ ಸಮಯದಲ್ಲಿ ಮಗು ತನ್ನ ತಂದೆಯ ಕೃತ್ಯವನ್ನು ಹೇಳಿತ್ತು.

ಬಳಿಕ ಕರಿಮನೂರು ಪೊಲೀಸ್ ಠಾಣೆಯಲ್ಲಿ ಪೋಕ್ಸೋ ಪ್ರಕರಣ ದಾಖಲಾಗಿತ್ತು. ಈ ಪ್ರಕರಣದ ವಿಚಾರಣೆ ನಡೆಸಿದ ನ್ಯಾಯಾಲಯ ಅಪರಾಧಿಗೆ 3 ಜೀವಾವಧಿ ಶಿಕ್ಷೆ ವಿಧಿಸಿದೆ. ಈ ಬಗ್ಗೆ ಪ್ರತಿಕ್ರಿಯಿಸಿರುವ ಸಾರ್ವಜನಿಕ ಅಭಿಯೋಜಕ (ಎಸ್‌ಪಿಪಿ) ಶಿಜೋಮನ್ ಜೋಸೆಫ್, ಅಪರಾಧಿಗೆ ಸಾಯುವವರೆಗೂ ಜೈಲು ಶಿಕ್ಷೆ ವಿಧಿಸಲಾಗಿದೆ ಎಂದು ಮಾಹಿತಿ ಹಂಚಿಕೊಂಡಿದ್ದಾರೆ.

ಅಪರಾಧಿಗೆ ವಿಧಿಸಿದ ದಂಡವನ್ನು ದೌರ್ಜನ್ಯಕ್ಕೊಳಗಾದ ಬಾಲಕಿಗೆ ಕೊಡಬೇಕು. ದಂಡ ಪಾವತಿಸಲು ವಿಫಲನಾದರೆ ಹೆಚ್ಚುವರಿ 6 ತಿಂಗಳು ಜೈಲು ಶಿಕ್ಷೆ ಅನುಭವಿಸಬೇಕಾಗುತ್ತದೆ ಎಂದು ಆದೇಶದಲ್ಲಿ ಉಲ್ಲೇಖಿಸಲಾಗಿದೆ. ಸರ್ಕಾರಕ್ಕೆ ಬಾಲಕಿಗೆ ಸೂಕ್ತ ಪರಿಹಾರ ನೀಡುವಂತೆ ನ್ಯಾಯಾಲಯ ಆದೇಶಿಸಿದೆ.

# ಬೊಗನಳ್ಳಿ ಶಾಲೆಯ ಮುಖ್ಯ ಶಿಕ್ಷಕ ಶಾಲೆಗೆ ಅನಧಿಕೃತ ಗೈರು, ಅಮಾನತ್ತಿಗೆ ಆಗ್ರಹ

ಮಲ್ಲಮ್ಮ ನುಡಿ ವಾರ್ತೆ

ಅಫಜಲಪೂರ:ಜು.17:ಮಕ್ಕಳಿಗೆ ಉತ್ತಮ ಶಿಕ್ಷಣ ನೀಡಲು ಸರ್ಕಾರದ ಶಿಕ್ಷಕರಿಗೆ ಮಹತ್ತರ ಜವಾಬ್ದಾರಿ ನೀಡಿದೆ ಆದರೆ ಶಾಲೆಯ ಮುಖ್ಯ ಶಿಕ್ಷಕ ಬೇಲಿಯೇ ಎದ್ದು ಹೊಲ ಮೇಯಿದಂತೆ ಕರ್ತವ್ಯಕ್ಕೆ ಚಕ್ಕರ್ ಹಾಕುತ್ತಿರುವ ಘಟನೆ ಬೊಗನಳ್ಳಿ ಶಾಲೆಯಲ್ಲಿ ನಡೆದಿದೆ.

ತಾಲೂಕಿನ ಬೊಗನಳ್ಳಿ ಸರಕಾರಿ ಉರ್ದು ಹಿರಿಯ ಪ್ರಾಥಮಿಕ ಶಾಲೆಯ ಮುಖ ಶಿಕ್ಷಕ ರಾಜು ಚರಣಸಿಂಗ ಶಾಲೆ ಪ್ರಾರಂಭವಾಗಿ ಇಲ್ಲಿಯವರೆಗೆ ಕೇವಲ ನಾಲ್ಕು ದಿನಗಳ ವರೆಗೆ ಹಾಜರಾಗಿ ತಿಂಗಳು ಪೂರ್ತಿ ಅನಧಿಕೃತವಾಗಿ ಸುಮಾರು ಒಂದು ತಿಂಗಳು 15 ದಿನಗಳು ಕಳೆದರು ಕರ್ತವ್ಯಕ್ಕೆ ಹಾಜರಾಗಿಲ್ಲ ಈ ಕುರಿತು ಗ್ರಾಮದ ಮುಖ್ಯಸ್ಥರು ಆಕ್ರೋಶ ವ್ಯಕ್ತಪಡಿಸಿದ್ದು ನಮ್ಮ ಶಾಲೆಗೆ ಇಂತಹ ಅವಿವೇಕಿ ಶಿಕ್ಷಕ ಬೇಕಾಗಿಲ್ಲ, ಕುಡಿದು ಶಾಲೆಗೆ ಬರುವ ಪ್ರವೃತ್ತಿ ಈತನದಾಗಿದ್ದು ಮುಖ್ಯ ಶಿಕ್ಷಕರ ನಡವಳಿಕೆ ಇತರ ಶಿಕ್ಷಕರಿಗೆ ಬೇಸರ ತರಿಸಿದ್ದು

ಜೊತೆಗೆ ಯಾವದೆ ಮಾಹಿತಿ ನೀಡದೆ ಜೂನ್ 5 ನೇ ದಿನಾಂಕದಿಂದ ಜುಲೈ 18 ರ ವರೆಗೆ ಇಲ್ಲಿಯವರೆಗೆ ಕರ್ತವ್ಯಕ್ಕೆ ಅನಧಿಕೃತವಾಗಿ ಗೈರು ಹಾಜರಾಗಿದ್ದಾರೆ ಹಾಗಾಗಿ ಪದೇ ಪದೇ ಶಾಲೆಗೆ ಹಾಜರಾಗದೆ ಮಕ್ಕಳು ಭವಿಷ್ಯದ

ಜೊತೆಗೆ ಚಲ್ಲಾಟವಾಡುತಿದ್ದಾರೆ ಇಂತಹ ಶಿಕ್ಷಕನ ಮೇಲೆ ಶಿಕ್ಷಣ ಇಲಾಖೆ ಕ್ರಮ ಜರುಗಿಸಬೇಕು ಎಂದರು.

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.
Editor: Ramesh Reddy, Office Ph. No: +91 9449732000.